24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 79 | ನವದೆಹಲಿ | ಬೆಲೆ ₹10 | ಸೆಪ್ಟಂಬರ್ 14 2026 ಸೋಮವಾರ







ಕರ್ನಾಟಕದ
ನವ ನಿರ್ಮಾಣಕ್ಕೆ
ಗ್ಯಾರಂಟಿ ಸರ್ಕಾರ



ಡಾ. ಜಿ. ಪರಮೇಶ್ವರ
ಮಾನ್ಯ ಉಪ ಮುಖ್ಯಮಂತ್ರಿಗಳು



ಶ್ರೀ ಡಿ.ಕೆ. ಶಿವಕುಮಾರ್
ಸನ್ಮಾನ್ಯ ಮುಖ್ಯಮಂತ್ರಿಗಳು

15ನೇ ಸೆಪ್ಟೆಂಬರ್ 2026
ಸಮಯ: ಬೆಳಿಗ್ಗೆ 10.00 ಗಂಟೆ
ಸ್ಥಳ: ಬ್ಯಾಂಕ್ವೆಟ್‌ಹಾಲ್, ವಿಧಾನಸೌಧ, ಬೆಂಗಳೂರು.

ಯುವಜನರ ಧ್ವನಿಗೆ ಶಕ್ತಿ ತುಂಬಿ,
ಪ್ರಜಾಪ್ರಭುತ್ವವನ್ನು ಬಲಪಡಿಸೋಣ.



ಮಾನ್ಯ ಸಮಾಜ ಕಲ್ಯಾಣ ಸಚಿವರಾದ ಶ್ರೀ ಕೆ.ಹೆಚ್.ಮುನಿಯಪ್ಪ ಅವರು ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಡಿ.ಕೆ.ಶಿವಕುಮಾರ್ ಅವರನ್ನು ಅಭಿನಂದಿಸುತ್ತಿರುವುದು.

"ಪ್ರಜಾಪ್ರಭುತ್ವ ಎಂದರೆ ಕೇವಲ ಒಂದು ಸರ್ಕಾರಿ ವ್ಯವಸ್ಥೆಯಲ್ಲ. ಅದು ಮೂಲಭೂತವಾಗಿ ಒಟ್ಟಿಗೆ ಬಾಳುವ ಒಂದು ವಿಧಾನ ಮತ್ತು ಗೌರವಾನ್ವಿತ ಅನುಭವಗಳ ಸಂವಹನವಾಗಿದೆ."

— ಡಾ. ಬಿ.ಆರ್.ಅಂಬೇಡ್ಕರ್

``ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು"
-ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

ಸರ್ಕಾರದ ಕಾರ್ಯದರ್ಶಿಗಳು
ಸಮಾಜ ಕಲ್ಯಾಣ ಇಲಾಖೆ

@SWDGok

## ನಿತ್ಯ ಪಂಚಾಂಗ 14.09.2026 ಸೋಮವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ ಶ್ರಾವಣ-ಭಾದ್ರಪದ ಮಾಸ

ಭಾದ್ರಪದ ಶುದ್ಧ, ತದಿಗೆ, ಚಿತ್ತ ನಕ್ಷತ್ರ, ಗಣೇಶ ಚತುರ್ಥಿ, ಸ್ವರ್ಣಗೌರೀ ವ್ರತ, ವಿಶ್ವ ಪ್ರಥಮ ಚಿಕಿತ್ಸಾ ದಿನಾಚರಣೆ, ಹಿಂದಿ ದಿನ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಘನತೆಯಿಂದ ಬದುಕುವ ವಾತಾವರಣ ನಿರ್ಮಿಸುವುದೇ ನೈಜ ಸಂವಿಧಾನ ಮೌಲ್ಯದ ರಕ್ಷಣೆ: ರಾಜ್ಯಪಾಲ ಗೆಹ್ಲೋತ್



**ಬೆಂಗಳೂರು,ಸೆ.13:** ಸಂವಿಧಾನ ಪ್ರತಿಯೊಬ್ಬ ನಾಗರಿಕನಿಗೂ ಸಮಾನತೆ ಹಾಗೂ ಘನತೆಯಿಂದ ಬದುಕುವ ಹಕ್ಕನ್ನು ಖಾತ್ರಿಪಡಿಸಿದೆ. ವ್ಯಕ್ತಿಯ ದೈಹಿಕ, ಬೌದ್ಧಿಕ ಅಥವಾ ಮಾನಸಿಕ ಸ್ಥಿತಿ ಯಾವುದೇ ಆಗಿರಲಿ, ಪ್ರತಿಯೊಬ್ಬರೂ ಗೌರವ ಮತ್ತು ಘನತೆಯಿಂದ ಬದುಕಲು ಸಾಧ್ಯವಾಗುವಂತಹ ಸಮಾಜ ನಿರ್ಮಾಣವಾಗುವುದೇ ಸಾಂವಿಧಾನಿಕ ಮೌಲ್ಯಗಳ ನಿಜವಾದ ಯಶಸ್ಸಾಗಿದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಹೇಳಿದ್ದಾರೆ.

ಮಾತೃಶ್ರೀ ಮನೋವಿಕಾಸ ಕೇಂದ್ರದ ನೂತನ ವೈದ್ಯಕೀಯ ಕೇಂದ್ರವನ್ನು ನೆಲಮಂಗಲದ ಗೌಡಹಳ್ಳಿಯಲ್ಲಿ ರಾಜ್ಯಪಾಲರು ಉದ್ಘಾಟಿಸಿದರು. ಈ ವೇಳೆ ಪದ್ಮಶ್ರೀ ಪುರಸ್ಕೃತರಾದ ಡಾ.ಎಸ್.ಜಿ. ಸುಶೀಲಮ್ಮ, ಡಾ. ಸುರೇಶ್ ಹನಗವಾಡಿ, ಮಾತೃಶ್ರೀ ಮನೋವಿಕಾಸ ಸಂಸ್ಥೆಯ ಮಹಾಪೋಷಕ ಗೋಪಾಲ್ ಬಿ. ಹೊಸೂರು, ಎಂ.ಎನ್. ಅನುಚೇತ್, ಅಧ್ಯಕ್ಷ ಕೆ.ಬಿ. ಬೆಟ್ಟೇಗೌಡ, ಉಪಾಧ್ಯಕ್ಷ ಲೋಕೇಶ್ವರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಬಳಿಕ ರಾಜ್ಯಪಾಲ ಗೆಹ್ಲೋತ್ ಮಾತನಾಡಿ, ಸೇವೆ, ಸಹಾನುಭೂತಿ, ಒಳಗೊಳ್ಳುವಿಕೆ ಮತ್ತು ಸ್ವಾವಲಂಬನೆಯ ಹೊಸ ಅಧ್ಯಾಯ ಚಿಕಿತ್ಸಾ ಕೇಂದ್ರದ ಉದ್ಘಾಟನೆಯಿಂದ ಆರಂಭವಾಗಿದೆ. ಭಾರತೀಯ ಸಂಸ್ಕೃತಿ, ಮಾನವೀಯ ಸೇವೆಗೆ ಮಹತ್ವ ನೀಡಿದೆ. ಪರೋಪಕಾರಿಯಾಗಿ ಬದುಕುವುದು ಸಂಸ್ಕೃತಿಯ ಮಹತ್ವದ ಮೌಲ್ಯವಾಗಿದೆ. ಯಾವುದೇ ನಿರೀಕ್ಷೆ ಇಲ್ಲದೆ ಮಾಡುವ ಸೇವೆ ಭಗವಂತನಿಗೆ ಸಲ್ಲಿಸುವ ಸೇವೆಯಂತಿದೆ. ಈ ಹಿನ್ನೆಲೆಯಲ್ಲಿ ಪ್ರತಿಯೊಬ್ಬರೂ ಇಂತಹ ಮಾನವೀಯ ಕಾರ್ಯಗಳಿಗೆ ಪ್ರೋತ್ಸಾಹ ನೀಡುವ ಜೊತೆಗೆ ಸೇವಾ ಕಾರ್ಯಗಳಲ್ಲಿ ತೊಡಗಿಸಿಕೊಳ್ಳುವ ಅಗತ್ಯವಿದೆ ಎಂದರು.

ತಾವು 2014ರಿಂದ 2021ರ ವರೆಗೆ ಕೇಂದ್ರ ಸಚಿವರಾಗಿ ಸೇವೆ ಸಲ್ಲಿಸಿದ ಅವಧಿಯಲ್ಲಿ ದಿವ್ಯಾಂಗರ ಸಬಲೀಕರಣಕ್ಕಾಗಿ ಹಲವು ಕಾರ್ಯಕ್ರಮಗಳನ್ನು ಜಾರಿ ಮಾಡಲಾಗಿತ್ತು. ಈ ಅವಧಿಯಲ್ಲಿ ದಿವ್ಯಾಂಗರ ಸಬಲೀಕರಣ ಇಲಾಖೆ 10 ವಿಶ್ವ ದಾಖಲೆಗಳನ್ನು ನಿರ್ಮಿಸಿರುವುದು ಗಮನಾರ್ಹ ಸಾಧನವಾಗಿದೆ. ಸಬ್ ಕಾ ಸಾಥ್ ಸಬ್ ಕಾ ವಿಕಾಸ್ ಆಶಯದೊಂದಿಗೆ ಕೇಂದ್ರ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ ಎಲ್ಲರನ್ನೂ ಒಳಗೊಂಡ ಸಮಾಜ ನಿರ್ಮಾಣಕ್ಕೆ ಹಲವು ಮಹತ್ವದ ಕ್ರಮಗಳನ್ನು ಕೈಗೊಂಡಿದೆ ಎಂದು ಹೇಳಿದರು.

# ಸಮಾಜದಲ್ಲಿ ಅಶಾಂತಿ ಮೂಡಿಸಲು ಬಿಜೆಪಿ ಕುತಂತ್ರ: ಸಿಎಂ ಡಿ.ಕೆ.ಶಿವಕುಮಾರ್ ಆರೋಪ

- ಬಿಜೆಪಿಯಿಂದ ಕೋಮುಭಾವನೆ ಪ್ರಚೋದನೆ: ಸಮಾಜಘಾತುಕ ಶಕ್ತಿಗಳ ಬಳಕೆ
- ಶಾಂತಿಯುತ ಗಣೇಶ ಹಬ್ಬ ಆಚರಣೆ ಖಾತರಿಗೆ ಪೊಲೀಸರಿಗೆ ಸೂಚನೆ
- ಅಧಿಕಾರ ದುರುಪಯೋಗ ಮಾಡಲ್ಲ, ಯಾರಿಗೂ ನಿರ್ಬಂಧ ಹೇರಲ್ಲ

**ಬೆಂಗಳೂರು, ಸೆ. 13:** "ಸಮಾಜದಲ್ಲಿ ಅಶಾಂತಿ ಮೂಡಿಸಲು ಕುತಂತ್ರ ನಡೆಯುತ್ತಿದ್ದು, ಬಿಜೆಪಿ ಸಮಾಜ ಘಾತುಕ ಶಕ್ತಿಗಳ ಬಳಕೆ ಮಾಡುತ್ತಿದ್ದಾರೆ. ಹೀಗಾಗಿ ಎಚ್ಚರಿಕೆಯಿಂದ ಇರಿ ಎಂದು ಪೊಲೀಸರಿಗೆ ಸೂಚಿಸಿದ್ದೇವೆ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ತಿಳಿಸಿದರು. ಕೆಪಿಸಿಸಿ ಕಚೇರಿಯಲ್ಲಿ ಮಾಧ್ಯಮಗಳ ಪ್ರಶ್ನೆಗೆ ಶಿವಕುಮಾರ್ ಅವರು ಭಾನುವಾರ ಪ್ರತಿಕ್ರಿಯೆ ನೀಡಿದರು.

ಗಣೇಶೋತ್ಸವ ಆಚರಣೆಗೆ ಸರ್ಕಾರ ಅನೇಕ ನಿರ್ಬಂಧ ಹೇರಿದೆ ಎಂಬ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಅವರ ಹೇಳಿಕೆ ಬಗ್ಗೆ ಕೇಳಿದಾಗ, "ಅವರು ಈ ವಿಚಾರದಲ್ಲಿ ಕೋಮು ಪ್ರಚೋದನೆ ಮಾಡುತ್ತಿದ್ದಾರೆ. ಗಣೇಶ ಹಬ್ಬವನ್ನು ಬಹಳ ಶಾಂತಿಯುತವಾಗಿ ಆಚರಣೆ ಮಾಡಬೇಕು. ಮೆರವಣಿಗೆ ಹೋಗುವಾಗ ಶಿಸ್ತು ಪಾಲನೆ ಆಗಬೇಕು, ವಿದ್ಯುತ್ ಕಂಬ, ತಂತಿಗಳ ಬಗ್ಗೆ ಎಚ್ಚರ ವಹಿಸಬೇಕು" ಎಂದರು.

"ಅವರು ಏನಾದರೂ ಮಾಡಲಿ. ಗಣೇಶ ಬಿಜೆಪಿಯವರ ಆಸ್ತಿಯಲ್ಲ. ಬಾಲಗಂಗಾಧರ ತಿಲಕರು ಆರಂಭಿಸಿದ ಆಚರಣೆ ನಡೆದುಕೊಂಡು ಬರುತ್ತಿದೆ. ನಾವು ಹಬ್ಬಕ್ಕೆ ರಜೆ ನೀಡಿ, ಹಬ್ಬ ಆಚರಣೆಗೆ ಪ್ರೋತ್ಸಾಹ ನೀಡುತ್ತಿದ್ದೇವೆ. ಅಶೋಕ್ ಅವರು ಮೈಸೂರಿನ ಟಿ.ನರಸೀಪುರ ಪೊಲೀಸ್ ಠಾಣೆಗೆ ಹೋಗುತ್ತಿದ್ದಾರೆ ಎಂದು ಕೇಳಿದಾಗ, "ಅವರು ಎಲ್ಲಿಗಾದರೂ ಹೋಗಲಿ. ಏನಾದರೂ ಮಾಡಲಿ. ಸುಳ್ಳೇ ಬಿಜೆಪಿಯವರ ಮನೆ ದೇವರು. ಪೊಲೀಸ್ ಠಾಣೆಗೆ ಯಾಕೆ ಹೋಗುತ್ತಿದ್ದಾರೆ? ಇಲ್ಲದ ವಿಚಾರ ಸೃಷ್ಟಿಸುವ ಪ್ರಯತ್ನ ಮಾಡುತ್ತಿದ್ದಾರೆ. ಅವರು ಗೃಹ ಸಚಿವರಾಗಿದ್ದವರು. ಅವರ ಪರಿಮಿತಿ ಏನು ಎಂದು ಅರಿಯಲಿ" ಎಂದು ತಿರುಗೇಟು ನೀಡಿದರು.

**ಅಧಿಕಾರ ದುರುಪಯೋಗ ಮಾಡಿಕೊಂಡು ಯಾರಿಗೂ ನಿರ್ಬಂಧ ಹೇರಲ್ಲ:** "ನಾವು ಬಿಜೆಪಿಯವರ ಸಭೆಗಳಿಗೆ ನಿಯಂತ್ರಣ ಹಾಕುವುದಿಲ್ಲ. ಅವರು ಕಾನೂನು ಚೌಕಟ್ಟಿನಲ್ಲಿ ಎಲ್ಲಿ ಬೇಕಾದರೂ ತಮ್ಮ ರಾಜಕೀಯ ಸಭೆ ಮಾಡಬಹುದು. ಬಿಜೆಪಿ ಅಧ್ಯಕ್ಷರು ಅನಗತ್ಯವಾಗಿ ಸುಳ್ಳು ಹೇಳಿಕೆ ನೀಡುತ್ತಿದ್ದಾರೆ. ಕಾನೂನು ವ್ಯಾಪ್ತಿಯಲ್ಲಿ ಅವರು ಏನಾದರೂ ಮಾಡಬಹುದು, ಏನಾದರೂ ಹೇಳಬಹುದು. ಅವರು ಯಾವ ಮೈದಾನದಲ್ಲಿ ಕಾರ್ಯಕ್ರಮ ಮಾಡಿದರೂ ಅವರಿಗೆ ಅನುಮತಿ ನೀಡಿ ಎಂದು ನಾನೇ ಹೇಳಿರುವೆ. ಅಧಿಕಾರ ದುರುಪಯೋಗ ಮಾಡಿಕೊಂಡು ಯಾರಿಗೂ ನಿರ್ಬಂಧ ಹೇರುವುದಿಲ್ಲ. ಅದು ನಮ್ಮ ಕಾರ್ಯವೈಖರಿಯಲ್ಲ" ಎಂದು ಸ್ಪಷ್ಟಪಡಿಸಿದರು.

# 90ಕ್ಕೂ ಹೆಚ್ಚು ಆಸ್ಪತ್ರೆಗಳಿಗೆ ನಕಲಿ ಕ್ಯಾನ್ಸರ್ ಔಷಧ ವಿತರಣೆ ಫಾರ್ಮಸಿ ಮಾಲೀಕನ ಬಂಧನ

**ಬೆಂಗಳೂರು,ಸೆ.13:** ರಾಜಧಾನಿ ಬೆಂಗಳೂರಿನ 90ಕ್ಕೂ ಹೆಚ್ಚು ಆಸ್ಪತ್ರೆಗಳು ಮತ್ತು ಕ್ಲಿನಿಕ್‌ಗಳಿಗೆ ನಕಲಿ ಹಾಗೂ ಅವಧಿ ಮುಗಿದ ಕ್ಯಾನ್ಸರ್ ಮತ್ತು ಜೀವ ರಕ್ಷಕ ಗಂಭೀರ ಸ್ವರೂಪದ ಔಷಧಗಳನ್ನು ಪೂರೈಸುತ್ತಿದ್ದ ಬೃಹತ್ ಜಾಲವನ್ನು ಬೆಂಗಳೂರು ನಗರ ಪೊಲೀಸರ ವಿಶೇಷ ತನಿಖಾ ತಂಡ (ಎಸ್‌ಐಟಿ) ಹಾಗೂ ಔಷಧ ನಿಯಂತ್ರಣ ಇಲಾಖೆ ಜಂಟಿಯಾಗಿ ಪತ್ತೆ ಹಚ್ಚಿವೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನಗರದ ಮಿನರ್ವ ಸರ್ಕಲ್ ಬಳಿ ಇರುವ ಕೃಪಾ ಹೆಲ್ತ್‌ಕೇರ್ ಎಂಬ ಫಾರ್ಮಸಿಯ ಮಾಲೀಕ ವೀರೇಶ್ ಕುಮಾರ್ ಜೈನ್ ಎಂಬಾತನನ್ನು ಎಸ್‌ಐಟಿ ಅಧಿಕಾರಿಗಳು ಬಂಧಿಸಿದ್ದಾರೆ.

ಆಗಸ್ಟ್ 18ರಂದು ಬೆಂಗಳೂರು ದಕ್ಷಿಣ ಜಿಲ್ಲೆಯ ಬಿಡದಿ ಹಾಗೂ ದೊಡ್ಡೇರಿ ಪ್ರದೇಶದ ತೋಟದಮನೆಯಮೇಲೆ ದಾಳಿ ನಡೆಸಿದ್ದ ಅಧಿಕಾರಿಗಳು, ಸುಮಾರು 5 ಕೋಟಿ ಮೌಲ್ಯದ ನಕಲಿ ಔಷಧಗಳು, ನಕಲಿ ಬಿಲ್ಲುಗಳು ಹಾಗೂ ಇಂಜೆಕ್ಷನ್ ಭರ್ತಿ ಮಾಡುವ ಉಪಕರಣಗಳನ್ನು ಜಪ್ತಿ ಮಾಡಿದ್ದರು.

ಈ ಪ್ರಕರಣದ ಬೆನ್ನುಹತ್ತಿದ ತನಿಖಾಧಿಕಾರಿಗಳು, ಕರ್ನಾಟಕ, ಹರಿಯಾಣ, ಹಿಮಾಚಲ ಪ್ರದೇಶ, ತಮಿಳುನಾಡು ಹಾಗೂ ಮಹಾರಾಷ್ಟ್ರ ಸೇರಿದಂತೆ 10ಕ್ಕೂ ಹೆಚ್ಚು ಪ್ರದೇಶಗಳಲ್ಲಿ ಸರಣಿ ದಾಳಿ ನಡೆಸಿ ಪೂರೈಕೆ ಜಾಲವನ್ನು ತನಿಖೆಗೊಳಪಡಿಸಿದ್ದರು. ಈ ಲಿಂಕ್ ಆಧಾರದ ಮೇಲೆ ಮಿನರ್ವ ಸರ್ಕಲ್‌ನಲ್ಲಿರುವ ಕೃಪಾ ಹೆಲ್ತ್‌ಕೇರ್ ಮೇಲೆ ದಾಳಿ ನಡೆಸಿ ಬೃಹತ್ ಪ್ರಮಾಣದ ನಕಲಿ ಔಷಧಗಳನ್ನು ವಶಪಡಿಸಿಕೊಳ್ಳಲಾಗಿದೆ.

ಖ್ಯಾತ ಕಂಪನಿಗಳ ದುಬಾರಿ ಕ್ಯಾನ್ಸರ್ ಹಾಗೂ ಜೀವರಕ್ಷಕ ಔಷಧಗಳನ್ನು ಶೇ.50 ರಷ್ಟು ರಿಯಾಯಿತಿ ದರದಲ್ಲಿ ಆಸ್ಪತ್ರೆಗಳು ಹಾಗೂ ಕ್ಲಿನಿಕ್‌ಗಳಿಗೆ ಈ ಜಾಲವು ಆಫರ್ ನೀಡುತ್ತಿತ್ತು. ಕಡಿಮೆ ಬೆಲೆಯ ಸಾಮಾನ್ಯ ಔಷಧಗಳಿಗೆ ಪ್ರಸಿದ್ಧ ಕಂಪನಿಗಳ ನಕಲಿ ಲೇಬಲ್ ಹಾಕಿ ಮಾರಾಟ ಮಾಡಲಾಗುತ್ತಿತ್ತು. ಜೊತೆಗೆ, ಅವಧಿ ಮುಗಿದ ಔಷಧಗಳನ್ನು ಹೊಸ ಕಂಟೈನರ್‌ಗಳಿಗೆ ತುಂಬಿ ನಕಲಿ ಲೇಬಲ್ ಹಚ್ಚಿ ಚಲಾವಣೆಗೆ ಬಿಡಲಾಗುತ್ತಿತ್ತು.

ನಗರದ ಮಿನರ್ವ ಸರ್ಕಲ್‌ನಲ್ಲಿದ್ದ ಕೃಪಾ ಹೆಲ್ತ್‌ಕೇರ್ ಮುಖ್ಯ ಸಂಗ್ರಹಣಾ ಕೇಂದ್ರವಾಗಿ ಕೆಲಸ ಮಾಡುತ್ತಿದ್ದು, ಇಲ್ಲಿಂದ ನಗರದ ವಿವಿಧ ಆಸ್ಪತ್ರೆಗಳು ಹಾಗೂ ಮೆಡಿಕಲ್ ಶಾಪ್‌ಗಳಿಗೆ ಔಷಧ ಸರಬರಾಜಾಗುತ್ತಿತ್ತು. ಬಂಧಿತ ವೀರೇಶ್ ಕಳೆದ 5 ವರ್ಷಗಳಿಂದ ಈ ದಂಧೆ ನಡೆಸುತ್ತಿದ್ದಾನೆ ಎನ್ನಲಾಗಿದ್ದು, ಪ್ರಕರಣದ ಮುಖ್ಯ ಸೂತ್ರಧಾರಿ ಎನ್ನಲಾದ ಪ್ರಶಾಂತ್ ಎಂಬಾತ ತಲೆಮರೆಸಿಕೊಂಡಿದ್ದಾನೆ. 15ಕ್ಕೂ ಹೆಚ್ಚು ಮೆಡಿಕಲ್ ರೆಪ್ರೆಸೆಂಟೇಟಿವ್‌ಗಳು ಈ ನಕಲಿ ಔಷಧಗಳ ಪೂರೈಕೆಯಲ್ಲಿ ಭಾಗಿಯಾಗಿವೆ.

# ಬಿಜೆಪಿ ತೊರೆದು ಕಾಂಗ್ರೆಸ್ ಸೇರಿದ ನೆ.ಲ.ನರೇಂದ್ರ ಬಾಬು



**ಬೆಂಗಳೂರು, ಸೆ.13:** ಮಾಜಿ ಶಾಸಕ ನೆ.ಲ.ನರೇಂದ್ರ ಬಾಬು ಬಿಜೆಪಿ ತೊರೆದು ಇಂದು ಕಾಂಗ್ರೆಸ್‌ಗೆ ಸೇರ್ಪಡೆಯಾದರು.

ಕೆಪಿಸಿಸಿಯ ಭವನದಲ್ಲಿ ನಡೆದ ಭಾರತ್ ಜೋಡೋ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್, ಸಚಿವ ರಾಮಲಿಂಗಾರೆಡ್ಡಿ, ಮಾಜಿ ಸಚಿವರಾದ ರಾಣಿ ಸತೀಶ್, ಎಚ್.ಎಂ.ರೇವಣ್ಣ, ವಿಧಾನ ಪರಿಷತ್ ಮಾಜಿ ಸದಸ್ಯರಾದ ಪಿ.ಆರ್.ರಮೇಶ್, ರಮೇಶ್ ಬಾಬು, ಮುಖಂಡರಾದ ಕೇಶವಮೂರ್ತಿ, ಶಿವರಾಜ್, ಎಸ್.ಕೆ.ಸಿದ್ದಪ್ಪ ಮತ್ತಿತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಇದೇ ಸಮಯದಲ್ಲಿ ಮಾತನಾಡಿದ ಬಿ.ಕೆ.ಹರಿ ಪ್ರಸಾದ್, ಅಧಿಕಾರಕ್ಕಾಗಿ ಕೆಲವರು ಬಿಜೆಪಿ ಅಥವಾ ಬೇರೆ ಪಕ್ಷಕ್ಕೆ ಹೋಗಿರಬಹುದು. ಆದರೆ ಅಲ್ಲಿ ಅವರಿಗೆ ಅವಕಾಶಗಳು ಕಡಿಮೆ. ಹೀಗಾಗಿ ಮರಳಿ ಕಾಂಗ್ರೆಸ್‌ಗೆ ಸೇರ್ಪಡೆಯಾಗುತ್ತಿದ್ದಾರೆ ಎಂದು ಹೇಳಿದರು. ಬಿಜೆಪಿಯಲ್ಲಿ ಯಾವುದೇ ಕೋಮುಗಲಭೆಗಳಾದರೂ ಅದಕ್ಕೆ ಬಲಿಪಶುಗಳಾಗುವುದು ಬಡವರ ಮಕ್ಕಳು. ಆಯೋಧ್ಯೆಯಾತ್ರೆ, ಹಿಜಾಬ್, ಹಲಾಲ್ ನಂತಹ ಗಲಾಟೆಗಳಲ್ಲಿ ಕ್ರಿಮಿನಲ್ ಪ್ರಕರಣಕ್ಕೆ ಸಿಲುಕಿದವರು ಶೂದ್ರರ ಮಕ್ಕಳು. ಬಿ.ಎಸ್.ಯಡಿಯೂರಪ್ಪ, ಸಿ.ಟಿ.ರವಿ ಅವರ ಮಕ್ಕಳು ವಿದೇಶದಲ್ಲಿ ಓದುತ್ತಿದ್ದಾರೆ. ಬಡವರ ಮಕ್ಕಳು ಕೇಸ್ ಹಾಕಿಸಿಕೊಂಡು ಜೈಲಿನಲ್ಲಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು.

75 ವರ್ಷದಲ್ಲಿ ಕಾಂಗ್ರೆಸ್ ಏನು ಮಾಡಿದೆ ಎಂದು ಬಿಜೆಪಿಯವರು ಪ್ರಶ್ನೆ ಮಾಡುತ್ತಾರೆ. ಸ್ವಾತಂತ್ರ್ಯ ಬಂದಾಗ ದೇಶದಲ್ಲಿ 15 ವಿಶ್ವ ವಿದ್ಯಾನಿಲಯಗಳಿದ್ದವು. ಸಾಕ್ಷರತೆ ಶೇ. 11ರಷ್ಟಿತ್ತು. ಈಗ 600 ವಿಶ್ವವಿದ್ಯಾನಿಲಯಗಳಿವೆ. ಸಾಕ್ಷರತಾ ಪ್ರಮಾಣ ಶೇ.76ರ ರಷ್ಟಿದೆ. ಕಳೆದ 12 ವರ್ಷದಲ್ಲಿ ನರೇಂದ್ರ ಮೋದಿ ದ್ವೇಷ ರಾಜಕಾರಣ ಬಿಟ್ಟು ಬೇರೇನೂ ಮಾಡಿಲ್ಲ. ಜನ ಏನನ್ನೂ ಊಟ ಮಾಡಬೇಕು, ಯಾವ ಬಟ್ಟೆ ಹಾಕಬೇಕು ಎಂಬುದರಲ್ಲೇ ಹೆಚ್ಚು ಸಮಯ ಕಳೆದಿದ್ದಾರೆ ಎಂದರು.

ಪ್ರಿಯಾಂಕ್ ಖರ್ಗೆ ಮತ್ತು ಆರ್‌ಎಸ್‌ಎಸ್ ಕುರಿತು ಪುಸ್ತಕವೊಂದು ಬಿಡುಗಡೆಯಾಗಲಿದೆ. ಅದಕ್ಕೆ ತಡವಾಗಿ ಹೋದರೆ ನಾನು ಹೆದರಿಕೊಂಡಿದ್ದೇನೆ ಎಂದು ಭಾವಿಸುತ್ತಾರೆ. ಅದಕ್ಕಾಗಿ ಈ ಕಾರ್ಯಕ್ರಮ ಬಿಟ್ಟು ಅಲ್ಲಿಗೆ ತೆರಳುತ್ತಿದ್ದೇನೆ ಎಂದು ಹೇಳಿದರು. ಅರಣ್ಯ ಸಚಿವ ರಾಮಲಿಂಗಾರೆಡ್ಡಿ, ಪಕ್ಷ ಬದಲಾದರೂ ನರೇಂದ್ರ ಬಾಬು ಅವರ ಸಿದ್ಧಾಂತ ಬದಲಾಗಲಿಲ್ಲ. ಬಡವರ ಪರವಾದ ಬದ್ಧತೆ ಹೀಗೆ ಮುಂದುವರೆಯಲಿ ಎಂದರು.

ಪಕ್ಷ ಸೇರ್ಪಡೆಯಾದ ನರೇಂದ್ರ ಬಾಬು ಮಾತನಾಡಿ, 10 ವರ್ಷಗಳ ಹಿಂದೆ ನಾನು ಬಿಜೆಪಿಗೆ ಸೇರುತ್ತೇನೆ ಎಂದಾಗ, ನೀನು ರಾಜಕೀಯವಾಗಿ 10 ವರ್ಷ ಹಿಂದೆ ಉಳಿಯುತ್ತೀಯ ಎಂದು ಹೇಳಿ ಚೀಟಿ ಬರೆದುಕೊಟ್ಟಿದ್ದರು. ಅದನ್ನು ಈಗಲೂ ಇಟ್ಟುಕೊಂಡಿದ್ದೇನೆ. ಅವರು ಭವಿಷ್ಯ ಹೇಳಿದಂತೆಯೇ ಆಗಿ ಹೋಯಿತು ಎಂದು ವಿಷಾದಿಸಿದರು. ಬಿಜೆಪಿಯಲ್ಲಿ ಸಬ್ಕಾ ಸಾತ್-ಸಬ್ಕಾ ವಿಕಾಸ್ ಎಂಬುದು ಹೆಸರಿಗಷ್ಟೇ. ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರನ್ನಾಗಿ ಯಾರನ್ನು ನೇಮಿಸಿದ್ದಾರೆ ಎಂದು ನೋಡಿದರೆ, ಪರಿಸ್ಥಿತಿ ಅರ್ಥವಾಗುತ್ತದೆ. ಈವರೆಗೂ ಉಪಾಧ್ಯಕ್ಷರನ್ನು ನೇಮಿಸಿಲ್ಲ. ನ್ಯಾಯಮೂರ್ತಿ ರೋಹಿಣಿ ಅವರ ವರದಿ ಶೈತ್ಯಾಗಾರದಲ್ಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ದೇವರಾಜು ಅರಸು ಹಿಂದುಳಿದ ವರ್ಗಗಳ ಸಮುದಾಯದ ಭರವಸೆ. ಬಿಜೆಪಿಯಲ್ಲಿ ಒಬಿಸಿ ಘಟಕದ ಅಧ್ಯಕ್ಷನಾಗಿ ನಾನು ಅರಸು ಜನ ದಿನಾಚರಣೆ ಮಾಡಿದ್ದಕ್ಕೆ, ಛೀಮಾರಿ ಹಾಕಿಸಿಕೊಂಡೆ ಎಂದು ನೋವು ತೋಡಿಕೊಂಡರು. ತಮ ರಾಜಕೀಯ ಬೆಳವಣಿಗೆಗೆ ಡಿ.ಕೆ.ಶಿವಕುಮಾರ್ ಅವರ ಪಾತ್ರ ಮಹತ್ವದ್ದು. ಬಿಜೆಪಿಯಲ್ಲಿ ಬಹಳಷ್ಟು ಸ್ಥಾನಗಳು ಬಿಕರಿಯಾಗುತ್ತಿವೆ. ಕೇಂದ್ರದ ಹಲವು ಸಮಿತಿಗಳಿದ್ದರೂ ಅವುಗಳಲ್ಲಿ ಯಾರಿಗೂ ಸ್ಥಾನ ಸಿಗುತ್ತಿಲ್ಲ ಎಂದು ಹೇಳಿದರು. ಪ್ರೊ. ಚಂದ್ರೇಗೌಡರು ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಸೇರ್ಪಡೆಯಾದರು.

# ಗಣಪತಿ ಮೆರವಣಿಗೆ ಮಾರ್ಗ ನಕ್ಷೆ ವಿವಾದ: ಅಶೋಕ್ ವಿರುದ್ಧ ಸಚಿವ ಪ್ರಿಯಾಂಕ್ ಖರ್ಗೆ ವಾಗ್ದಾಳಿ



**ಬೆಂಗಳೂರು,ಸೆ.13:** ಅಹಿತಕರ ಘಟನೆಗಳಾಗದಂತೆ ಮುಂಜಾಗ್ರತಾ ಕ್ರಮವಾಗಿ ಅನುಮತಿ ನೀಡಲಾದ ರೂಟ್ ಮ್ಯಾಪ್ ನಂತೆಯೇ ಗಣಪತಿ ಮೆರವಣಿಗೆ ಸಾಗಬೇಕು ಎಂಬ ಪೊಲೀಸರ ನಿರ್ದೇಶನವೇ ಬಿಜೆಪಿಗರಿಗೆ ಧರ್ಮ ರಾಜಕಾರಣದ ರೊಟ್ಟಿ ಜಾರಿ ತುಪ್ಪಕ್ಕೆ ಬಿದ್ದಂತೆ ಭಾವಿಸಿದ್ದಾರೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ವ್ಯಂಗ್ಯವಾಡಿದ್ದಾರೆ.

ಪ್ರತಿಭಟನೆ ಎಂಬ ಸದಾರಮೆ ನಾಟಕ ಮಾಡಲು ಹಿಂದುತ್ವದ ವೇಷ ತೊಟ್ಟು ಮೈಸೂರಿನ ಟಿ. ನರಸೀಪುರಕ್ಕೆ ತೆರಳುತ್ತಿರುವ ಆರ್. ಅಶೋಕ್ ಅವರೇ, ಈ ಹಿಂದೆ ನಿಮ್ಮದೇ ಬಾಯಿಯಿಂದ ಉದುರಿದ ಅಣಿಮುತ್ತುಗಳನ್ನು ಒಮ್ಮೆ ಕೇಳಿಸಿಕೊಂಡು ಆತ್ಮವಿಮರ್ಶೆ ಮಾಡಿಕೊಳ್ಳಿ ಎಂದು ಕಿವಿ ಮಾತು ಹೇಳಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ನಿಮ್ಮದೇ ಹೇಳಿಕೆಯಂತೆ, ನೀವೀಗ "ಧರ್ಮ ರಾಜಕಾರಣ" ಶುರು ಮಾಡಿರುವುದು ನಾಯಕ ಎನಿಸಿಕೊಳ್ಳುವುದಕ್ಕಾ ಅಥವಾ ಅಭದ್ರತೆಯಲ್ಲಿರುವ ಪ್ರತಿಪಕ್ಷ ನಾಯಕನ ಸ್ಥಾನವನ್ನು ಉಳಿಸಿಕೊಳ್ಳುವುದಕ್ಕಾ ಎಂದು ಪ್ರಶ್ನಿಸಿದ್ದಾರೆ. ಅಶೋಕ್ ಅವರೇ, ಕಾನೂನು ಸುವ್ಯವಸ್ಥೆ ಕಾಪಾಡುವ ವಿಚಾರದಲ್ಲಿ ಮತ್ತು ರಾಜ್ಯದಲ್ಲಿ ಕೋಮುಸಂಘರ್ಷ ನಿಗ್ರಹಿಸುವ ವಿಷಯದಲ್ಲಿ ನಾನು ಯಾವುದೇ ರಾಜಿ ಮಾಡಿಕೊಳ್ಳುವುದಿಲ್ಲ, ಪೊಲೀಸರ ಮೇಲೆ ನಿಮ್ಮ ದರ್ಪ ದೌರ್ಜನ್ಯಗಳನ್ನು ಸಹಿಸುವುದೂ ಇಲ್ಲ ಎಂದಿದ್ದಾರೆ.

# ಕನ್ನಾಘಟ್ಟದಲ್ಲಿ ಸ್ಟಾರ್ ಚಂದ್ರು ಕುಟುಂಬಸ್ಥರಿಂದ 3 ಕೋಟಿ ರೂ. ವೆಚ್ಚದಲ್ಲಿ ಗಣಪತಿ ದೇವಾಲಯ ನಿರ್ಮಾಣ

**ನಾಗಮಂಗಲ, ಸೆ.11:** ರಾಜ್ಯದ ಅಭಿವೃದ್ಧಿಯಲ್ಲಿ ಕೃಷಿಯ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಶೇ.50ರಿಂದ 60ರಷ್ಟು ಜನರ ಬದುಕು ಕೃಷಿಯೊಂದಿಗೆ ನೇರವಾಗಿ ಅಥವಾ ಪರೋಕ್ಷವಾಗಿ ಸಂಬಂಧ ಹೊಂದಿದೆ. ಆದ್ದರಿಂದ ಆಧುನಿಕ ಕಾಲಕ್ಕೆ ತಕ್ಕಂತೆ ಯುವಕರಿಗೆ ಕೃಷಿ ವಿಜ್ಞಾನದ ಜ್ಞಾನ ನೀಡಬೇಕು ಎಂದು ಆದಿಚುಂಚನಗಿರಿ ಮಹಾಸಂಸ್ಥಾನದ ಮಠಾಧಿಪತಿ ಜಗದ್ಗುರು ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿ ಅವರು ಸಲಹೆ ನೀಡಿದರು.

ಬೆಳ್ಳೂರು ಹೋಬಳಿಯ ಕನ್ನಾಘಟ್ಟ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಶ್ರೀ ಮಹಾಗಣಪತಿ ದೇವಾಲಯದ ಪ್ರತಿಷ್ಠಾಪನಾ ಮಹೋತ್ಸವ ಹಾಗೂ ನೂತನ ದೇವಾಲಯದ ಲೋಕಾರ್ಪಣೆ ನೆರವೇರಿಸಿ ಆಶೀರ್ವಚನ ನೀಡಿದರು. ಕೃಷಿ ವಿಜ್ಞಾನಿಗಳು ಹಾಗೂ ಕೃಷಿ ವಿಜ್ಞಾನದಲ್ಲಿ ಪರಿಣತಿ ಹೊಂದಿದ ಪದವೀಧರರು ಹೆಚ್ಚಿನ ಸಂಖ್ಯೆಯಲ್ಲಿ ಹೊರಹೊಮ್ಮಬೇಕು. ರೈತರ ಬದುಕಿನಲ್ಲಿ ರಾಸುಗಳ ಆರೋಗ್ಯವೂ ಅತ್ಯಂತ ಪ್ರಮುಖವಾಗಿದೆ. ಈ ಹಿನ್ನೆಲೆಯಲ್ಲಿ ಮಂಡ್ಯದಲ್ಲಿ ಆದಿಚುಂಚನಗಿರಿ ಪಶುವೈದ್ಯಕೀಯ ಆಸ್ಪತ್ರೆ ಮತ್ತು ಕಾಲೇಜು ಆರಂಭಿಸಲಾಗುತ್ತಿದ್ದು ಅದು ಗಣೇಶ ಹಬ್ಬದ ಮುನ್ನಾದಿನದಂದೇ ಉದ್ಘಾಟನೆಯಾಗುತ್ತಿರುವುದು ಕೃಷಿ ಮತ್ತು ಪಶುಸಂಗೋಪನಾ ಕ್ಷೇತ್ರಕ್ಕೆ ಮಹತ್ವದ ಕೊಡುಗೆಯಾಗಲಿದೆ ಎಂದು ಹೇಳಿದರು.

ಎತ್ತಿನಹೊಳೆ ಯೋಜನೆಯ ಮೂಲಕ 24.1 ಟಿಎಂಸಿ ನೀರನ್ನು ತರಲು ಉದ್ದೇಶಿಸಲಾಗಿದೆ. ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ ಪ್ರದೇಶಗಳಿಗೆ ಸಮರ್ಪಕವಾಗಿ ನೀರು ಹರಿಯುವಂತಾಗಬೇಕು. ಚಲುವರಾಯಸ್ವಾಮಿ ಅವರ ಅವಧಿಯಲ್ಲಿ ಈ ಯೋಜನೆಯ ನೀರು ಜನರಿಗೆ ತಲುಪಲಿ ಎಂಬ ಆಶಯವನ್ನು ಅವರು ವ್ಯಕ್ತಪಡಿಸಿದರು.

ರಾಜ್ಯದ ಅಭಿವೃದ್ಧಿಯಲ್ಲಿ ಸರ್ಕಾರಗಳ ಕೊಡುಗೆ ಮಹತ್ವದ್ದಾಗಿದ್ದು, ಯಾವುದೇ ಯೋಜನೆ ಜನರ ಬದುಕಿಗೆ ಉಪಯೋಗವಾಗುವ ರೀತಿಯಲ್ಲಿ ಜಾರಿಯಾಗಬೇಕು. ಆದಿಚುಂಚನಗಿರಿ ಮಠವು ಧಾರ್ಮಿಕ ಸೇವೆಯ ಜೊತೆಗೆ ಶಿಕ್ಷಣ, ಕೃಷಿ, ಪಶುವೈದ್ಯಕೀಯ, ಆರೋಗ್ಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸೇವೆ ವಿಸ್ತರಿಸುತ್ತಿದ್ದು, ಸಮಾಜದ ಅಗತ್ಯಕ್ಕೆ ತಕ್ಕಂತೆ ಎಲ್ಲೆಲ್ಲಿ ಸೇವೆ ಅಗತ್ಯವೋ ಅಲ್ಲೆಲ್ಲಾ ತನ್ನ ಕಾರ್ಯವನ್ನು ಮುಂದುವರಿಸಲಿದೆ ಎಂದು ಹೇಳಿದರು.

**2028ಕ್ಕೂ ಕಾಂಗ್ರೆಸ್ ಸರ್ಕಾರ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್**

ಜಲಸಂಪನ್ಮೂಲ ಸಚಿವರು ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಚಲುವರಾಯಸ್ವಾಮಿ ಅವರು ಮಾತನಾಡಿ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಜಿಲ್ಲೆಗಳಲ್ಲಿ ನೀರಿನ ಸಮಸ್ಯೆ ತೀವ್ರವಾಗಿದೆ. ಈ ಪ್ರದೇಶಗಳಿಗೆ ನೀರು ಒದಗಿಸುವ ಉದ್ದೇಶದಿಂದ ಕೈಗೆತ್ತಿಕೊಂಡಿರುವ ಎತ್ತಿನಹೊಳೆ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ ನೀರು ಒದಗಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಕರ್ನಾಟಕದ ನೀರಿನ ಹಿತಾಸಕ್ತಿಯನ್ನು ಕಾಪಾಡುವ ನಿಟ್ಟಿನಲ್ಲಿ ಮೇಕೆದಾಟು ಯೋಜನೆಯನ್ನು ಜಾರಿಗೊಳಿಸಲು ಸರ್ಕಾರ ಬದ್ಧವಾಗಿದೆ. ರಾಜ್ಯದ ನೀರಿನ ಹಕ್ಕು ಹಾಗೂ ಜನರ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಯೋಜನೆ ಅನುಷ್ಠಾನಕ್ಕೆ ಅಗತ್ಯ ಪ್ರಯತ್ನಗಳನ್ನು ಮುಂದುವರಿಸಲಾಗುವುದು ಎಂದರು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಭಿವೃದ್ಧಿ ಕಾರ್ಯಗಳ ಜೊತೆಗೆ ಗ್ಯಾರಂಟಿ ಯೋಜನೆಗಳು ಹಾಗೂ ವಿವಿಧ ಜನಪರ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುತ್ತಿದೆ. ಕರ್ನಾಟಕದ ಅಭಿವೃದ್ಧಿ ಮಾದರಿಯತ್ತ ಇಂದು ಇಡೀ ರಾಷ್ಟ್ರವೇ ಗಮನಹರಿಸುತ್ತಿದೆ. 2028ರಲ್ಲಿಯೂ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಲಿದೆ. ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಲಿದ್ದಾರೆ ಎಂಬ ವಿಶ್ವಾಸವನ್ನು ಅವರು ವ್ಯಕ್ತಪಡಿಸಿದರು.

**2 ಸಾವಿರ ಕೋಟಿ ರೂ. ವೆಚ್ಚದಲ್ಲಿ ಬಸ್ ನಿಲ್ದಾಣಗಳ ಉನ್ನತೀಕರಣ**

ಸಾರಿಗೆ ಸಚಿವ ಬೈರತಿ ಸುರೇಶ್ ಅವರು ಮಾತನಾಡಿ, ಮಂಡ್ಯ ಜಿಲ್ಲೆಗೆ 50 ಹೊಸ ಬಸ್‌ಗಳು ಬೇಕೆಂದು ದಿನೇಶ್ ಗೂಳಿಗೌಡ ಸೇರಿದಂತೆ ಜಿಲ್ಲೆಯ ನಾಯಕರು ಮನವಿ ಮಾಡಿದ್ದಾರೆ. ಕಾಂಗ್ರೆಸ್ ಸರ್ಕಾರ ಕೊಡುವ ಕೈ. ಕೇಳಿದ್ದಕ್ಕಿಂತ ಹೆಚ್ಚಾಗಿ ಕೊಡೋದು ಕಾಂಗ್ರೆಸ್ ಸರ್ಕಾರ. ಹೀಗಾಗಿ ಮಂಡ್ಯ ಜಿಲ್ಲೆಗೆ 100 ಹೊಸ ಬಸ್‌ಗಳನ್ನು ನೀಡಲಾಗುವುದು ಎಂದರು. ರಾಜ್ಯ ಸರ್ಕಾರವೂ ಸಮಾಜದ ಎಲ್ಲಾ ವರ್ಗಗಳ ಜನರ ಕಲ್ಯಾಣಕ್ಕೆ ಆದ್ಯತೆ ನೀಡುತ್ತಿದ್ದು, ಗ್ಯಾರಂಟಿ ಯೋಜನೆಗಳಿಗೆ ಪ್ರತಿವರ್ಷ ಸುಮಾರು 56 ಸಾವಿರ ಕೋಟಿ ರೂ. ವೆಚ್ಚ ಮಾಡಲಾಗುತ್ತಿದೆ. ಕಳೆದ ಮೂರು ವರ್ಷದಲ್ಲಿ ಗ್ಯಾರಂಟಿ ಯೋಜನೆಗಾಗಿ 1.65 ಲಕ್ಷ ಕೋಟಿ ರೂ. ಖರ್ಚು ಮಾಡಲಾಗಿದೆ. ವಿದ್ಯಾರ್ಥಿಗಳ ಶಿಕ್ಷಣಕ್ಕೆ ನೆರವಾಗುವ ಉದ್ದೇಶದಿಂದ ಸುಮಾರು 50 ಲಕ್ಷ ವಿದ್ಯಾರ್ಥಿಗಳಿಗೆ ಉಚಿತ ಬಸ್‌ಪಾಸ್ ನೀಡಲಾಗುತ್ತಿದ್ದು ಇದಕ್ಕೆ ತಗುಲುವ ಸುಮಾರು 350 ಕೋಟಿ ರೂ. ಹಣವನ್ನು ರಾಜ್ಯ ಸರ್ಕಾರ ಭರಿಸುತ್ತಿದೆ ಎಂದು ತಿಳಿಸಿದರು.

ಬಸ್ ನಿಲ್ದಾಣಗಳ ಉನ್ನತೀಕರಣ ಮತ್ತು ಆಧುನೀಕರಣಕ್ಕೆ ರಾಜ್ಯ ಸರ್ಕಾರ 2 ಸಾವಿರ ಕೋಟಿ ರೂ. ಬಿಡುಗಡೆ ಮಾಡಿದೆ. ಶಕ್ತಿ ಯೋಜನೆಯ 7 ಸಾವಿರ ಕೋಟಿ ರೂ. ಹಣ ನೀಡಿದೆ. 4500 ಎಲೆಕ್ಟ್ರಿಕ್ ಬಸ್‌ಗಳನ್ನು ಖರೀದಿಸಲಾಗುತ್ತಿದೆ. ರಾಜ್ಯದ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಕಾಂಗ್ರೆಸ್ ಸರ್ಕಾರ ಮುಂದಾಗಿದೆ ಎಂದರು.

ಶಿಕ್ಷಣ, ಸಾರಿಗೆ, ಸಾಮಾಜಿಕ ಭದ್ರತೆ ಹಾಗೂ ಜನರ ಜೀವನಮಟ್ಟ ಸುಧಾರಣೆಯ ಮೂಲಕ ಸಮಾನತೆ ಮತ್ತು ಸಾಮರಸ್ಯದ ಕರ್ನಾಟಕ ನಿರ್ಮಿಸುವುದು ಸರ್ಕಾರದ ಆಶಯವಾಗಿದೆ. ಆದಿಚುಂಚನಗಿರಿ ಮಠದ ಸಮಾಜಮುಖಿ ಹಾಗೂ ಶೈಕ್ಷಣಿಕ ಸೇವೆಗಳೊಂದಿಗೆ ಸರ್ಕಾರದ ಜನಪರ ಯೋಜನೆಗಳು ಕೈಜೋಡಿಸಿದಾಗ ರಾಜ್ಯದ ಅಭಿವೃದ್ಧಿಗೆ ಮತ್ತಷ್ಟು ವೇಗ ದೊರೆಯಲಿದೆ ಎಂದು ಅವರು ಅಭಿಪ್ರಾಯಪಟ್ಟರು.

**ಕನ್ನಾಘಟ್ಟ ಗ್ರಾಮದಲ್ಲಿ ಯುವಕರಿಗೆ ಆಟದ ಮೈದಾನ ನಿರ್ಮಾಣ**

ಗೌರಿಬಿದನೂರು ಶಾಸಕ ಕೆ.ಎಚ್. ಪುಟ್ಟಸ್ವಾಮಿಗೌಡ ಅವರು ಮಾತನಾಡಿ, ಸುಮಾರು ಐದು ಎಕರೆ ಪ್ರದೇಶದಲ್ಲಿ ಗ್ರಂಥಾಲಯ ಹಾಗೂ ದೇವಸ್ಥಾನ ಸೇರಿದಂತೆ ವಿವಿಧ ಧಾರ್ಮಿಕ ಮತ್ತು ಶೈಕ್ಷಣಿಕ ಸೌಲಭ್ಯಗಳನ್ನು ನಿರ್ಮಿಸುವ ಕಾರ್ಯ ನಡೆಯುತ್ತಿದೆ. ಈ ಕಾರ್ಯಕ್ಕೆ ಗ್ರಾಮಸ್ಥರು ಹಾಗೂ ಸಾರ್ವಜನಿಕರು ಎಲ್ಲರ ಸಮ್ಮತಿಯೊಂದಿಗೆ ಜಾಗವನ್ನು ನೀಡಿರುವುದು ವಿಶೇಷವಾಗಿದ್ದು, ಜನರ ಸಹಕಾರ ಮತ್ತು ಒಗ್ಗಟ್ಟಿಗೆ ಇದು ಸಾಕ್ಷಿಯಾಗಿದೆ ಎಂದರು.

ಮುಂದಿನ ದಿನಗಳಲ್ಲಿ ಯುವಕರಿಗೆ ಹೆಚ್ಚಿನ ಅನುಕೂಲವಾಗುವಂತೆ ಇದೇ ಪ್ರದೇಶದಲ್ಲಿ ಆಟದ ಮೈದಾನವನ್ನು ನಿರ್ಮಿಸುವ ಚಿಂತನೆಯೂ ಇದೆ. ಧಾರ್ಮಿಕ ಚಟುವಟಿಕೆಗಳ ಜೊತೆಗೆ ಶಿಕ್ಷಣ, ಕ್ರೀಡೆ ಹಾಗೂ ಯುವಜನರ ಅಭಿವೃದ್ಧಿಗೆ ಅಗತ್ಯವಾದ ಸೌಲಭ್ಯಗಳನ್ನು ಕಲ್ಪಿಸುವ ಮೂಲಕ ಈ ಸ್ಥಳವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ಉದ್ದೇಶ ಹೊಂದಲಾಗಿದೆ ಎಂದು ಅವರು ಹೇಳಿದರು.

**ಮಂಡ್ಯ ಜಿಲ್ಲೆಗೆ 15 ಸಾವಿರ ಕೋಟಿ ರೂ. ಅನುದಾನ**

ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷರು ಹಾಗೂ ಶಾಸಕ ದಿನೇಶ್ ಗೂಳಿಗೌಡ ಅವರು ಮಾತನಾಡಿ, ಮಂಡ್ಯ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಕಳೆದ ಮೂರು ವರ್ಷಗಳಲ್ಲಿ ಸುಮಾರು 15 ಸಾವಿರ ಕೋಟಿ ರೂ. ಅನುದಾನವನ್ನು ವಿವಿಧ ಇಲಾಖೆಗಳ ಮೂಲಕ ಒದಗಿಸಲಾಗಿದೆ. ಜಿಲ್ಲೆಯಲ್ಲಿ ಗ್ಯಾರಂಟಿ ಯೋಜನೆಗಳಿಗಾಗಿ ಸುಮಾರು 4,958 ಕೋಟಿ ರೂ. ಹಣವನ್ನು ವೆಚ್ಚ ಮಾಡಲಾಗಿದೆ. ಕಳೆದ ಮೂರು ವರ್ಷಗಳಲ್ಲಿ ಜಿಲ್ಲೆಯ ಅಭಿವೃದ್ಧಿ ಹಾಗೂ ಜನಕಲ್ಯಾಣ ಕಾರ್ಯಕ್ರಮಗಳಿಗೆ ಒಟ್ಟಾರೆ ಸುಮಾರು 15 ಸಾವಿರ ಕೋಟಿ ರೂ.ಗೂ ಹೆಚ್ಚಿನ ಅನುದಾನ ಹರಿದುಬಂದಿದೆ ಎಂದು ಅವರು ಹೇಳಿದರು.

ಮಂಡ್ಯ ಜಿಲ್ಲೆಯಲ್ಲಿ ಒಟ್ಟು 2,126 ದೇವಾಲಯಗಳಿದ್ದು, ಅವುಗಳ ಅಭಿವೃದ್ಧಿಗೆ ಸರ್ಕಾರದ ವತಿಯಿಂದ 10 ಕೋಟಿ ರೂ. ಅನುದಾನ ನೀಡುವ ಮೂಲಕ ಮೂಲಸೌಕರ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗಿದೆ. 2025ನೇ ಸಾಲಿನಲ್ಲಿ 8.60 ಕೋಟಿ ಹಾಗೂ 2024ನೇ ಸಾಲಿನಲ್ಲಿ 6.36 ಕೋಟಿ ಅನುದಾನ ಒದಗಿಸಲಾಗಿದೆ ಎಂದು ತಿಳಿಸಿದರು.

**ಶಾಂತಿ ಸಾಮರಸ್ಯದ ಒಗ್ಗಟ್ಟು**

ದೇವಸ್ಥಾನದ ನಿರ್ಮಾತೃ ಹಾಗೂ ಸಮಾಜ ಸೇವಕರಾದ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಮಾತನಾಡಿ, ಪ್ರಾರ್ಥನೆ ಮನಸ್ಸಿಗೆ ಶಾಂತಿ ನೀಡುವ ಧಾಮವಾಗಿದ್ದು, ಇಂತಹ ಧಾರ್ಮಿಕ ಹಾಗೂ ಸಮಾಜಮುಖಿ ಕಾರ್ಯಗಳು ಸಮಾಜದಲ್ಲಿ ಶಾಂತಿ, ಸಾಮರಸ್ಯ ಮತ್ತು ಒಗ್ಗಟ್ಟನ್ನು ಬೆಳೆಸುತ್ತವೆ ಎಂದರು.

ಹಿಂದೆ ಇದೇ ಸ್ಥಳದಲ್ಲಿ ಆದಿಶಕ್ತಿ ದೇವಾಲಯವನ್ನು ನಿರ್ಮಿಸಿ ಲೋಕಾರ್ಪಣೆ ಮಾಡಲಾಗಿತ್ತು. ಪರಮಪೂಜ್ಯ ಬಾಲಗಂಗಾಧರನಾಥ ಮಹಾಸ್ವಾಮೀಜಿ ಅವರು ಅದನ್ನು ಲೋಕಾರ್ಪಣೆ ಮಾಡಿದ್ದರು. ಇದೀಗ ಶ್ರೀ ಕ್ಷೇತ್ರದಲ್ಲಿ ನೂತನ ಗಣಪತಿ ದೇವಸ್ಥಾನವನ್ನು ನಿರ್ಮಿಸಲಾಗಿದ್ದು, ಪರಮಪೂಜ್ಯ ನಿರ್ಮಲಾನಂದನಾಥ ಮಹಾಸ್ವಾಮೀಜಿ ಅವರು ಉದ್ಘಾಟಿಸಿರುವುದು ಸಂತಸದ ಸಂಗತಿಯಾಗಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಶಾಸಕರಾದ ಎಸ್.ಆರ್. ವಿಶ್ವನಾಥ್, ಶರತ್ ಬಚ್ಚೇಗೌಡ, ಉದಯ್ ಕದಲೂರು, ದರ್ಶನ್ ಪುಟ್ಟಣ್ಣಯ್ಯ, ಮಾಜಿ ವಿಧಾನಪರಿಷತ್ ಸದಸ್ಯ ಅಪ್ಪಾಜಿಗೌಡ, ಮಾಜಿ ಶಾಸಕರಾದ ಕೆ.ಬಿ.ಚಂದ್ರಶೇಖರ್, ಪ್ರಕಾಶ್, ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷ ನಾಗೇಂದ್ರ ಕುಮಾರ್, ಕೆ.ಆರ್.ಪೇಟೆ ಹಿರಿಯ ಮುಖಂಡ ದೇವರಾಜ್, ನಿವೃತ್ತ ಹಿರಿಯ ಪೊಲೀಸ್ ಅಧಿಕಾರಿ ರವಿಕಾಂತೇಗೌಡ, ಕನ್ನಾಘಟ್ಟ ಗ್ರಾಮದ ಮುಖಂಡ ವೆಂಕಟೇಶ್, ಕೆಪಿಎಸ್‌ಸಿ ಮಾಜಿ ಅಧ್ಯಕ್ಷ ಎಚ್.ಎಸ್.ಕೃಷ್ಣ ಸೇರಿದಂತೆ ಹಲವು ಗಣ್ಯರು, ಸುತ್ತಮುತ್ತಲಿನ ಗ್ರಾಮಸ್ಥರು ಹಾಜರಿದ್ದರು.



## ನೂತನ ಮಹಾಗಣಪತಿ ದೇವಾಲಯದ ಲೋಕಾರ್ಪಣೆ

ಬೆಳ್ಳೂರು ಹೋಬಳಿಯ ಕನ್ನಘಟ್ಟ ಗ್ರಾಮದಲ್ಲಿ ಸ್ಟಾರ್ ಚಂದ್ರು ಕುಟುಂಬಸ್ಥರಿಂದ 3 ಕೋಟಿ ರೂ. ವೆಚ್ಚದಲ್ಲಿ ನೂತನವಾಗಿ ನಿರ್ಮಿಸಿರುವ ಶ್ರೀ ಮಹಾಗಣಪತಿ ದೇವಾಲಯದ ಪ್ರತಿಷ್ಠಾಪನಾ ಮಹೋತ್ಸವ ಹಾಗೂ ನೂತನ ದೇವಾಲಯದ ಲೋಕಾರ್ಪಣ ಮಹೋತ್ಸವ ಸೆ.12 ಮತ್ತು 13ರಂದು ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ವಿಜೃಂಭಣೆಯಿಂದ ನೆರವೇರಿತು.

ಮಹೋತ್ಸವದ ಅಂಗವಾಗಿ ಸೆ.12ರಂದು ಬೆಳಗ್ಗೆಯಿಂದಲೇ ವೇದಘೋಷ, ಮಹಾಸಂಕಲ್ಪ, ಗಣಪತಿ ಪೂಜೆ, ಪುಣ್ಯಾಹ, ವಾಸ್ತು ಹೋಮ, ನವಗ್ರಹ ಹವನ, ಲಕ್ಷ್ಮೀ ಹವನ, ಮೃತ್ಯುಂಜಯ ಹವನ, ಮಂಡಲಾರಾಧನೆ, ಅಧಿವಾಸ ಹೋಮ, ತತ್ತ್ವ ಹೋಮ, ಪೀಠಹೋಮ, ಶಯ್ಯಾಧಿವಾಸ ಹಾಗೂ ವಿಮಾನಗೋಪುರ ಕಲಶ ಪ್ರತಿಷ್ಠಾಪನೆ ಸೇರಿದಂತೆ ವಿವಿಧ ವೈದಿಕ ಕಾರ್ಯಗಳನ್ನು ನಡೆಸಲಾಯಿತು.

ಸೆ.13ರಂದು ರತ್ನನ್ಯಾಸ, ಯಂತ್ರಸ್ಥಾಪನ, ಬಿಂಬಪ್ರತಿಷ್ಠೆ, ನೇತ್ರೋನ್ಮೀಲನ, ಪ್ರಾಣಪ್ರತಿಷ್ಠೆ, ಮಹಾಭಿಷೇಕ, ಮಹಾಕುಂಭಾಭಿಷೇಕ, ಮಹಾಮಂಗಳಾರತಿ, ಅಷ್ಟಾವಧಾನ ಸೇವೆ, ರಾಷ್ಟ್ರಾಶೀರ್ವಾದ ಹಾಗೂ ತೀರ್ಥಪ್ರಸಾದ ವಿನಿಯೋಗ ನಡೆಯಿತು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಸೆಪ್ಟಂಬರ್ 14 2026 ಸೋಮವಾರ



ನಾಡಿನ ಸಮಸ್ತ ಜನತೆಗೆ, ಓದುಗರಿಗೆ ಹಿತೈಷಿಗಳಿಗೆ ಗೌರಿ-ಗಣೇಶ ಹಬ್ಬದ ಶುಭಾಶಯಗಳು

**ಕಚೇರಿಗೆ ಬಿಡುವು**

ಹಬ್ಬದ ಪ್ರಯುಕ್ತ ಕಚೇರಿಗೆ ಸೋಮವಾರ ಬಿಡುವು ಇರುವುದರಿಂದ 15-9-2026ರ ಸಂಚಿಕೆ ಪ್ರಕಟವಾಗುವುದಿಲ್ಲ.

- ಸಂಪಾದಕರು

# ತಂತ್ರಜ್ಞಾನ ಶಸ್ತ್ರಾಸ್ತ್ರೀಕರಣ ವಿರುದ್ಧ ಪ್ರಧಾನಿ ಮೋದಿ ಎಚ್ಚರಿಕೆ

**ನವದೆಹಲಿ, ಸೆ.13: ಹೆಚ್ಚುತ್ತಿರುವ ಭೌಗೋಳಿಕ ರಾಜಕೀಯ ಉದ್ವಿಗ್ನತೆಗಳು ಜಾಗತಿಕವಾಗಿ ಸಾಮಾನ್ಯ ಜೀವನದ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಈ ಸವಾಲುಗಳನ್ನು ಎದುರಿಸಲು ಮತ್ತು ವಿಶೇಷವಾಗಿ ಜಾಗತಿಕ ದಕ್ಷಿಣದಾದ್ಯಂತ ಸಮಗ್ರ ಬೆಳವಣಿಗೆಯನ್ನು ಹೆಚ್ಚಿಸಲು ಬ್ರಿಕ್ಸ್ ಒಂದಾಗಬೇಕು ಎಂದಿದ್ದಾರೆ.**

## ಹಲವು ಜಾಗತಿಕ ನಾಯಕರ ಜೊತೆಗೆ ಮೋದಿ ದ್ವಿಪಕ್ಷೀಯ ಮಾತುಕತೆ




ಇಂದು ಬ್ರಿಕ್ಸ್ ಶೃಂಗಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ತಂತ್ರಜ್ಞಾನ ಮತ್ತು ನಿರ್ಣಾಯಕ ಖನಿಜಗಳ ಶಸ್ತ್ರಾಸ್ತ್ರೀಕರಣದ ಬಗ್ಗೆ ಗಂಭೀರ ಕಳವಳಗಳನ್ನು ವ್ಯಕ್ತಪಡಿಸಿದರು. ಇದು ಹಂಚಿಕೆಯ ಪ್ರಗತಿ ಮತ್ತು ಸಮೃದ್ಧಿಗೆ ಅಡ್ಡಿಯಾಗಬಹುದು ಎಂದು ಹೇಳಿದರು.

ಚೀನಾ ಅಧ್ಯಕ್ಷ ಷಿ ಜಿನ್ಪಿಂಗ್, ರಷ್ಯಾದ ಅಧ್ಯಕ್ಷ ವ್ಲಾದಿಮಿರ್ ಪುಟಿನ್, ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್, ಮಲೇಷ್ಯಾ ಪ್ರಧಾನಿ ಅನ್ವರ್ ಇಬ್ರಾಹಿಂ ಮತ್ತು ಇಂಡೋನೇಷ್ಯಾ ಅಧ್ಯಕ್ಷ ಪ್ರಬೋವೊ ಸುಬಿಯಾಂಟೊ ಸೇರಿದಂತೆ ಬ್ರಿಕ್ಸ್ ಗುಂಪಿನ ಉನ್ನತ ನಾಯಕರ ಸಮ್ಮುಖದಲ್ಲಿ ಮೋದಿ ಈ ಹೇಳಿಕೆಗಳನ್ನು ನೀಡಿದರು.

ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆ ಈ ನಾಲ್ಕು ಆಧಾರ ಸ್ತಂಭಗಳತ್ತ ನಾವು ಗಮನವನ್ನು ಕೇಂದ್ರೀಕರಿಸಿದ್ದೇವೆ. ನಿಮ್ಮ ಸಹಕಾರ ಮತ್ತು ಬೆಂಬಲದೊಂದಿಗೆ, ನಮ್ಮ ಹಂಚಿಕೆಯ ದೃಷ್ಟಿಕೋನವನ್ನು ಗೆಲುವು-ಗೆಲುವಿನ ಪರಿಸ್ಥಿತಿಯಾಗಿ ಪರಿವರ್ತಿಸಲು ನಮಗೆ ಸಾಧ್ಯವಾಗಿದೆ ಎಂದರು.

ಸಾಂಕ್ರಾಮಿಕ ರೋಗಗಳು, ಹವಾಮಾನ ವಿಪತ್ತುಗಳು ಮತ್ತು ಪೂರೈಕೆ ಸರಪಳಿ ಅಡಚಣೆಗಳು ಇಂದಿನ ಅಂತರ್ ಸಂಪರ್ಕಿತ ಜಗತ್ತಿನಲ್ಲಿ, ಯಾವುದೇ ಬಿಕ್ಕಟ್ಟು ಒಂದೇ ಪ್ರದೇಶಕ್ಕೆ ಸೀಮಿತವಾಗಿಲ್ಲ ಎಂಬುದನ್ನು ತೋರಿಸಿವೆ. ಆದ್ದರಿಂದ, ಬ್ರಿಕ್ಸ್ ಗುಂಪಿನೊಳಗೆ ಸ್ಥಿತಿಸ್ಥಾಪಕತ್ವವನ್ನು ಹೆಚ್ಚಿಸುವತ್ತ ನಾವು ವಿಶೇಷ ಒತ್ತು ನೀಡಿದ್ದೇವೆ. ಸವಾಲುಗಳನ್ನು ಸಕಾಲಿಕವಾಗಿ ಗುರುತಿಸುವುದು, ಅವುಗಳಿಗೆ ಸಿದ್ಧರಾಗಿರುವುದು ಮತ್ತು ತಕ್ಷಣದ ಕ್ರಮ ತೆಗೆದುಕೊಳ್ಳುವುದು ಅಷ್ಟೇ ಅವಶ್ಯಕ ಎಂದು ಅವರು ಹೇಳಿದರು.

ಬ್ರಿಕ್ಸ್ ಸಾಗಣೆ, ಪೂರೈಕೆ ಸರಪಳಿ ಸಹಕಾರ ಚೌಕಟ್ಟು ನಮ್ಮ ಪೂರೈಕೆ ಸರಪಳಿಗಳನ್ನು ಹೆಚ್ಚು ವಿಶ್ವಾಸಾರ್ಹ ಮತ್ತು ಸ್ಥಿತಿಸ್ಥಾಪಕವಾಗಿಸಲು ಸಹಾಯ ಮಾಡುತ್ತದೆ. ನಾವೀನ್ಯತೆಯ ಚೌಕಟ್ಟಿನಡಿಯಲ್ಲಿ, ಬ್ರಿಕ್ಸ್ ಇನ್‌ಕ್ಯುಬೇಟರ್ ನೆಟ್‌ವರ್ಕ್ ನಮ್ಮ ಸ್ಟಾರ್ಟ್‌ಅಪ್‌ಗಳು ಮತ್ತು ಇನ್‌ಕ್ಯುಬೇಟರ್‌ಗಳನ್ನು ಸಂಪರ್ಕಿಸುತ್ತದೆ. ಜಾಗತಿಕ ದಕ್ಷಿಣ ಎದುರಿಸುತ್ತಿರುವ ಸವಾಲುಗಳನ್ನು ಎದುರಿಸಲು ಬ್ರಿಕ್ಸ್ ಒಟ್ಟಾಗಿ ಕೆಲಸ ಮಾಡಬೇಕು. ಬ್ರಿಕ್ಸ್‌ನಲ್ಲಿ ಜಾಗತಿಕ ದಕ್ಷಿಣದ ವಿಶ್ವಾಸ ಹೆಚ್ಚಾಗಿದೆ ಎಂದು ಅವರು ಹೇಳಿದರು.

ಈ ನಡುವೆ ಪ್ರಧಾನಿ ಮೋದಿ ಕಝಕಿಸ್ತಾನ ಅಧ್ಯಕ್ಷ ಕಾಸಿಂ-ಜೊಮಾರ್ಟ್ ಟೊಕಾಯೆವ್, ಫಿಲಿಪ್ಪೀನ್ಸ್ ಅಧ್ಯಕ್ಷ ಫರ್ಡಿನಾಂಡ್ ಮಾರ್ಕೋಸ್ ಜೂನಿಯರ್, ಈಜಿಪ್ಟ್ ಅಧ್ಯಕ್ಷ ಅಬ್ದೆಲ್ ಫತಾಹ್ ಎಲ್-ಸಿಸಿ, ದಕ್ಷಿಣ ಆಫ್ರಿಕಾ ಅಧ್ಯಕ್ಷ ಸಿರಿಲ್ ರಾಮಫೋಸಾ, ಬುರುಂಡಿ ಅಧ್ಯಕ್ಷ ಎವರಿಸ್ಟೆ ನ್ದಾಯಿಶಿಮಿಯೆ, ನೈಜೀರಿಯಾ ಉಪಾಧ್ಯಕ್ಷ ಕಾಶಿಮ್ ಶೆಟ್ಟಿಮಾ, ಉಗಾಂಡಾ ಉಪಾಧ್ಯಕ್ಷ ಜೆಸ್ಸಿಕಾ ಅಲುಪೊ ಜೊತೆಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಹಲವು ಸಭೆಗಳ ಬಳಿಕ ಬ್ರಿಕ್ಸ್ ಸಭೆಯನ್ನು ಅಂತ್ಯಗೊಳಿಸಲಾಯಿತು.

### ಭಾರತ ಬಹುಧ್ರುವೀಯ ಪ್ರಪಂಚದ ಕೇಂದ್ರದಲ್ಲಿ ತನ್ನ ಸ್ಥಾನ ಹೊಂದಿದೆ

ಇತ್ತೀಚೆಗೆ ನಡೆದ 18ನೇ ಬ್ರಿಕ್ಸ್ ಶೃಂಗಸಭೆಯು ಜಾಗತಿಕ ಅಧಿಕಾರ ಕೇಂದ್ರವು ಪಾಶ್ಚಿಮಾತ್ಯ ದೇಶಗಳಿಂದ 'ಗ್ಲೋಬಲ್ ಸೌತ್' (ಅಭಿವೃದ್ಧಿಶೀಲ) ರಾಷ್ಟ್ರಗಳತ್ತ ಬದಲಾಗುತ್ತಿರುವುದಕ್ಕೆ ಪ್ರತ್ಯಕ್ಷ ಸಾಕ್ಷಿಯಾಗಿದೆ. ಜಾಗತಿಕ ಭೌಗೋಳಿಕ ರಾಜಕೀಯದಲ್ಲಿ ಭಾರತದ ರಾಜತಾಂತ್ರಿಕ ಪ್ರಭಾವ, ಸ್ವಾಯತ್ತತೆ ಮತ್ತು ಪ್ರಮುಖ ನಾಯಕತ್ವವನ್ನು ಈ ಶೃಂಗಸಭೆಯು ಜಗತ್ತಿಗೆ ಸ್ಪಷ್ಟಪಡಿಸಿದೆ. 11 ಸದಸ್ಯ ರಾಷ್ಟ್ರಗಳನ್ನು ಹೊಂದಿರುವ ಬ್ರಿಕ್ಸ್, ವಿಶ್ವದ ಶೇ.50ರಷ್ಟು ಜನಸಂಖ್ಯೆ ಮತ್ತು ಶೇ.41ರಷ್ಟು ಜಾಗತಿಕ ಜಿಡಿಪಿಯನ್ನು ಪ್ರತಿನಿಧಿಸುವ ಮೂಲಕ 'G7' ಒಕ್ಕೂಟಕ್ಕೆ ಪ್ರಬಲ ಪೈಪೋಟಿ ನೀಡುವ ಮಟ್ಟಕ್ಕೆ ಬೆಳೆದಿದೆ. ಈ ಶೃಂಗಸಭೆಯಲ್ಲಿ ಭಾರತವು ಆ ಆಶಯ ಮತ್ತು ಅಸ್ತಿತ್ವದಲ್ಲಿರುವ ಜಾಗತಿಕ ಕ್ರಮದ ನಡುವಿನ ಪ್ರಮುಖ ಸೇತುವೆಗಳಲ್ಲಿ ಒಂದಾಗಿ ತನ್ನನ್ನು ತಾನು ಸ್ಥಾಪಿಸಿಕೊಳ್ಳಲು ಪ್ರಯತ್ನಿಸಿತು. ಹಾಗೆ ಮಾಡುವ ಮೂಲಕ, ಹೊಸ ದೆಹಲಿಯನ್ನು ಉದಯೋನ್ಮುಖ ಬಹುಧ್ರುವ ವ್ಯವಸ್ಥೆಯ ಅಂಚಿನಲ್ಲಿ ಅಲ್ಲ, ಆದರೆ ಅದರ ಕೇಂದ್ರದಲ್ಲಿ ಇರಿಸಲು ಈ ಶೃಂಗಸಭೆ ನೆರವಾಗಿದೆ.

# ಕೆಪಿಎಸ್‌ಸಿ ರದ್ದು ಮಾಡಲು ಸಿಎಂಗೆ ಈಶ್ವರ ಖಂಡ್ರೆ ಮನವಿ



ಬೆಂಗಳೂರು, ಸೆ.13: ಕರ್ನಾಟಕ ಲೋಕಸೇವಾ ಆಯೋಗ (ಕೆ.ಪಿ.ಎಸ್.ಸಿ) ದ ಮೇಲೆ 1998 ರಿಂದಲೂ ಗಂಭೀರ ಆರೋಪಗಳು ಬರುತ್ತಿದ್ದು, ಇದನ್ನು ರದ್ದು ಮಾಡಿ ಯುಪಿಎಸ್ಸಿ ಮಾದರಿ ರೂಪಿಸಬೇಕು ಅಥವಾ ಕೆ.ಇ.ಎ.ಯಿಂದ ನೇಮಕಾತಿ ಮಾಡಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಈಶ್ವರ ಬಿ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆ.ಪಿ.ಎಸ್.ಸಿ. ಒಂದು ಸ್ವಾಯತ್ತ ಸಂಸ್ಥೆಯಾಗಿದ್ದು, ವಿವಿಧ ಇಲಾಖೆಯ ನೇಮಕಾತಿಯನ್ನು ಪಾರದರ್ಶಕವಾಗಿ ಮಾಡಬೇಕಾದ್ದು ಅದರ ಅಧ್ಯಕ್ಷರು ಮತ್ತು ಸದಸ್ಯರ ಜವಾಬ್ದಾರಿ. ಈ ನಿಟ್ಟಿನಲ್ಲಿ ವಿಫಲವಾಗಿರುವ ಆಯೋಗ ರದ್ದು ಮಾಡುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗಿದೆ ಎಂದು ತಿಳಿಸಿದರು.

ಪಶುವೈದ್ಯರ ನೇಮಕಾತಿ ಹಗರಣದ ಬಗ್ಗೆ ಸರ್ಕಾರ ಪಾರದರ್ಶಕವಾಗಿ ತನಿಖೆ ಮಾಡಿಸುತ್ತಿದೆ. ಅಕ್ರಮದಲ್ಲಿ ಭಾಗಿಯಾದ ತಪ್ಪಿತಸ್ಥರು ಎಷ್ಟೇ ಪ್ರಭಾವಿಗಳಾದರೂ ಅವರಿಗೆ ದಂಡನೆ ಆಗುತ್ತದೆ, ಸತ್ಯ ಹೊರಬಂದೇ ಬರುತ್ತದೆ ಎಂದರು.

ಕೆ.ಪಿ.ಎಸ್.ಸಿ. ರದ್ದಾದರೆ ಪರ್ಯಾಯ ಏನು ಎಂದು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಕೇಂದ್ರ ಲೋಕಸೇವಾ ಆಯೋಗ ಯುಪಿಎಸ್‌ಸಿ ಮಾದರಿಯಲ್ಲಿ ಪುನಾರಚನೆ ಮಾಡಬಹುದು ಇಲ್ಲವೇ ನಮ್ಮ ರಾಜ್ಯದಲ್ಲಿ ಈಗಾಗಲೇ ಅಸ್ತಿತ್ವದಲ್ಲಿರುವ ಕೆಇಎ ಗೆ. ಹೊಣೆಗಾರಿಕೆ ನೀಡಬಹುದು ಎಂದು ಅಭಿಪ್ರಾಯಪಟ್ಟರು.

ಕಷ್ಟಪಟ್ಟ ಓದಿದ ಕರ್ನಾಟಕದ ಅಭ್ಯರ್ಥಿಗಳಿಗೆ ಅನ್ಯಾಯ ಆಗದಂತೆ ಮತ್ತು ಪ್ರತಿಭಾವಂತರು ಸರ್ಕಾರಿ ಅಧಿಕಾರಿಗಳಾಗಬೇಕು, ಹಗರಣ ಮುಕ್ತವಾಗಿ ಮತ್ತು ಪಾರದರ್ಶಕವಾಗಿ ನೇಮಕಾತಿ ಆಗಬೇಕು ಎಂಬ ನಿಟ್ಟಿನಲ್ಲಿ ಉತ್ತಮವಾದ ವ್ಯವಸ್ಥೆ ಬರಬೇಕು ಎಂಬುದು ಸರ್ಕಾರದ ಹಾಗೂ ನಮ್ಮೆಲ್ಲರ ಒಮ್ಮತದ ನಿಲುವಾಗಿದೆ ಎಂದರು. ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಹಲವು ಹುದ್ದೆಗಳಿಗೆ ಈಗಾಗಲೇ ಪರೀಕ್ಷೆ ನಡೆಸಿ ನೇಮಕಾತಿ ಮಾಡಿದ ಅನುಭವ ಹೊಂದಿದೆ. ಪ್ರಶ್ನೆಪತ್ರಿಕೆ ಸೋರಿಕೆ ಆಗದಂತೆ, ಪರೀಕ್ಷೆ, ಮೌಲ್ಯಮಾಪನ ಪಾರದರ್ಶಕವಾಗಿ ನಡೆಯುವಂತೆ, ಮೌಖಿಕ ಸಂದರ್ಶನವೂ ಪಾರದರ್ಶಕವಾಗಿರುವಂತೆ ಮಾಡಿದಲ್ಲಿ ಇದಕ್ಕೆ ಶಾಶ್ವತ ಪರಿಹಾರ ದೊರಕುತ್ತದೆ ಎಂದು ಈಶ್ವರ ಖಂಡ್ರೆ ಅಭಿಪ್ರಾಯಪಟ್ಟರು.

## ನಾಡಿನ ಸಮಸ್ತ ಜನತೆಗೆ ಗೌರಿ-ಗಣೇಶ ಹಬ್ಬದ ಶುಭಾಶಯ ಕೋರಿದ ಮುಖ್ಯಮಂತ್ರಿ



ಬೆಂಗಳೂರು, ಸೆ.13: ರಾಜ್ಯದ ಸಮಸ್ತ ಜನರಿಗೆ ಹಾಗೂ ಎಲ್ಲಾ ಗ್ಯಾರಂಟಿ ಫಲಾನುಭವಿಗಳಿಗೆ ಸರ್ಕಾರದ ಪರವಾಗಿ ಹಾಗೂ ವೈಯಕ್ತಿಕವಾಗಿ ಗೌರಿ-ಗಣೇಶ ಹಬ್ಬದ ಹಾರ್ದಿಕ ಶುಭಾಶಯಗಳು" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ತಿಳಿಸಿದರು. ಕೆಪಿಸಿಸಿ ಕಚೇರಿ ಬಳಿ ಮಾಧ್ಯಮಗಳಿಗೆ ಭಾನುವಾರ ಪ್ರತಿಕ್ರಿಯೆ ನೀಡಿದರು. "ಗೃಹಜ್ಯೋತಿ, ಗೃಹಲಕ್ಷ್ಮೀ ಯೋಜನೆಯ ಮೂಲಕ ರಾಜ್ಯದ ಕೋಟ್ಯಂತರ ಮನೆಗಳಲ್ಲಿ ಬೆಳಕು ಮೂಡುತ್ತಿದೆ. ಇದೇ ಬೆಳಕಿನಲ್ಲಿ ಗೌರಿ-ಗಣೇಶ ಹಬ್ಬವನ್ನು ಸಂಭ್ರಮದಿಂದ ಆಚರಿಸಿ. ರಾಜ್ಯದ ಪ್ರತಿಯೊಂದು ಮನೆಯಲ್ಲೂ ಸುಖ, ಶಾಂತಿ, ನೆಮ್ಮದಿ ಹಾಗೂ ಸಂತೋಷದ ಬೆಳಕು ತುಂಬಲಿ. ಎಲ್ಲ ಕುಟುಂಬಗಳಲ್ಲಿ ಸಂತಸ ಹಾಗೂ ನೆಮ್ಮದಿ ನೆಲೆಸಲಿ" ಎಂದು ಹಾರೈಸಿದರು.

"ಹಬ್ಬಗಳು ನಾಡಿನ ಪ್ರತಿಯೊಂದು ಕುಟುಂಬಕ್ಕೂ ಹೊಸ ಭರವಸೆ. ಗೌರಿ- ಗಣೇಶ ಹಬ್ಬ ಒಂದೇ ದಿನ ಬಂದಿದೆ. ವಿಘ್ನ ವಿನಾಯಕನ ಆಶೀರ್ವಾದದಿಂದ ಜನರ ಸಂಕಷ್ಟಗಳು ದೂರವಾಗಿ, ಸುಖ- ಶಾಂತಿ ನೆಲೆಸಲಿ. ಗಣೇಶನಿಗಿಂತ ಮೊದಲು ಗೌರಿಯನ್ನು ಪೂಜಿಸುತ್ತೇವೆ. ಗೌರಿ ಸಮಾನರಾದ ಎಲ್ಲಾ ತಾಯಂದಿರಿಗೂ ಹಬ್ಬದ ಶುಭಾಶಯಗಳು" ಎಂದರು.

## ಗಣೇಶ ಚತುರ್ಥಿಯ ಮುನ್ನಾದಿನ ಜನತೆಗೆ ರಾಷ್ಟ್ರಪತಿ ಶುಭಾಶಯ



ನವದೆಹಲಿ, ಸೆಪ್ಟೆಂಬರ್ 13: ಗಣೇಶ ಚತುರ್ಥಿಯ ಮುನ್ನಾದಿನದಂದು ನೀಡಿರುವ ಸಂದೇಶದಲ್ಲಿ ಭಾರತದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಹೀಗೆ ಹೇಳಿದ್ದಾರೆ. ಗಣೇಶ ಚತುರ್ಥಿಯ ಈ ಶುಭ ಸಂದರ್ಭದಲ್ಲಿ, ದೇಶ-ವಿದೇಶಗಳಲ್ಲಿ ನೆಲೆಸಿರುವ ಎಲ್ಲಾ ಭಾರತೀಯರಿಗೆ ನನ್ನ ಹೃತ್ಪೂರ್ವಕ ಶುಭಾಶಯಗಳನ್ನು ಹಾಗೂ ಅಭಿನಂದನೆಗಳನ್ನು ಸಲ್ಲಿಸುತ್ತೇನೆ. ಭಗವಾನ್ ಗಣೇಶನು ಜ್ಞಾನ, ಸಮೃದ್ಧಿ ಮತ್ತು ಶುಭಾರಂಭಗಳ ಸಂಕೇತವಾಗಿದ್ದಾನೆ. ಗಣೇಶ ಚತುರ್ಥಿ ಹಬ್ಬವು ನಮ್ಮ ಜೀವನದಲ್ಲಿ ಹೊಸ ಚೈತನ್ಯ, ಜ್ಞಾನ ಮತ್ತು ಸಕಾರಾತ್ಮಕತೆಯನ್ನು ತರುತ್ತದೆ. ಜೀವನದಲ್ಲಿ ಹೊಸ ಸಂಕಲ್ಪಗಳೊಂದಿಗೆ ಪ್ರಗತಿಯ ಹಾದಿಯಲ್ಲಿ ಮುನ್ನಡೆಯಲು ಈ ಪವಿತ್ರ ಹಬ್ಬವು ನಮಗೆ ಸ್ಫೂರ್ತಿ ನೀಡುತ್ತದೆ. ಭಗವಾನ್ ಗಣೇಶನು ಪ್ರತಿಯೊಬ್ಬರ ಜೀವನದಲ್ಲಿ ಸಂತೋಷ, ಶಾಂತಿ, ಉತ್ತಮ ಆರೋಗ್ಯ ಮತ್ತು ಸಮೃದ್ಧಿಯನ್ನು ಕರುಣಿಸಲಿ ಎಂದು ನಾನು ಪ್ರಾರ್ಥಿಸುತ್ತೇನೆ. ನಾವೆಲ್ಲರೂ ರಾಷ್ಟ್ರ ನಿರ್ಮಾಣ ಕಾರ್ಯದಲ್ಲಿ ಕೊಡುಗೆ ನೀಡಲು ಸಂಕಲ್ಪ ಮಾಡೋಣ."

# ಮಲೇಷ್ಯಾ ಪ್ರಧಾನಿಯೊಂದಿಗೆ ಉಪಹಾರ ಸಭೆ ನಡೆಸಿದ ರಾಹುಲ್, ಪ್ರಿಯಾಂಕಾ ಗಾಂಧಿ ವಾದ್ರಾ



ನವದೆಹಲಿ, ಸೆ.13: ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಭಾನುವಾರ ಮಲೇಷ್ಯಾದ ಪ್ರಧಾನಿ ಅನ್ವರ್ ಇಬ್ರಾಹಿಂ ಅವರನ್ನು ಭೇಟಿಯಾಗಿದ್ದು, ಉಪಹಾರದೊಂದಿಗೆ ಮಾತುಕತೆ ನಡೆಸಿದರು ಹಾಗೂ ಭಾರತ-ಮಲೇಷ್ಯಾ ಸಂಬಂಧಗಳ ಕುರಿತು ಚರ್ಚಿಸಿದ್ದಾರೆ. ಈ ಸಭೆಯಲ್ಲಿ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ ಕೂಡ ಉಪಸ್ಥಿತರಿದ್ದರು. ಇಬ್ರಾಹಿಂ ಜೊತೆಗಿನ ಉಪಹಾರ ಸಭೆ ನಡೆಸಿದ ರಾಹುಲ್ ಗಾಂಧಿ ಮತ್ತು ಪ್ರಿಯಾಂಕಾ ಗಾಂಧಿ ಅವರ ಫೋಟೋಗಳನ್ನು ಕಾಂಗ್ರೆಸ್ ಬಿಡುಗಡೆ ಮಾಡಿದೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಇಬ್ರಾಹಿಂ ಅವರು ವ್ಯಾಪಾರ, ಸೆಮಿಕಂಡಕ್ಟರ್‌ಗಳು, ಮೂಲಸೌಕರ್ಯ ಮತ್ತು ರಕ್ಷಣಾ ಕ್ಷೇತ್ರಗಳಲ್ಲಿನ ಸಹಕಾರದ ಕುರಿತು ಮಾತುಕತೆ ನಡೆಸಿದ ಮರುದಿನವೇ ಈ ಸಭೆ ನಡೆದಿದೆ. ಇಬ್ಬರೂ ನಾಯಕರು ಇಲ್ಲಿ ನಡೆದ ಬ್ರಿಕ್ಸ್ ಶೃಂಗಸಭೆಯ ಸಂದರ್ಭದಲ್ಲಿ ಭೇಟಿಯಾಗಿದ್ದರು. ಮಲೇಷ್ಯಾವು ಬ್ರಿಕ್ಸ್ ಗುಂಪಿನ ಪಾಲುದಾರ ರಾಷ್ಟ್ರವಾಗಿದೆ. ಹಾಗೆಯೇ, ಆಸಿಯಾನ್ ಗುಂಪಿನ ವ್ಯಾಪ್ತಿಯಲ್ಲಿ ಭಾರತಕ್ಕೆ ಇದು ಪ್ರಮುಖ ಪಾಲುದಾರ ರಾಷ್ಟ್ರವಾಗಿದೆ.

# ಗಣೇಶೋತ್ಸವಕ್ಕೆ ನಿರ್ಬಂಧ ಟಿ.ನರಸೀಪುರದಲ್ಲಿ ಬಿಜೆಪಿ ಪ್ರತಿಭಟನೆ

**ಬಿಜೆಪಿ ನಾಯಕರಾದ ಆರ್. ಅಶೋಕ್, ಯದುವೀರ್ ಹಾಗೂ ಪ್ರತಾಪ್‌ಸಿಂಹ ಪೊಲೀಸ್ ವಶಕ್ಕೆ**



ಬೆಂಗಳೂರು, ಸೆ.13: ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವುದು ಪೊಲೀಸರ ಕರ್ತವ್ಯ; ಹೀಗಿರುವಾಗ ಮೆರವಣಿಗೆಗಳಿಗೆ ಅಡ್ಡಿಪಡಿಸುವುದು ಸರಿಯಲ್ಲ ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಎಚ್ಚರಿಕೆ ನೀಡಿದ್ದಾರೆ. ಗಣಪತಿ ಮೆರವಣಿಗೆ ಕುರಿತು ನೀಡಿದ ಹೇಳಿಕೆಗೆ ಸಂಬಂಧಿಸಿದಂತೆ ಟಿ. ನರಸೀಪುರ ಪೊಲೀಸ್ ಇನ್‌ಸ್ಪೆಕ್ಟರ್ ಧನಂಜಯ್ ಅವರನ್ನು ಅಮಾನತುಗೊಳಿಸಬೇಕೆಂದು ಆಗ್ರಹಿಸಿ ಬಿಜೆಪಿ ನಡೆಸಿದ ಪ್ರತಿಭಟನೆಯನ್ನು ಉದ್ದೇಶಿಸಿ ಅಶೋಕ್ ಈ ಮಾತುಗಳನ್ನಾಡಿದರು.

ಟಿ.ನರಸೀಪುರದಲ್ಲಿ ನಡೆದ ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ವಿರೋಧ ಪಕ್ಷದ ನಾಯಕರು, ಕರ್ನಾಟಕ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಲ್ಲದೆ, ಗಣಪತಿ ಮೆರವಣಿಗೆ ಆಯೋಜಕರ ವಿರುದ್ಧ ತೆಗೆದುಕೊಂಡ ಕ್ರಮವನ್ನು ಪ್ರಶ್ನಿಸಿದರು. ನಾವು ಭಾರತದಲ್ಲಿದ್ದೇವೋ ಅಥವಾ ಪಾಕಿಸ್ತಾನದಲ್ಲಿದ್ದೇವೋ ಎಂಬ ಪ್ರಶ್ನೆ ನಮ್ಮನ್ನು ಕಾಡುತ್ತಿದೆ. ಗಣಪತಿ ಬಂದಿದ್ದು 3,000 ವರ್ಷಗಳ ಹಿಂದೆ, ಆದರೆ ಮಸೀದಿ ಬಂದಿದ್ದು 300 ವರ್ಷಗಳ ಹಿಂದೆ," ಎಂದು ಅಶೋಕ್ ಹೇಳಿದರು. ಟಿ. ನರಸೀಪುರದಲ್ಲಿ ಮೆರವಣಿಗೆಗೆ ನಿರ್ಬಂಧ ಹೇರಿದ ನಡವಳಿಕೆ ಸರಿಯಲ್ಲ ಮತ್ತು ಇಂತಹ ಕ್ರಮ ಸಹಿಸಲು ಸಾಧ್ಯವಿಲ್ಲ ಎಂದ ಅವರು, ಈ ವಿಷಯದಲ್ಲಿ ಮುಖ್ಯಮಂತ್ರಿ ಹಾಗೂ ಗೃಹ ಸಚಿವರು ಸ್ಪಷ್ಟನೆ ನೀಡಬೇಕೆಂದು ಆಗ್ರಹಿಸಿದರು. ಗಣೇಶೋತ್ಸವವು ಕೇವಲ ಹಬ್ಬವಲ್ಲ; ಅದು ಸಾಮಾಜಿಕ ಏಕತೆ, ಭಕ್ತಿ ಮತ್ತು ಸೌಹಾರ್ದತೆಯ ಸಂಕೇತವಾಗಿದೆ. ಇಂತಹ ಪವಿತ್ರ ಸಂದರ್ಭದಲ್ಲಿ ಟಿ. ನರಸೀಪುರದಲ್ಲಿ ನಡೆದ ಗಣಪತಿ ಮೆರವಣಿಗೆಯ ಘಟನೆ ಸೂಕ್ತವಾದುದಲ್ಲ ಮತ್ತು ಮೆರವಣಿಗೆಯನ್ನು ತಡೆಯುವ ಕೃತ್ಯ ಖಂಡನೀಯ ಎಂದು ಅವರು ಹೇಳಿದರು.

ಇನ್‌ಸ್ಪೆಕ್ಟರ್ ಧನಂಜಯ್ ಅವರನ್ನು ತಕ್ಷಣವೇ ಅಮಾನತುಗೊಳಿಸಬೇಕೆಂದು ಒತ್ತಾಯಿಸಿ ಬಿಜೆಪಿ ನಾಯಕರು ಟಿ.ನರಸೀಪುರ ಠಾಣೆಯ ಮುಂದೆ ಪ್ರತಿಭಟನೆ ನಡೆಸಿದರು. ಇನ್‌ಸ್ಪೆಕ್ಟರ್ ಅಮಾನತಿಗೆ ಆಗ್ರಹಿಸಿ ಗಣೇಶನ ಮೂರ್ತಿಯೊಂದಿಗೆ ಮೆರವಣಿಗೆ ನಡೆಸಿ ಅಹೋರಾತ್ರಿ ಧರಣಿ ನಡೆಸಲು ಯತ್ನಿಸಿದ ಪ್ರತಿಪಕ್ಷದ ನಾಯಕ ಅಶೋಕ್, ಸಂಸದ ಯದುವೀರ್ ಒಡೆಯರ್, ಮಾಜಿ ಸಂಸದ ಪ್ರತಾಪ್ ಸಿಂಹ ಹಾಗೂ ಶಾಸಕ ಶ್ರೀವತ್ಸ ಸೇರಿದಂತೆ ಹಲವು ಬಿಜೆಪಿ ನಾಯಕರು ಮತ್ತು ಹಿಂದೂ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದರು. ರಾಜ್ಯದಲ್ಲಿ "ಹಿಂದೂ ವಿರೋಧಿ" ಮತ್ತು "ತಾಲಿಬಾನಿ" ಸರ್ಕಾರ ಅಧಿಕಾರದಲ್ಲಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ ಬಿಜೆಪಿ ನಾಯಕರು, ಅಧಿಕಾರಿಯನ್ನು ಅಮಾನತುಗೊಳಿಸುವವರೆಗೆ ಅಹೋರಾತ್ರಿ ಧರಣಿಯನ್ನು ಮುಂದುವರಿಸುವುದಾಗಿ ಪಟ್ಟು ಹಿಡಿದರು.

# ಭಿನ್ನಾಭಿಪ್ರಾಯ ವಿವಾದಗಳಾಗಿ ಪರಿವರ್ತನೆಯಾಗಬಾರದು ಪ್ರಧಾನಿ ಮೋದಿ-ಚೀನಾ ಅಧ್ಯಕ್ಷ ಷಿ ಜಿನ್ಪಿಂಗ್ ಸಹಮತ

**ನವದೆಹಲಿ, ಸೆ.13:** ಭಾರತ- ಚೀನಾ ನಡುವಿನ ಗಡಿ ಸಮಸ್ಯೆ ಬಗೆಹರಿಸಿಕೊಳ್ಳುವ ಯತ್ನಗಳು ಸಾಗಿವೆ. ಅದರ ಮುಂದುವರಿದ ಭಾಗವಾಗಿ ದೆಹಲಿಯಲ್ಲಿ ನಡೆಯುತ್ತಿರುವ ಬ್ರಿಕ್ಸ್ ಶೃಂಗಸಭೆಯಲ್ಲೂ ಈ ಬಗ್ಗೆ ಉಭಯ ದೇಶಗಳ ನಾಯಕರ ನಡುವೆ ಸಕಾರಾತ್ಮಕ ಮಾತುಕತೆಗಳು ನಡೆದಿವೆ.

ಜಾಗತಿಕ ಅನಿಶ್ಚಿತತೆಯ ನಡುವೆ ಉಭಯ ದೇಶಗಳ ಬಾಂಧವ್ಯವನ್ನು ವೃದ್ಧಿಸುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಚೀನಾ ಅಧ್ಯಕ್ಷ ಷಿ ಜಿನ್ಪಿಂಗ್ ಅವರು ಮಹತ್ವದ ಮಾತುಕತೆ ನಡೆಸಿದ್ದು, ಭಿನ್ನಾಭಿಪ್ರಾಯಗಳಿದ್ದರೂ ವಿವಾದಗಳಾಗಬಾರದು ಎಂದು ಒಪ್ಪಿಕೊಂಡಿದ್ದಾರೆ.

ಬ್ರಿಕ್ಸ್ ಶೃಂಗಸಭೆಯ ಸಂದರ್ಭದಲ್ಲಿ ನಡೆದ 45 ನಿಮಿಷಗಳ ಸುದೀರ್ಘ ಸಭೆಯಲ್ಲಿ ಉಭಯ ನಾಯಕರು ಗಡಿ ನಿರ್ವಹಣೆ, ಆರ್ಥಿಕ ಸಹಭಾಗಿತ್ವ ಮತ್ತು ಜಾಗತಿಕ ವಿದ್ಯಮಾನಗಳು ಸೇರಿದಂತೆ ಹಲವು ಪ್ರಮುಖ ವಿಷಯಗಳ ಕುರಿತು ಚರ್ಚಿಸಿದರು.

ಗಡಿಯಲ್ಲಿ ಶಾಂತಿ ಕಾಪಾಡುವುದು ದ್ವಿಪಕ್ಷೀಯ ಸಂಬಂಧಗಳ ಮುಂದುವರಿಕೆಗೆ ಅತ್ಯಗತ್ಯ ಎಂದು ಪ್ರಧಾನಿ ಮೋದಿ ಪ್ರತಿಪಾದಿಸಿದ್ದಾರೆ. ಗಡಿ ಸಂಬಂಧಿತ ವಿಷಯಗಳಲ್ಲಿ ಉಭಯ ದೇಶಗಳು ಪ್ರಸ್ತುತ ಒಪ್ಪಂದ ಮತ್ತು ಒಡಂಬಡಿಕೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಒತ್ತಿಹೇಳಿದ್ದಾಗಿ ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ಗಡಿ ಸಮಸ್ಯೆಗೆ ನ್ಯಾಯಯುತ, ಸಮಂಜಸ ಮತ್ತು ಪರಸ್ಪರ ಒಪ್ಪಿತ ಪರಿಹಾರವನ್ನು ಕಂಡುಕೊಳ್ಳಲು ಇಬ್ಬರೂ ನಾಯಕರು ಬದ್ಧತೆ ವ್ಯಕ್ತಪಡಿಸಿದರು. 7 ವರ್ಷಗಳ ನಂತರ ಭಾರತಕ್ಕೆ ಭೇಟಿ ನೀಡಿರುವ ಷಿ ಜಿನ್ ಪಿಂಗ್, ಕಳೆದ 2 ವರ್ಷಗಳಲ್ಲಿ ಸಾಧಿಸಿದ ಪ್ರಗತಿಯನ್ನು ತಾವು ಮೌಲ್ಯಯುತವಾದುದು ಎಂದು ಪರಿಗಣಿಸುವುದಾಗಿ ಚೀನಾದ ಮಾಧ್ಯಮಗಳ ಮುಂದೆ ಹೇಳಿದ್ದಾರೆ.



ಆರ್ಥಿಕತೆ, ವಿಮಾನ ಯಾನ ಪುನಾರಂಭ: ಉಭಯ ದೇಶಗಳು ಪರಸ್ಪರರಿಂದ ಕಲಿಯಬಹುದು. ಪರಸ್ಪರ ಬೆಂಬಲ ನೀಡಬಹುದು. ಜಂಟಿಯಾಗಿ ಯಶಸ್ಸು ಮತ್ತು ಅಭಿವೃದ್ಧಿಯತ್ತ ಸಾಗಬಹುದು" ಎಂದು ಹೇಳಿದ್ದಾರೆ. ಗಡಿ ಸಮಸ್ಯೆಯನ್ನು ನಿರ್ವಹಿಸುವುದರ ಜೊತೆಗೆ ಪರಸ್ಪರ ನಂಬಿಕೆ ವೃದ್ಧಿ ಮತ್ತು ಆರ್ಥಿಕ ಸಂಬಂಧಗಳನ್ನು ಬೆಳೆಸಲು ಉಭಯ ದೇಶಗಳು ಪ್ರಯತ್ನಿಸುತ್ತಿರುವ ಸಂದರ್ಭದಲ್ಲೇ ಷಿ ಮತ್ತು ಮೋದಿ ಅವರ ನಡುವಿನ ಈ ಭೇಟಿ ಮಹತ್ವದ್ದಾಗಿದೆ.

ಜನರ ನಡುವಿನ ಸಂಪರ್ಕವನ್ನು ಹೆಚ್ಚಿಸುವ ಭಾಗವಾಗಿ ಆರು ವರ್ಷಗಳ ಹಿಂದೆ ಸ್ಥಗಿತಗೊಂಡಿದ್ದ ಗುವಾಂಗ್ಝೌ-ನವದೆಹಲಿ ವಿಮಾನ ಯಾನವನ್ನು ಸೆಪ್ಟೆಂಬರ್ 21 ರಿಂದ ಪುನರಾರಂಭಿಸುವುದಾಗಿ ಚೀನಾ ಸದರ್ನ್ ಏರ್‌ಲೈನ್ಸ್ ಶನಿವಾರ ಪ್ರಕಟಿಸಿದೆ.

2020ರಲ್ಲಿ ನಡೆದ ಗಲ್ವಾನ್ ಸಂಘರ್ಷದ ನಂತರ ಹದಗೆಟ್ಟಿದ್ದ ಸಂಬಂಧಗಳು, 2024ರಿಂದ ಹಂತಹಂತವಾಗಿ ಸುಧಾರಣೆಯ ಹಾದಿ ಹಿಡಿದಿವೆ. ಇರಾನ್ ಸಂಘರ್ಷ, ಉಕ್ರೇನ್ ಯುದ್ಧ ಮತ್ತು ಅಮೆರಿಕದ ಸುಂಕದ ನೀತಿಗಳಂತಹ ಜಾಗತಿಕ ವಿದ್ಯಮಾನಗಳು ಭಾರತ- ಚೀನಾ ಬಾಂಧವ್ಯ ಸುಧಾರಣೆಗೆ ಪ್ರೇರಣೆ ನೀಡಿವೆ. ಇತ್ತೀಚೆಗೆ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಮತ್ತು ಚೀನಾದ ವಿದೇಶಾಂಗ ಸಚಿವ ವಾಂಗ್ ಯಿ ನಡುವೆ ನಡೆದ ಮಾತುಕತೆಯ ನಂತರ ಸೇನಾ ಸಂವಹನವನ್ನು ಬಲಪಡಿಸುವ 8 ಅಂಶಗಳ ಒಪ್ಪಂದಕ್ಕೆ ಬರಲಾಗಿದೆ.

ಗಡಿ ಸಮಸ್ಯೆ ನಿರ್ವಹಣೆ ಸವಾಲಾಗಿ ಉಳಿದಿದ್ದರೂ, ಷಿ ಮತ್ತು ಮೋದಿ ನಡುವಿನ ಭೇಟಿಯು ದೇಶಗಳ ಸಂಬಂಧಗಳಲ್ಲಿ ಇತ್ತೀಚೆಗೆ ಕಂಡುಬಂದಿರುವ ಸಕಾರಾತ್ಮಕ ಚಲನಶೀಲತೆಯನ್ನು ಹೆಚ್ಚಿಸಿದೆ ಎಂದು ವಿಶ್ಲೇಷಕರು ಅಭಿಪ್ರಾಯಪಟ್ಟಿದ್ದಾರೆ.

"ಮಾತುಕತೆ ಪುನಾರಂಭ, ಆರ್ಥಿಕತೆ ಮತ್ತು ವ್ಯಾಪಾರ ಪುನಶ್ಚೇತನ ಪ್ರಕ್ರಿಯೆಯು ಬ್ರಿಕ್ಸ್ ಸಭೆಗೂ ಮುನ್ನವೇ ಆರಂಭವಾಗಿತ್ತು. ಬ್ರಿಕ್ಸ್ ಅದಕ್ಕೆ ಇನ್ನಷ್ಟು ವೇಗ ನೀಡಿದೆ. ಅದಕ್ಕೂ ಮೊದಲು ಶಾಂಘೈ ಸಹಕಾರ ಸಂಘಟನೆ (ಎಸ್‌ಸಿಒ) ಸಭೆ ನಡೆಯಿತು. ಅಲ್ಲಿ ಇಬ್ಬರೂ ನಾಯಕರು ಭಾಗವಹಿಸಿದ್ದರು ಎಂದು ಇನ್ಸ್ಟಿಟ್ಯೂಟ್ ಆಫ್ ಚೈನೀಸ್ ಸ್ಟಡೀಸ್‌ನ ನಿರ್ದೇಶಕಿ ಅಲಕಾ ಆಚಾರ್ಯ ಹೇಳಿದರು. ಉಭಯ ದೇಶಗಳ ನಡುವೆ ಇರುವ ಗಡಿ ಸಮಸ್ಯೆಯ ಬಗ್ಗೆ ಏನೆಲ್ಲಾ ನಿರ್ಧಾರವಾಗಿದೆ. ಮಾತುಕತೆಗಳು ಯಾವೆಲ್ಲಾ ಮಟ್ಟಕ್ಕೆ ತಲುಪಿವೆ ಎಂಬುದು ಅರ್ಥವಾಗದ ವಿಷಯವಾಗಿದೆ ಎಂದು ಆಚಾರ್ಯ ಹೇಳಿದ್ದಾರೆ.

# 18ನೇ ಬ್ರಿಕ್ ಸಭೆಯಲ್ಲಿ ಭೋಜನ ಕೂಟದಲ್ಲಿ ಭಾಗವಹಿಸಿದ್ದ ಸಚಿವ ಸೋಮಣ್ಣ

**ನವದೆಹಲಿ, ಸೆ.13:** ದೆಹಲಿಯಲ್ಲಿ ನಡೆಯುತ್ತಿರುವ 18ನೇ ಬ್ರಿಕ್ ಸಭೆಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ತಮ್ಮ ಸಚಿವ ಸಂಪುಟದ ಎಲ್ಲಾ ಸಚಿವರನ್ನು ಭಾರತ್ ಮಂಡಪಮ್‌ನಲ್ಲಿ ಶನಿವಾರ ರಾತ್ರಿ ಭೋಜನಕ್ಕೆ ಆಮಂತ್ರಿಸಿದ್ದರು.



ಭೋಜನಕೂಟದಲ್ಲಿ ಭಾಗಿಯಾದ ಕೇಂದ್ರ ಸಚಿವ ವಿ. ಸೋಮಣ್ಣ ಇದೊಂದು ಔಚಿತ್ಯ ಪೂರ್ಣವಾಗಿತ್ತು, ವಿಶ್ವದ ಬೇರೆ ಬೇರೆ ದೇಶದ ಪ್ರಮುಖ ನಾಯಕರೆಲ್ಲರು ಸೇರಿದ ಬ್ರಿಕ್ ಸಭೆಯಲ್ಲಿ ಪಾಲ್ಗೊಳ್ಳುವ ಅವಕಾಶ ನನಗೆ ಸಿಕ್ಕಿತು. ಇದು ಒಂದು ವಿಶೇಷ ಅನುಭವಕ್ಕೆ ಸಾಕ್ಷಿಯಾಯಿತು ಎಂದು ಕೇಂದ್ರ ಸಚಿವ ಸೋಮಣ್ಣ ಸಂತಸ ವ್ಯಕ್ತಪಡಿಸಿದ್ದಾರೆ. ಸಂಸತ್ ಭವನದಿಂದ ಬಸ್ಸುಗಳ ಮೂಲಕ ಎಲ್ಲಾ ಸಚಿವರು ಒಟ್ಟಾಗಿ ಭಾರತ ಮಂಡಪಂಗೆ ಪ್ರಯಾಣಿಸಿದ್ದು ಒಂದು ವಿಶೇಷ ಸಂದರ್ಭ ಎಂದು ತಮ್ಮ ಸಂತೋಷ ವ್ಯಕ್ತಪಡಿಸಿದ್ದಾರೆ. ಪ್ರಧಾನಿ ಮೋದಿಯವರಿಗೆ ಧನ್ಯವಾದ ತಿಳಿಸಿದ್ದಾರೆ ಕೇಂದ್ರ ಸಚಿವ ವಿ. ಸೋಮಣ್ಣ.

# ಭಾರತದ ಅಭಿವೃದ್ಧಿ, ಸಾಮರ್ಥ್ಯ ವರ್ಧನೆಯ ಪಾತ್ರಕ್ಕೆ ಮೆಚ್ಚುಗೆ

## ಪ್ರಧಾನಿ ಮೋದಿ-ನೈಜೀರಿಯಾ ಉಪಾಧ್ಯಕ್ಷ ಶೆಟ್ಟಿಮಾ ಮಾತುಕತೆ: ಬಹುಪಕ್ಷೀಯ ಸಹಕಾರ, ಬಹುಧ್ರುವೀಯ ವ್ಯವಸ್ಥೆಗೆ ಒತ್ತು

**ನವದೆಹಲಿ, ಸೆ.13:** ದೇಶದ ರಾಜಧಾನಿಯಲ್ಲಿ ನಡೆದ 18ನೇ ಬ್ರಿಕ್ಸ್ ಶೃಂಗಸಭೆಯ ಹೊರತಾಗಿ ಪ್ರಧಾನಿ ನರೇಂದ್ರ ಮೋದಿ ಹಾಗೂ ನೈಜೀರಿಯಾದ ಉಪಾಧ್ಯಕ್ಷ ಕಾಶಿಮ್ ಶೆಟ್ಟಿಮಾ ಮುಸ್ತಫಾ ಅವರು ಭಾರತ ಮತ್ತು ನೈಜೀರಿಯಾದ ಬಹುವಿಧದ ಬಾಂಧವ್ಯವನ್ನು ಪರಾಮರ್ಶಿಸಿದರು. ಈ ವೇಳೆ ಬಹುಪಕ್ಷೀಯ ವೇದಿಕೆಗಳಲ್ಲಿ ಸಹಕಾರವನ್ನು ಬಲಪಡಿಸುವುದು ಹಾಗೂ ಹೆಚ್ಚು ಪ್ರಾತಿನಿಧಿಕ, ಒಳಗೊಳ್ಳುವಿಕೆಯ ಮತ್ತು ಬಹುಧ್ರುವೀಯ ಅಂತಾರಾಷ್ಟ್ರೀಯ ವ್ಯವಸ್ಥೆಯನ್ನು ನಿರ್ಮಿಸಲು ಶ್ರಮಿಸುವ ಪ್ರಾಮುಖ್ಯವನ್ನು ಉಭಯ ನಾಯಕರು ಒತ್ತಿಹೇಳಿದರು. ವಿವಿಧ ವಲಯಗಳಲ್ಲಿನ ದ್ವಿಪಕ್ಷೀಯ ಸಹಕಾರದ ಸ್ಥಿರ ಪ್ರಗತಿಯ ಬಗ್ಗೆ ಉಭಯ ನಾಯಕರು ತೃಪ್ತಿ ವ್ಯಕ್ತಪಡಿಸಿದ್ದು, ಭಾರತ–ನೈಜೀರಿಯಾ ವ್ಯೂಹಾತ್ಮಕ ಸಹಭಾಗಿತ್ವವನ್ನು ಮತ್ತಷ್ಟು ಬಲಪಡಿಸುವ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದರು.

ಅವರ ಚರ್ಚೆಗಳು ವ್ಯಾಪಾರ ಮತ್ತು ಹೂಡಿಕೆ, ರಕ್ಷಣೆ ಮತ್ತು ಭದ್ರತೆ, ಇಂಧನ ಸಹಭಾಗಿತ್ವ, ಕೃಷಿ, ಆರೋಗ್ಯ ಹಾಗೂ ಡಿಜಿಟಲ್ ತಂತ್ರಜ್ಞಾನಗಳನ್ನು ಒಳಗೊಂಡಿದ್ದವು.

"ದೆಹಲಿ ಬ್ರಿಕ್ಸ್ ಶೃಂಗಸಭೆಯ ಹೊರತಾಗಿ ನೈಜೀರಿಯಾದ ಉಪಾಧ್ಯಕ್ಷ ಕಾಶಿಮ್ ಶೆಟ್ಟಿಮಾ ಅವರನ್ನು ಭೇಟಿಯಾಗಲು ಸಂತೋಷವಾಗಿದೆ. ನಾವು ವ್ಯಾಪಾರ, ವಿದ್ಯುತ್, ಸ್ವಚ್ಛ ಇಂಧನ, ರಸಗೊಬ್ಬರ ಮತ್ತು ರಕ್ಷಣೆಯಂತಹ ಕ್ಷೇತ್ರಗಳಲ್ಲಿನ ಸಹಕಾರದ ಕುರಿತು ಚರ್ಚಿಸಿದ್ದೇವೆ. ಆರೋಗ್ಯ, ಸಾಮರ್ಥ್ಯ ವರ್ಧನೆ, ತಂತ್ರಜ್ಞಾನ ಮತ್ತು



ಇತರ ಕ್ಷೇತ್ರಗಳ ಸಹಕಾರವನ್ನೂ ನಾವು ಪರಾಮರ್ಶಿಸಿದ್ದೇವೆ" ಎಂದು ಪ್ರಧಾನಿ ಮೋದಿ ತಿಳಿಸಿದ್ದಾರೆ.

ಪ್ರಧಾನಿ ಮೋದಿ ಮತ್ತು ಶೆಟ್ಟಿಮಾ ಅವರು ಗ್ಲೋಬಲ್ ಸೌತ್ (ಅಭಿವೃದ್ಧಿಶೀಲ ರಾಷ್ಟ್ರಗಳ) ಆದ್ಯತೆಗಳು ಮತ್ತು ಕಾಳಜಿಗಳು ಸೇರಿದಂತೆ ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಬಗ್ಗೆಯೂ ವಿಚಾರ ವಿನಿಮಯ ಮಾಡಿಕೊಂಡರು. "ಅವರು ಭಾರತ–ನೈಜೀರಿಯಾ ವ್ಯೂಹಾತ್ಮಕ ಸಹಭಾಗಿತ್ವವನ್ನು ಮತ್ತಷ್ಟು ಬಲಪಡಿಸುವ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದರು. ಗ್ಲೋಬಲ್ ಸೌತ್ನ ಆದ್ಯತೆಗಳು ಮತ್ತು ಕಾಳಜಿಗಳು ಸೇರಿದಂತೆ ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಹಾಗೂ ಜಾಗತಿಕ ವಿಷಯಗಳ ಕುರಿತು ಅವರು ವಿಚಾರ ವಿನಿಮಯ ಮಾಡಿಕೊಂಡರು. ಉಭಯ ನಾಯಕರು ಬಹುಪಕ್ಷೀಯ ವೇದಿಕೆಗಳಲ್ಲಿ ಸಹಕಾರವನ್ನು ಬಲಪಡಿಸುವ ಮತ್ತು ಹೆಚ್ಚು ಪ್ರಾತಿನಿಧಿಕ, ಒಳಗೊಳ್ಳುವಿಕೆಯ ಮತ್ತು ಬಹುಧ್ರುವೀಯ ಅಂತಾರಾಷ್ಟ್ರೀಯ ವ್ಯವಸ್ಥೆಯತ್ತ ಒಟ್ಟಾಗಿ ಕೆಲಸ ಮಾಡುವ ಪ್ರಾಮುಖ್ಯತೆಯನ್ನು ಒತ್ತಿಹೇಳಿದರು" ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

ನೈಜೀರಿಯಾದೊಂದಿಗಿನ ಸಹಭಾಗಿತ್ವವನ್ನು ಬಲಪಡಿಸಲು ಹಾಗೂ ಆಫ್ರಿಕಾದೊಂದಿಗಿನ ಭಾರತದ ತೊಡಗಿಸಿಕೊಳ್ಳುವಿಕೆಯನ್ನು ಆಳವಾಗಿಸಲು ಭಾರತದ ನಿರಂತರ ಬದ್ಧತೆಯನ್ನು ಪ್ರಧಾನಿ ಮೋದಿ ಎತ್ತಿಹಿಡಿದರು. ವಿದೇಶಾಂಗ ಸಚಿವಾಲಯದ ಪ್ರಕಾರ, ನೈಜೀರಿಯಾದ ಸಾಮರ್ಥ್ಯ ವರ್ಧನೆ ಮತ್ತು ಆರ್ಥಿಕ ಅಭಿವೃದ್ಧಿಯಲ್ಲಿ ಭಾರತದ ಅಭಿವೃದ್ಧಿ ಅನುಭವ ಹಾಗೂ ಅದರ ಕೊಡುಗೆಯನ್ನು ಉಪಾಧ್ಯಕ್ಷ ಶೆಟ್ಟಿಮಾ ಮೆಚ್ಚಿಕೊಂಡರು.

ಈ ಸಭೆಯು ಎರಡೂ ದೇಶಗಳಲ್ಲಿ ಹಾಗೂ ವಿಶಾಲವಾದ ಗ್ಲೋಬಲ್ ಸೌತ್‌ನಲ್ಲಿ ಶಾಂತಿ, ಸಮೃದ್ಧಿ ಮತ್ತು ಅಭಿವೃದ್ಧಿಗೆ ಕೊಡುಗೆ ನೀಡುವ ಬಲವಾದ, ಭವಿಷ್ಯದ ದೃಷ್ಟಿಕೋನದ ಸಹಭಾಗಿತ್ವವನ್ನು ನಿರ್ಮಿಸುವ ಭಾರತ ಮತ್ತು ನೈಜೀರಿಯಾದ ಜಂಟಿ ಬದ್ಧತೆಯನ್ನು ಪುನರುಚ್ಚರಿಸಿತು. ಶೆಟ್ಟಿಮಾ ಅವರು ನವದೆಹಲಿಯಲ್ಲಿ ನಡೆದ ಬ್ರಿಕ್ಸ್ ಶೃಂಗಸಭೆಗೆ ನೈಜೀರಿಯಾದ ನಿಯೋಗದ ನೇತೃತ್ವ ವಹಿಸಿದ್ದರು. ಈ ನಿಯೋಗದಲ್ಲಿ ವಿದೇಶಾಂಗ ವ್ಯವಹಾರಗಳು; ಉದ್ಯಮ, ವ್ಯಾಪಾರ ಮತ್ತು ಹೂಡಿಕೆ; ಸಂಪರ್ಕ, ನಾವೀನ್ಯತೆ ಮತ್ತು ಡಿಜಿಟಲ್ ತಂತ್ರಜ್ಞಾನ; ಮಾನವೀಯ ವ್ಯವಹಾರಗಳು ಮತ್ತು ಬಡತನ ನಿರ್ಮೂಲನೆ; ಮಹಿಳಾ ವ್ಯವಹಾರಗಳು; ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯಗಳನ್ನು ನಿರ್ವಹಿಸುವ ಹಲವಾರು ಸಚಿವರು ಸೇರಿದ್ದಾರೆ. ಬ್ರಿಕ್ಸ್ ಶೃಂಗಸಭೆ 2026 ರಲ್ಲಿ ಪಾಲ್ಗೊಳ್ಳಲು ಶೆಟ್ಟಿಮಾ ಶುಕ್ರವಾರ ರಾಜಧಾನಿಗೆ ಆಗಮಿಸಿದ್ದರು. ನೈಜೀರಿಯಾವು ಈ ಒಕ್ಕೂಟದಲ್ಲಿ 'ಬ್ರಿಕ್ಸ್ ಪಾಲುದಾರ ದೇಶ' ಆಗಿ ಭಾಗವಹಿಸುತ್ತಿದೆ.



ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್, ನವದೆಹಲಿಯಲ್ಲಿ ಬ್ರಿಕ್ಸ್ ಅಂಗವಾಗಿ ಇರಾನ್ ಇಸ್ಲಾಮಿಕ್ ಗಣರಾಜ್ಯದ ಆರ್ಥಿಕ ವ್ಯವಹಾರಗಳು ಮತ್ತು ಹಣಕಾಸು ಸಚಿವ ಡಾ. ಸೈಯದ್ ಅಲಿ ಮದನಿಜಾದೇಹ್ ಅವರನ್ನು ಭೇಟಿಯಾಗಿದ್ದರು.

# ಡಿಜಿಟಲ್ ಆರ್ಥಿಕತೆಯ ಹೊಸ ಕ್ಷೇತ್ರಗಳ ಮೇಲೆ ಗಮನ ಹರಿಸಲಿದೆ: ಯುಎಇ ಬ್ರಿಕ್ಸ್ ಶೇರ್ಪಾ

**ನವದೆಹಲಿ, ಸೆ.13:** ಭಾರತ ಮತ್ತು ಯುಎಇ ನಡುವಿನ ಬಾಂಧವ್ಯದ ಮುಂದಿನ ಹಂತವು ಪ್ರಸ್ತುತ ಇರುವ ಸಹಕಾರ ಕ್ಷೇತ್ರಗಳನ್ನು ಮತ್ತಷ್ಟು ಬಲಪಡಿಸುವುದರ ಜೊತೆಗೆ, ಉನ್ನತ ತಂತ್ರಜ್ಞಾನ, ಸಂಶೋಧನೆ ಮತ್ತು ಡಿಜಿಟಲ್ ಆರ್ಥಿಕತೆಗೆ ಸಂಬಂಧಿಸಿದ ಹೊಸ ಕ್ಷೇತ್ರಗಳಿಗೆ ವಿಸ್ತರಿಸುವತ್ತ ಗಮನ ಹರಿಸಲಿದೆ ಎಂದು ಯುಎಇ ಬ್ರಿಕ್ಸ್ ಶೇರ್ಪಾ ಓಮ್ರಾನ್ ಶರಫ್ ಭಾನುವಾರ 18ನೇ ಬ್ರಿಕ್ಸ್ ಶೃಂಗಸಭೆಯ ಹೊರತಾಗಿ ತಿಳಿಸಿದ್ದಾರೆ.



ಯುಎಇಯ ಉನ್ನತ ವಿಜ್ಞಾನ ಮತ್ತು ತಂತ್ರಜ್ಞಾನ ವಿಭಾಗದ ಸಹಾಯಕ ವಿದೇಶಾಂಗ ಸಚಿವರೂ ಆಗಿರುವ ಶರಫ್ ಅವರು 'ಎಎನ್ಐ' ಸುದ್ದಿ ಸಂಸ್ಥೆಯೊಂದಿಗೆ ಮಾತನಾಡಿ, ತಂತ್ರಜ್ಞಾನದ ಪ್ರಗತಿಯಿಂದ ಹೊರಹೊಮ್ಮುತ್ತಿರುವ ನೂತನ ಕ್ಷೇತ್ರಗಳನ್ನು ಅನ್ವೇಷಿಸುವ ಜೊತೆಗೆ ಹಾಲಿ ಇರುವ ಕ್ಷೇತ್ರಗಳ ಕೆಲಸಗಳನ್ನು ತ್ವರಿತಗೊಳಿಸಲು ಉಭಯ ದೇಶಗಳು ಎದುರು ನೋಡುತ್ತಿವೆ ಎಂದಿದ್ದಾರೆ.

"ಈ ಬಾಂಧವ್ಯದ ಮುಂದಿನ ಹಂತವು ನಾವು ಪ್ರಸ್ತುತ ಕೆಲಸ ಮಾಡುತ್ತಿರುವ ಕ್ಷೇತ್ರಗಳನ್ನು ಮತ್ತಷ್ಟು ವೇಗಗೊಳಿಸುವತ್ತ ಗಮನ ಹರಿಸಲಿದೆ ಎಂದು ನಾನು ಭಾವಿಸುತ್ತೇನೆ. ಆದರೆ ಅದೇ ಸಮಯದಲ್ಲಿ, ಉನ್ನತ ತಂತ್ರಜ್ಞಾನ, ಸಂಶೋಧನೆ ಮತ್ತು ಡಿಜಿಟಲ್ ಆರ್ಥಿಕತೆಯಂತಹ ತಾಂತ್ರಿಕ ಪ್ರಗತಿಯ ಸುತ್ತ ರೂಪುಗೊಳ್ಳುತ್ತಿರುವ ಹೊಸ ಕ್ಷೇತ್ರಗಳಿಗೂ ಇದು ವಿಸ್ತರಿಸಲಿದೆ" ಎಂದು ಅವರು ಹೇಳಿದ್ದಾರೆ.

ಮೇ 2022ರಲ್ಲಿ ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದ ಜಾರಿಯಾದ ನಂತರ ಭಾರತ ಮತ್ತು ಯುಎಇ ತಮ್ಮ ಆರ್ಥಿಕ ಸಹಭಾಗಿತ್ವವನ್ನು ವಿಸ್ತರಿಸುತ್ತಿರುವ ಹಿನ್ನೆಲೆಯಲ್ಲಿ ಅವರ ಈ ಹೇಳಿಕೆ ಬಂದಿದೆ. ಆಹಾರ ಮತ್ತು ಪಾನೀಯಗಳು, ಪ್ರವಾಸೋದ್ಯಮ ಹಾಗೂ ಕೈಗಾರಿಕಾ ಸಹಕಾರ ಸೇರಿದಂತೆ ವ್ಯಾಪಾರ ಮತ್ತು ಆರ್ಥಿಕ ವಲಯಗಳಲ್ಲಿ ದ್ವಿಪಕ್ಷೀಯ ಬಾಂಧವ್ಯದ ಗಮನಾರ್ಹ ವಿಸ್ತರಣೆಗೆ ಈ ಒಪ್ಪಂದವು ಪ್ರಮುಖ ಕೊಡುಗೆ ನೀಡಿದೆ ಎಂದು ಶರಫ್ ತಿಳಿಸಿದ್ದಾರೆ.

"ಮೇ 2022ರಲ್ಲಿ ಎರಡೂ ದೇಶಗಳ ನಡುವೆ ಸಿಇಪಿಎ ಒಪ್ಪಂದಕ್ಕೆ ಸಹಿ ಹಾಕಲಾಯಿತು. ಅಂದಿನಿಂದ, ವ್ಯಾಪಾರ ಮತ್ತು ಆರ್ಥಿಕ ವಲಯಗಳಲ್ಲಿ ವ್ಯಾಪಕವಾದ ಸಹಭಾಗಿತ್ವ ಮತ್ತು ಪ್ರಗತಿ ಕಂಡುಬಂದಿದೆ.

ಈ&ಃ, ಪ್ರವಾಸೋದ್ಯಮ ಅಥವಾ ಕೈಗಾರಿಕಾ ಸಹಕಾರದಂತಹ ನಮಗೆ ಮುಖ್ಯವಾದ ಕ್ಷೇತ್ರಗಳೆಲ್ಲವೂ ಈ ಒಪ್ಪಂದದಿಂದಾಗಿ ವಿಸ್ತರಿಸಲ್ಪಟ್ಟಿವೆ. ನಾವು ಆ ಗುರಿಯತ್ತ ಸಾಗುತ್ತಿದ್ದೇವೆ ಮತ್ತು ಎರಡೂ ದೇಶಗಳ ನಾಯಕರು ನಮಗಾಗಿ ಹೊಂದಿಸಿರುವ ದೂರದೃಷ್ಟಿಗೆ ಅನುಗುಣವಾಗಿ ಪ್ರಗತಿಯು ಅತ್ಯುತ್ತಮವಾಗಿ ಸಾಗುತ್ತಿದೆ" ಎಂದು ಅವರು ಕೇರಿಸಿದ್ದಾರೆ.

ದತ್ತಾಂಶದ ಪ್ರಕಾರ, ಭಾರತ–ಯುಎಇ ಸಿಇಪಿಎ ಒಪ್ಪಂದವು ಮೇ 1, 2022 ರಂದು ಜಾರಿಗೆ ಬಂದಿತು. ಇದು ದಶಕದಲ್ಲೇ ಭಾರತದ ಮೊದಲ ಪೂರ್ಣಪ್ರಮಾಣದ ಮುಕ್ತ ವ್ಯಾಪಾರ ಒಪ್ಪಂದವಾಗಿದ್ದು, ಕೇವಲ 88 ದಿನಗಳಲ್ಲಿ ಇದರ ಮಾತುಕತೆ ಪೂರ್ಣಗೊಂಡಿತ್ತು. ಒಪ್ಪಂದ ಜಾರಿಗೆ ಬಂದ ಮೂರು ವರ್ಷಗಳಲ್ಲಿ, ಅಂದರೆ 2024–25ರ ಹಣಕಾಸು ವರ್ಷದಲ್ಲಿ ದ್ವಿಪಕ್ಷೀಯ ವ್ಯಾಪಾರವು ಶೇ.19.6 ರಷ್ಟು ಪ್ರಗತಿಯೊಂದಿಗೆ 100.06 ಬಿಲಿಯನ್ ಅಮೆರಿಕನ್ ಡಾಲರ್ ದಾಟಿ ಐತಿಹಾಸಿಕ ಮೈಲಿಗಲ್ಲು ತಲುಪಿದೆ.

ದ್ವಿಪಕ್ಷೀಯ ವ್ಯಾಪಾರದ ಈ ಬೆಳವಣಿಗೆಯ ನಂತರ, ಭಾರತ ಮತ್ತು ಯುಎಇ 2032ರ ವೇಳೆಗೆ ವ್ಯಾಪಾರವನ್ನು 200 ಶತಕೋಟಿ ಡಾಲರ್‌ಗೆ ದ್ವಿಗುಣಗೊಳಿಸುವ ಹೊಸ ಗುರಿಯನ್ನು ಹೊಂದಿವೆ.

2025–26ರ ಹಣಕಾಸು ವರ್ಷದಲ್ಲಿ ಭಾರತವು ಯುಎಇಗೆ 37,359.11 ದಶಲಕ್ಷ ಡಾಲರ್ ಮೌಲ್ಯದ ಸರಕುಗಳನ್ನು ರಫ್ತು ಮಾಡಿದ್ದು, ಯುಎಇ ಭಾರತದ ವ್ಯಾಪಾರ ಒಪ್ಪಂದಗಳ ಪೈಕಿ ಅತ್ಯಂತ ದೊಡ್ಡ ರಫ್ತುತಾಣವಾಗಿ ಹೊರಹೊಮ್ಮಿದೆ. ಶರಫ್ ಅವರ ಹೇಳಿಕೆಗಳು ಭಾರತ–ಯುಎಇ ಆರ್ಥಿಕ ಸಹಕಾರದ ಹಾಲಿ ಕ್ಷೇತ್ರಗಳನ್ನು ಗಟ್ಟಿಗೊಳಿಸುವುದರ ಜೊತೆಗೆ, ಮುಂದಿನ ಹಂತದ ಸಹಭಾಗಿತ್ವಕ್ಕಾಗಿ ತಂತ್ರಜ್ಞಾನ ಮತ್ತು ಸಂಶೋಧನೆಗೆ ಸಂಬಂಧಿಸಿದ ನೂತನ ಮಾರ್ಗಗಳನ್ನು ಅಭಿವೃದ್ಧಿಪಡಿಸುವತ್ತ ಗಮನ ಹರಿಸಿರುವುದನ್ನು ಸ್ಪಷ್ಟಪಡಿಸುತ್ತವೆ.

# ಭಾರತದ ಸೆಮಿಕಂಡಕ್ಟರ್ ವಲಯಕ್ಕೆ 1.4 ಶತಕೋಟಿ ಡಾಲರ್ ಹೂಡಿಕೆ: ವರದಿ

**ನವದೆಹಲಿ, ಸೆ. 13:** 'ಟ್ರಾಕ್ಸ್‌ನ ದತ್ತಾಂಶದ ಪ್ರಕಾರ, ಭಾರತದ ಸೆಮಿಕಂಡಕ್ಟರ್ ವಲಯವು 281 ಕಂಪನಿಗಳ ಮೂಲಕ ಒಟ್ಟಾರೆಯಾಗಿ 1.4 ಶತಕೋಟಿ ಡಾಲರ್‌ನಷ್ಟು ಈಕ್ವಿಟಿ ಹೂಡಿಕೆಯನ್ನು ಆಕರ್ಷಿಸಿದೆ. ಇದರಲ್ಲಿ ಸುಮಾರು ಅರ್ಧದಷ್ಟು ಮೊತ್ತ – ಅಂದರೆ 701 ದಶಲಕ್ಷ ಡಾಲರ್ – ಕೇವಲ 2025 ರಿಂದೀಚೆಗೆ ಸಂಗ್ರಹವಾಗಿದೆ.

ನವದೆಹಲಿಯ ದ್ವಾರಕಾದಲ್ಲಿರುವ 'ಯಶೋಭೂಮಿ'ಯಲ್ಲಿ ಸೆ.17 ರಿಂದ 19 ರವರೆಗೆ ನಡೆಯಲಿರುವ ದೇಶದ ಪ್ರಮುಖ ಸೆಮಿಕಂಡಕ್ಟರ್ ಸಮ್ಮೇಳನ ಮತ್ತು ಪ್ರದರ್ಶನವಾದ 'SEMICON India 2026' (ಸೆಮಿಕಾನ್ ಇಂಡಿಯಾ 2026) ಆರಂಭವಾಗುವ ಕೆಲವೇ ದಿನಗಳ ಮೊದಲು ಈ ಮಾಹಿತಿ ಹೊರಬಿದ್ದಿದೆ.

ಭಾರತವು ತನ್ನ ಬೆಳೆಯುತ್ತಿರುವ ಸೆಮಿಕಂಡಕ್ಟರ್ ಪರಿಸರ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುತ್ತಿರುವ ಹಿನ್ನೆಲೆಯಲ್ಲಿ, ಜಾಗತಿಕ ಸೆಮಿಕಂಡಕ್ಟರ್ ಉದ್ಯಮದ ನಾಯಕರು, ಸರ್ಕಾರಿ ಅಧಿಕಾರಿಗಳು, ರಾಜ್ಯ ಪ್ರತಿನಿಧಿಗಳು ಮತ್ತು ವಲಯದ ತಜ್ಞರನ್ನು ಒಗ್ಗೂಡಿಸುವ ಬೃಹತ್ ಕಾರ್ಯಕ್ರಮವಾದ 'SEMICON India ದ ಐದನೇ ಆವೃತ್ತಿಯನ್ನು ಪ್ರಧಾನಿ ನರೇಂದ್ರ ಮೋದಿ ಅವರು ಸೆಪ್ಟೆಂಬರ್ 17 ರಂದು ಉದ್ಘಾಟಿಸಲಿದ್ದಾರೆ.

ಈ ವಲಯದಲ್ಲಿ ಭಾರತವು 3,557 ಕಂಪನಿಗಳನ್ನು ಹೊಂದಿದೆ; ಇವುಗಳಲ್ಲಿ 281 ಕಂಪನಿಗಳು ಹೂಡಿಕೆಯನ್ನು ಪಡೆದಿದ್ದು, ಅವುಗಳ ಪೈಕಿ 142 ಕಂಪನಿಗಳು ಈಕ್ವಿಟಿ



ಹೂಡಿಕೆಯನ್ನು ಸಂಗ್ರಹಿಸಿವೆ. 'Tracxn' ಪ್ರಕಾರ, 2026 ರ ವರ್ಷದ ಆರಂಭದಿಂದ ಇಲ್ಲಿಯವರೆಗೆ ಈ ವಲಯವು 228 ದಶಲಕ್ಷ ಡಾಲರ್ ಹೂಡಿಕೆಯನ್ನು ದಾಖಲಿಸಿದೆ.

ಇಲ್ಲಿಯವರೆಗಿನ ಒಟ್ಟು ಹೂಡಿಕೆಯಲ್ಲಿ 'Tessolve Semiconductor' (ಟೆಸ್ಸೊಲ್ವ್ ಸೆಮಿಕಂಡಕ್ಟರ್) 213 ದಶಲಕ್ಷ ಡಾಲರ್‌ನೊಂದಿಗೆ ವಲಯದಲ್ಲಿ ಮುಂಚೂಣಿಯಲ್ಲಿದೆ. ಇದರ ನಂತರದ ಸ್ಥಾನಗಳಲ್ಲಿ 'ILJIN Electronics' (198 ದಶಲಕ್ಷ ಡಾಲರ್) ಮತ್ತು 'VVDN' (129 ದಶಲಕ್ಷ ಡಾಲರ್) ಇವೆ.

ಎಲೆಕ್ಟ್ರಾನಿಕ್ ತಯಾರಿಕಾ ಸೇವೆಗಳು ವಲಯದ ಹೂಡಿಕೆಯಲ್ಲಿ ಮುಂಚೂಣಿಯಲ್ಲಿದ್ದು, 2025 ರಿಂದೀಚೆಗೆ 313 ದಶಲಕ್ಷ ಡಾಲರ್ ಹೂಡಿಕೆಯನ್ನು ಪಡೆದುಕೊಂಡಿದೆ.

ಎಂಬೆಡೆಡ್ ಹಾರ್ಡ್‌ವೇರ್ ಎರಡನೇ ಸ್ಥಾನದಲ್ಲಿದ್ದು, 2025 ರಿಂದೀಚೆಗೆ 51.9 ದಶಲಕ್ಷ ಡಾಲರ್ ಹೂಡಿಕೆಯನ್ನು ಸಂಗ್ರಹಿಸಿದೆ (ಇದು ಸಂಪೂರ್ಣವಾಗಿ ಕಳೆದ 12 ತಿಂಗಳುಗಳಲ್ಲಿ ನಡೆದಿದೆ). ಇದರೊಂದಿಗೆ, 'Power Management Integrated Circuits' ªÀÄvÀÄÛ 'Fabless Semiconductor Manufacturers' ಕೂಡ ಹೂಡಿಕೆಯ ದೃಷ್ಟಿಯಿಂದ ಇತರ ಪ್ರಮುಖ ವ್ಯವಹಾರ ಮಾದರಿಗಳಾಗಿವೆ.

ವರದಿಯ ಪ್ರಕಾರ, ಈ ವಲಯದ ಹೂಡಿಕೆಯು 2021 ರಲ್ಲಿ 49 ದಶಲಕ್ಷ ಡಾಲರ್‌ನಿಂದ 2025 ರಲ್ಲಿ 473 ದಶಲಕ್ಷ ಡಾಲರ್‌ಗೆ ಏರಿಕೆಯಾಗಿದೆ. ಐದು ವರ್ಷಗಳ ಅವಧಿಯಲ್ಲಿ ಹೂಡಿಕೆಯ ಸಂಯುಕ್ತ ವಾರ್ಷಿಕ ಬೆಳವಣಿಗೆ ದರವು (CAGR) ಶೇ.36 ಕ್ಕಿಂತ ಹೆಚ್ಚಿತ್ತು. ಬೆಂಗಳೂರು ಪ್ರಮುಖ ಕೇಂದ್ರವಾಗಿ ಮುಂದುವರಿದಿದ್ದು, ಈ ವಲಯದ ಒಟ್ಟು 3,557 ಕಂಪನಿಗಳ ಪೈಕಿ 626 ಕಂಪನಿಗಳು (ಒಟ್ಟು ಸಂಖ್ಯೆಯ ಶೇ. 18ರಷ್ಟು) ಇಲ್ಲಿವೆ; ಅಲ್ಲದೆ, ಇದು ಇಲ್ಲಿಯವರೆಗೆ ಸಂಗ್ರಹಿಸಲಾದ ಒಟ್ಟು ಈಕ್ವಿಟಿ ನಿಧಿಯ ಪೈಕಿ ಶೇ. 40.1ರಷ್ಟು ಪಾಲನ್ನು ಹೊಂದಿದೆ. ನಿಧಿ ಸಂಗ್ರಹಣೆಯ ಪಾಲಿನ ವಿಷಯದಲ್ಲಿ ನೋಯ್ಡಾ (ಶೇ. 16.4), ಗುರುಗ್ರಾಮ (ಶೇ. 10.7), ಕೊಚ್ಚಿ (ಶೇ. 8.8) ಮತ್ತು ಹೈದರಾಬಾದ್ (ಶೇ. 6.2) ನಗರಗಳು ನಂತರದ ಸ್ಥಾನಗಳಲ್ಲಿವೆ.

# ಬ್ರಿಕ್ಸ್ ಔತಣಕೂಟಕ್ಕೆ ಕೇರಳ, ತೆಲಂಗಾಣ, ಕರ್ನಾಟಕ ತಮಿಳುನಾಡಿನ ಮುಖ್ಯಮಂತ್ರಿಗಳಿಗೆ ಕೇಂದ್ರದ ಆಹ್ವಾನ

**ನವದೆಹಲಿ, ಸೆ.13:** ಪ್ರಧಾನಿ ನರೇಂದ್ರ ಮೋದಿ ಅವರು 'ಭಾರತ ಮಂಡಪಂ'ದಲ್ಲಿ ಆಯೋಜಿಸಿದ್ದ ಬ್ರಿಕ್ಸ್ ಔತಣಕೂಟಕ್ಕೆ, ವಿರೋಧ ಪಕ್ಷಗಳು ಆಡಳಿತ ನಡೆಸುತ್ತಿರುವ ಕೇರಳ, ತೆಲಂಗಾಣ, ಕರ್ನಾಟಕ ಮತ್ತು ತಮಿಳುನಾಡಿನ ಮುಖ್ಯಮಂತ್ರಿಗಳನ್ನೂ ಆಹ್ವಾನಿಸಲಾಗಿತ್ತು ಎಂದು ಸರ್ಕಾರದ ಮೂಲಗಳು ಭಾನುವಾರ ತಿಳಿಸಿವೆ.

ರಾಷ್ಟ್ರ ರಾಜಧಾನಿಯಲ್ಲಿ ನಡೆದ 18ನೇ ಬ್ರಿಕ್ಸ್ ಶೃಂಗಸಭೆಯ ಸಂದರ್ಭದಲ್ಲಿ ಈ ಆಹ್ವಾನಗಳನ್ನು ನೀಡಲಾಗಿತ್ತು; ಈ ಶೃಂಗಸಭೆಯು ಬ್ರಿಕ್ಸ್ ಸದಸ್ಯ ರಾಷ್ಟ್ರಗಳು ಮತ್ತು ಪಾಲುದಾರ ರಾಷ್ಟ್ರಗಳ ನಾಯಕರು ಹಾಗೂ ಹಿರಿಯ ಪ್ರತಿನಿಧಿಗಳನ್ನು ಒಂದೆಡೆ ಸೇರಿಸಿತ್ತು. ಬ್ರಿಕ್ಸ್ ನಾಯಕರು ಮತ್ತು ಪ್ರತಿನಿಧಿಗಳಿಗಾಗಿ ಪ್ರಧಾನಿ ಮೋದಿ ಆಯೋಜಿಸಿದ್ದ ಈ ಔತಣಕೂಟದಲ್ಲಿ ದೆಹಲಿ ಮುಖ್ಯಮಂತ್ರಿ ರೇಖಾಗುಪ್ತಾ, ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್‌ಸಿಂಗ್ ಧಾಮಿ, ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ, ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್, ಪಶ್ಚಿಮ ಬಂಗಾಳದ ಸುವೇಂದು ಅಧಿಕಾರಿ ಸೇರಿದಂತೆ ಎನ್‌ಡಿಎ ಆಡಳಿತವಿರುವ ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳು ಹಾಗೂ ಕೇಂದ್ರ ಸಚಿವರು ಭಾಗವಹಿಸಿದ್ದರು. ಕೇಂದ್ರ ಸಚಿವರಾದ ಅಮಿತ್ ಶಾ, ನಿರ್ಮಲಾ ಸೀತಾರಾಮನ್, ಪಿಯೂಷ್ ಗೋಯಲ್, ಅಶ್ವಿನಿ ವೈಷ್ಣವ್, ಕಿರಣ್ ರಿಜಿಜು, ಪ್ರಲ್ಹಾದ್ ಜೋಶಿ, ಜೆ.ಪಿ. ನಡ್ಡಾ ಮತ್ತು ಶಿವರಾಜ್ ಸಿಂಗ್ ಚೌಹಾಣ್ ಹಾಗೂ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಕೂಡ ಈ ಔತಣಕೂಟದಲ್ಲಿ ಪಾಲ್ಗೊಂಡಿದ್ದರು. ಬ್ರಿಕ್ಸ್ ರಾಷ್ಟ್ರಗಳ ಸಾಂಸ್ಕೃತಿಕ ಪರಂಪರೆ ಮತ್ತು ವೈವಿಧ್ಯವನ್ನು ಬಿಂಬಿಸುವ "ನವರಸ ಯೂನಿವರ್ಸ್ ಆಫ್ ಶೇರ್ಡ್ ಎಮೋಷನ್ಸ್ ಎಂಬ ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮವನ್ನು ಈ ಔತಣಕೂಟದಲ್ಲಿ ಪ್ರದರ್ಶಿಸಲಾಯಿತು.

# ಉಕ್ಕಿನ ತ್ಯಾಜ್ಯದಿಂದ ವಿಶ್ವದ ಅತಿ ಉದ್ದದ ರಸ್ತೆ ನಿರ್ಮಾಣ: ಜಿಂದಾಲ್ ಸ್ಟೀಲ್ ಹೊಸ ಗಿನ್ನೆಸ್ ದಾಖಲೆ

**ರಾಯಗಢ್, ಸೆ. 13:** ಛತ್ತೀಸ್‌ಗಢದ ರಾಯ್ಗಢದಲ್ಲಿ ಸಂಸ್ಕರಿಸಿದ ಉಕ್ಕಿನ ತ್ಯಾಜ್ಯ ಬಳಸಿ ವಿಶ್ವದ ಅತಿ ಉದ್ದದ ರಸ್ತೆಯನ್ನು ನಿರ್ಮಿಸುವ ಮೂಲಕ ಜಿಂದಾಲ್ ಸ್ಟೀಲ್ ಲಿಮಿಟೆಡ್ ಸಂಸ್ಥೆಯು ಗಿನ್ನೆಸ್ ವರ್ಲ್ಡ್ ರೆಕಾರ್ಡ್ಸ್ ಸಾಧನೆ ಮಾಡಿದೆ. ಕೌನ್ಸಿಲ್ ಆಫ್ ಸೈಂಟಿಫಿಕ್ ಆಂಡ್ ಇಂಡಸ್ಟ್ರಿಯಲ್ ರಿಸರ್ಚ್ ಮತ್ತು ಸೆಂಟ್ರಲ್ ರೋಡ್ ರಿಸರ್ಚ್ ಇನ್ಸ್ಟಿಟ್ಯೂಟ್ ಸಹಯೋಗದೊಂದಿಗೆ ಈ ಯೋಜನೆಯನ್ನು ಪೂರ್ಣಗೊಳಿಸಲಾಗಿದೆ. ರಾಯ್‌ಗಢದಲ್ಲಿ ನಿರ್ಮಿಸಲಾದ ಈ 4–ಪಥದರಸ್ತೆಯು 1.85 ಕಿಲೋಮೀಟರ್ ಉದ್ದವಿದ್ದು, ರಾಷ್ಟ್ರೀಯ ಹೆದ್ದಾರಿ–49 ಗೆ ಸಂಪರ್ಕ ಕಲ್ಪಿಸುತ್ತದೆ. ತ್ಯಾಜ್ಯದಿಂದ ಸಂಪತ್ತು: ಉಕ್ಕು ತಯಾರಿಕಾ ಪ್ರಕ್ರಿಯೆಯಲ್ಲಿ ಹೊರಬರುವ 2 ಲಕ್ಷ ಟನ್‌ಗಳಷ್ಟು ಇಎಎಫ್ ಸ್ಟೀಲ್ ಸ್ಲ್ಯಾಗ್ ತ್ಯಾಜ್ಯವನ್ನು ಸಂಸ್ಕರಿಸಿ ಈ ರಸ್ತೆ ನಿರ್ಮಾಣಕ್ಕೆ ಸಂಪೂರ್ಣವಾಗಿ ಬಳಸಲಾಗಿದೆ.

ನೈಸರ್ಗಿಕ ಕಲ್ಲು ಹಾಗೂ ಜಲ್ಲಿಕಲ್ಲುಗಳ ಬಳಕೆಯನ್ನು ಶೇ.100 ರಷ್ಟು ತಡೆಗಟ್ಟಲಾಗಿದ್ದು, ಪರಿಸರ ನಾಶವನ್ನು ತಪ್ಪಿಸಲಾಗಿದೆ. ಸಾಮಾನ್ಯ ರಸ್ತೆಗಳಿಗೆ ಹೋಲಿಸಿದರೆ ಈ ತಂತ್ರಜ್ಞಾನದಿಂದ ರಸ್ತೆ ನಿರ್ಮಾಣ ವೆಚ್ಚವು ಶೇಕಡಾ 40 ರಷ್ಟು




ಕಡಿಮೆಯಾಗಲಿದ್ದು, ರಸ್ತೆಯ ದಪ್ಪ ಶೇಕಡಾ 35 ರಷ್ಟು ಕಡಿಮೆಯಾಗಲಿದೆ.

ಈ ರಸ್ತೆಯು ಸಾಮಾನ್ಯ ರಸ್ತೆಗಳಿಗಿಂತ ಸುಮಾರು 4 ಪಟ್ಟು ಹೆಚ್ಚು ಗಟ್ಟಿಮುಟ್ಟಾಗಿದ್ದು, ಭಾರಿ ವಾಣಿಜ್ಯ ವಾಹನಗಳ ಸಂಚಾರಕ್ಕೆ ಸೂಕ್ತವಾಗಿದೆ. ಸ್ಟೀಲ್ ಗ್ರಿಟ್ ಉತ್ಪನ್ನ ಬಿಡುಗಡೆ: ಇದೇ ಸಂದರ್ಭದಲ್ಲಿ ಜಿಂದಾಲ್ ಸ್ಟೀಲ್ ಸಂಸ್ಥೆಯು ತಾನು ಸಂಸ್ಕರಿಸಿದ ಸ್ಟೀಲ್ ಸ್ಲ್ಯಾಗ್ ಉತ್ಪನ್ನಕ್ಕೆ SteelGrit ಎಂಬ ಬ್ರ್ಯಾಂಡ್ ಹೆಸರನ್ನು ಅನಾವರಣಗೊಳಿಸಿದೆ.

ಈ ಸಾಧನೆಯು ಭಾರತದ ವೃತ್ತಾಕಾರದ ಆರ್ಥಿಕತೆಗೆ ಮತ್ತು ಸುಸ್ಥಿರ ಮೂಲಸೌಕರ್ಯ ಅಭಿವೃದ್ಧಿಗೆ ಹೊಸ ದಾರಿದೀಪವಾಗಿದೆ ಎಂದು ಜಿಂದಾಲ್ ಸ್ಟೀಲ್ ಅಧ್ಯಕ್ಷ ನವೀನ್ ಜಿಂದಾಲ್ ಹಾಗೂ ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್ ತಿಳಿಸಿದ್ದಾರೆ.

# ಚೀನಾದೊಂದಿಗೆ ಮೋದಿ ಮಾತುಕತೆ ನಂತರ ಪ್ರಧಾನಿಯನ್ನು ಪ್ರಶ್ನಿಸಿದ ಜೈರಾಮ್ ರಮೇಶ್

**ನವದೆಹಲಿ, ಸೆ. 13:** ಪ್ರಧಾನಿ ನರೇಂದ್ರ ಮೋದಿ ಹಾಗೂ ಚೀನಾ ಅಧ್ಯಕ್ಷ ಷಿ ಜಿನ್ಪಿಂಗ್ ನಡುವೆ ನಡೆದ ದ್ವಿಪಕ್ಷೀಯ ಮಾತುಕತೆಯ ಬೆನ್ನಲ್ಲೇ, ಗಡಿ ಅತಿಕ್ರಮಣ ನಿರ್ವಹಣೆ, ಆಪರೇಷನ್ ಸಿಂಧೂರ್ ವಿಚಾರದಲ್ಲಿ ಚೀನಾದ ಪಾತ್ರ ಹಾಗೂ ಬೀಜಿಂಗ್ ಮೇಲಿನ ಭಾರತದ ಹೆಚ್ಚುತ್ತಿರುವ ಆರ್ಥಿಕ ಅವಲಂಬನೆ ಕುರಿತು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ (ಸಂಪರ್ಕ ಉಸ್ತುವಾರಿ) ಜೈರಾಮ್ ರಮೇಶ್ ಭಾನುವಾರ ಪ್ರಧಾನಿ ಮೋದಿ ಅವರನ್ನು ಪ್ರಶ್ನಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ರಮೇಶ್, ಮೋದಿ–ಷಿ ಮಾತುಕತೆ ಮುಗಿದಿದ್ದರೂ ಭಾರತದ ಚೀನಾ ನೀತಿಗೆ ಸಂಬಂಧಿಸಿದ ಹಲವು ಪ್ರಮುಖ ಪ್ರಶ್ನೆಗಳು ಇನ್ನೂ ಉತ್ತರವಿಲ್ಲದೆ ಉಳಿದಿವೆ ಎಂದಿದ್ದಾರೆ.

"ಅಧ್ಯಕ್ಷ ಷಿ ಜಿನ್ಪಿಂಗ್ ಅವರೊಂದಿಗಿನ ದ್ವಿಪಕ್ಷೀಯ ಶೃಂಗಸಭೆ ಮುಗಿದಿರುವ ಹಿನ್ನೆಲೆಯಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರಿಗೆ ಭಾರತ ಉತ್ತರಗಳನ್ನು ಬಯಸುತ್ತಿರುವ ನಾಲ್ಕು ಪ್ರಶ್ನೆಗಳು ಇಲ್ಲಿವೆ" ಎಂದು ರಮೇಶ್ ಬರೆದುಕೊಂಡಿದ್ದಾರೆ.

ಗಡಿ ಅತಿಕ್ರಮಣ ವಿಚಾರದಲ್ಲಿ ಭಾರತದ ನಿಲುವನ್ನು ದುರ್ಬಲಗೊಳಿಸಿರುವುದು, ಆಪರೇಷನ್ ಸಿಂಧೂರ್‌ನಲ್ಲಿ ಚೀನಾದ ಪಾತ್ರ ಮತ್ತು ಬೀಜಿಂಗ್ ಮೇಲಿನ "ಅಪಾಯಕಾರಿ ಮಟ್ಟದ ಆರ್ಥಿಕ ಅವಲಂಬನೆ"ಯನ್ನು ಅವರು ಎತ್ತಿ ತೋರಿಸಿದ್ದಾರೆ.

"ಗಡಿ ಅತಿಕ್ರಮಣ ವಿಚಾರದಲ್ಲಿ ನಮ್ಮ ನಿಲುವನ್ನು ಹಾಗೂ ಆಪರೇಷನ್ ಸಿಂಧೂರ್



ಚೀನಾದ ಪಾತ್ರವನ್ನು ಏಕೆ ದುರ್ಬಲಗೊಳಿಸಲಾಗಿದೆ ಹಾಗೆಯೇ ಅಪಾಯಕಾರಿ ಮಟ್ಟದ ಆರ್ಥಿಕ ಅವಲಂಬನೆಗೆ ಏಕೆ ಅವಕಾಶ ನೀಡಲಾಗಿದೆ" ಎಂದು ರಮೇಶ್ ಪ್ರಶ್ನಿಸಿದ್ದಾರೆ.

ನವದೆಹಲಿಯಲ್ಲಿ ನಡೆದ 18ನೇ ಬ್ರಿಕ್ಸ್ ಶೃಂಗಸಭೆಯ ಹೊರತಾಗಿ ಮೋದಿ ಮತ್ತು ಷಿ ಮಾತುಕತೆ ನಡೆಸಿದ ನಂತರ ರಮೇಶ್ ಈ ಟೀಕೆಗಳನ್ನು ಮಾಡಿದ್ದಾರೆ. ಭಾರತ–ಚೀನಾ ಗಡಿ ಹಾಗೂ ದ್ವಿಪಕ್ಷೀಯ ಬಾಂಧವ್ಯವನ್ನು ಸ್ಥಿರಗೊಳಿಸುವ ಪ್ರಯತ್ನಗಳ ಹಿನ್ನೆಲೆಯಲ್ಲಿ ಈ ಸಭೆಯನ್ನು ಬಹಳ ಕುತೂಹಲದಿಂದ ಗಮನಿಸಲಾಗಿತ್ತು.

2020ರಲ್ಲಿ ಪೂರ್ವ ಲಡಾಖ್‌ನಲ್ಲಿ ನಡೆದ ಮಿಲಿಟರಿ ಮುಖಾಮುಖಿಯ ನಂತರ ಭಾರತ–ಚೀನಾ ಸಂಬಂಧಗಳು ಬಿಗಡಾಯಿಸಿವೆ. ಹಲವು ಸಂಘರ್ಷದ ಸ್ಥಳಗಳಲ್ಲಿ ಸೇನಾ ಹಿಂಪಡೆಯುವಿಕೆ ನಡೆದಿದ್ದರೂ, ಎರಡೂ ದೇಶಗಳು ಗಡಿ ನಿಯಂತ್ರಣ ರೇಖೆಯ ಉದ್ದಕ್ಕೂ ಗಮನಾರ್ಹ ಮಿಲಿಟರಿ ಪಡೆಗಳನ್ನು ಮತ್ತು ಮೂಲಸೌಕರ್ಯಗಳನ್ನು ಕಾಯ್ದುಕೊಂಡಿವೆ.

ಗಡಿಯ ಸ್ಥಿತಿಗತಿ ಕುರಿತು ಕಾಂಗ್ರೆಸ್ ಸರ್ಕಾರವನ್ನು ಪದೇ ಪದೇ ಪ್ರಶ್ನಿಸಿದ್ದು, ಚೀನಾದ ಅತಿಕ್ರಮಣಗಳ ಬಗ್ಗೆ ಹೆಚ್ಚಿನ ಸ್ಪಷ್ಟತೆಯನ್ನು ಕೋರಿದೆ. ಆದರೆ, ಭಾರತದ ಪ್ರಾದೇಶಿಕ ಸಮಗ್ರತೆ ಮತ್ತು ರಾಷ್ಟ್ರೀಯ ಭದ್ರತೆ ಅತ್ಯಂತ ಪ್ರಮುಖವಾಗಿದ್ದು, ಮಿಲಿಟರಿ ಸಿದ್ಧತೆಯೊಂದಿಗೆ ರಾಜತಾಂತ್ರಿಕ ಮಾತುಕತೆಗಳನ್ನು ಮುಂದುವರಿಸಲಾಗುತ್ತಿದೆ ಎಂದು ಸರ್ಕಾರ ಪ್ರತಿಪಾದಿಸಿದೆ.

ಪಹಲ್ಗಾಮ್ ಉಗ್ರರ ದಾಳಿಯ ನಂತರ ಭಾರತ ನಡೆಸಿದ ಮಿಲಿಟರಿ ಕಾರ್ಯಾಚರಣೆಯಾದ 'ಆಪರೇಷನ್ ಸಿಂಧೂರ್' ಅನ್ನು ಉಲ್ಲೇಖಿಸಿದ ರಮೇಶ್, ಈ ಘಟನೆಯಲ್ಲಿ ಚೀನಾದ ಪಾತ್ರಕ್ಕೆ ಸಂಬಂಧಿಸಿದಂತೆ ಸರ್ಕಾರದ ನಿಲುವನ್ನು ಪ್ರಶ್ನಿಸಿದ್ದಾರೆ. ಆದರೆ, ತಮ್ಮ ಹೇಳಿಕೆಯಲ್ಲಿ ಅವರು ಈ ಆರೋಪಕ್ಕೆ ಆಧಾರವಾಗಿರುವ ನಿರ್ದಿಷ್ಟ ಸಾಕ್ಷ್ಯಾಧಾರ ಅಥವಾ ಕ್ರಮಗಳನ್ನು ಸ್ಪಷ್ಟಪಡಿಸಿಲ್ಲ.

ಚೀನೀ ಸರಕುಗಳು ಮತ್ತು ಕೈಗಾರಿಕಾ ಕಚ್ಚಾವಸ್ತುಗಳ ಮೇಲೆ ದೇಶದ ನಿರಂತರ ಅವಲಂಬನೆಯನ್ನು ಬೆಟ್ಟು ಮಾಡಿದ ಕಾಂಗ್ರೆಸ್ ನಾಯಕ, ಭಾರತ–ಚೀನಾ ಸಂಬಂಧಗಳ ಆರ್ಥಿಕ ಆಯಾಮದತ್ತ ಗಮನ ಸೆಳೆದಿದ್ದಾರೆ. ಶತಕೋಟಿ ಡಾಲರ್‌ಗಳ ದ್ವಿಪಕ್ಷೀಯ ವ್ಯಾಪಾರದೊಂದಿಗೆ ಚೀನಾ ಭಾರತದ ಪ್ರಮುಖ ವ್ಯಾಪಾರ ಪಾಲುದಾರನಾಗಿ ಉಳಿದಿದೆ. ಭಾರತೀಯ ಕೈಗಾರಿಕೆಗಳು ಎಲೆಕ್ಟ್ರಾನಿಕ್ಸ್, ಔಷಧೀಯ ಕಚ್ಚಾವಸ್ತುಗಳು, ಯಂತ್ರೋಪಕರಣಗಳು ಮತ್ತು ಸೌರ ಉಪಕರಣಗಳನ್ನು ಚೀನಾದಿಂದ ದೊಡ್ಡ ಪ್ರಮಾಣದಲ್ಲಿ ಆಮದು ಮಾಡಿಕೊಳ್ಳುತ್ತಿವೆ.

# ಬ್ರಿಕ್ಸ್ ಭೋಜನಕೂಟದ ಆಹಾರ ಪಟ್ಟಿಯಿಂದ ರಾಜಕೀಯ ಕಿಚ್ಚು: ಕಾಂಗ್ರೆಸ್–ಬಿಜೆಪಿ ನಡುವೆ ವಾಕ್ಸಮರ

**ನವದೆಹಲಿ, ಸೆ.13:** ಬ್ರಿಕ್ಸ್ ಶೃಂಗಸಭೆಯ ನಾಯಕರು ಮತ್ತು ಪ್ರತಿನಿಧಿಗಳಿಗೆ ಸಂಪೂರ್ಣ ಸಸ್ಯಾಹಾರಿ ಪದಾರ್ಥಗಳನ್ನು ಒಳಗೊಂಡ ಭೋಜನಕೂಟವನ್ನು ಆಯೋಜಿಸಿದ ಬೆನ್ನಲ್ಲೇ, ಭಾನುವಾರ ಕಾಂಗ್ರೆಸ್ ಮತ್ತು ಬಿಜೆಪಿ ನಡುವೆ ರಾಜಕೀಯ ಸಮರ ಏರ್ಪಟ್ಟಿದೆ. ಆಡಳಿತಾರೂಢ ಬಿಜೆಪಿಯು ತನ್ನ ಆಹಾರ ಆಯ್ಕೆಗಳನ್ನು ಅಂತಾರಾಷ್ಟ್ರೀಯ ಅತಿಥಿಗಳ ಮೇಲೆ ಹೇರುತ್ತಿದೆ ಎಂದು ವಿರೋಧ ಪಕ್ಷ ಕಾಂಗ್ರೆಸ್ ಆರೋಪಿಸಿದೆ.

ನವದೆಹಲಿಯ ಭಾರತ್ ಮಂಟಪದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಆಯೋಜಿಸಿದ್ದ ಬ್ರಿಕ್ಸ್ ಶೃಂಗಸಭೆಯ ಭೋಜನಕೂಟದಲ್ಲಿ ಸಂಪೂರ್ಣ ಸಸ್ಯಾಹಾರಿ ಊಟವನ್ನು ಬಡಿಸಿದ ಮರುದಿನ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಪ್ರತಿಕ್ರಿಯಿಸಿ, ಭಾರತದ ಜನಸಂಖ್ಯೆಯ ಪ್ರಮುಖ ಭಾಗವು ಮಾಂಸಾಹಾರಿ ಆಹಾರವನ್ನು ಸೇವಿಸುತ್ತದೆ ಎಂಬುದನ್ನು ಎತ್ತಿ ತೋರಿಸಿದ್ದಾರೆ.

"**ದಾಖಲೆಗಾಗಿ ಹೇಳುವುದಾದರೆ:** ಶೇಕಡಾ 80 ರಷ್ಟು ಭಾರತೀಯರು ಮಾಂಸಾಹಾರಿಗಳು. ಭಾರತೀಯ ಮಾಂಸಾಹಾರಿ ಅಡುಗೆ ಅತ್ಯಂತ ರುಚಿಕರವಾಗಿರುತ್ತದೆ. ನನ್ನ ಸಹೋದರಿಯ ಚೋಲೆ ಭಟೂರೆ ಖಾದ್ಯದಂತೆಯೇ ಅದೂ ಅದ್ಭುತವಾಗಿರುತ್ತದೆ" ಎಂದು ಗಾಂಧಿ ಹೇಳಿದ್ದಾರೆ.

ಇದೇ ವಿಚಾರವಾಗಿ ಮಾತನಾಡಿದ ಕಾಂಗ್ರೆಸ್ ವಕ್ತಾರ ಪವನ್ ಖೇರಾ, ಬಿಜೆಪಿಯ ಆಹಾರ ಆದ್ಯತೆಗಳು ಈಗ ದೇಶೀಯ ರಾಜಕೀಯವನ್ನು ದಾಟಿ ಅಂತಾರಾಷ್ಟ್ರೀಯ ಮಟ್ಟಕ್ಕೂ ತಲುಪಿವೆ ಎಂದು ಆಪಾದಿಸಿದ್ದಾರೆ. "ಸಹೋದರ ಭಾರತೀಯರ ಮೇಲೆ ತಮ್ಮ ಆಹಾರದ ಆಯ್ಕೆಗಳನ್ನು ಹೇರುವ ಬಿಜೆಪಿಯ ಪ್ರವೃತ್ತಿ ಈಗಾಗಲೇ ಕಳವಳಕಾರಿಯಾಗಿದೆ. ಈಗ ಅವರು ಜಾಗತಿಕ ಗಣ್ಯರ ಮೇಲೆಯೂ ತಮ್ಮ ಆದ್ಯತೆಗಳನ್ನು ಹೇರುವ ಮೂಲಕ ಅದನ್ನು ಇನ್ನೊಂದು ಹಂತಕ್ಕೆ ಕೊಂಡೊಯ್ದಿದ್ದಾರೆ," ಎಂದು ಖೇರಾ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

ಇದಕ್ಕೆ ತಿರುಗೇಟು ನೀಡಿದ ಬಿಜೆಪಿ, ಆಗಮಿಸಿದ ನಾಯಕರಿಗೆ ಬಡಿಸಿದ ಆಹಾರವನ್ನು ಕಾಂಗ್ರೆಸ್ ರಾಜಕೀಯಗೊಳಿಸುತ್ತಿದೆ ಎಂದು ಟೀಕಿಸಿದೆ. ಕೇಂದ್ರ ಸಚಿವ ಕಿರಣ್ ರಿಜಿಜು ಅವರು ಕಾಂಗ್ರೆಸ್ ಈ ಮೆನುವನ್ನು ಏತಕ್ಕಾಗಿ ರಾಜಕೀಯ ವಿಷಯವನ್ನಾಗಿ ಮಾಡುತ್ತಿದೆ ಎಂದು ಆಶ್ಚರ್ಯ ವ್ಯಕ್ತಪಡಿಸಿದ್ದು, ಬಂದಿದ್ದ ಅತಿಥಿಗಳು ಭಾರತೀಯ ಸಸ್ಯಾಹಾರಿ ಅಡುಗೆಯನ್ನು ಸವಿದು ಆನಂದಿಸಿದ್ದಾರೆ ಎಂದು ಪ್ರತಿಪಾದಿಸಿದ್ದಾರೆ. "ಬ್ರಿಕ್ಸ್ ದೇಶಗಳ ನಾಯಕರಿಗೆ ಬಡಿಸಿದ ಆಹಾರದ ಮೆನುವಿನ ಮೇಲೆಯೂ ಕಾಂಗ್ರೆಸ್ ಪಕ್ಷ ರಾಜಕೀಯ ಮಾಡುತ್ತಿರುವುದನ್ನು ನಂಬಲು ಸಾಧ್ಯವಾಗುತ್ತಿಲ್ಲ. ವಿವಿಧ ಪ್ರಾದೇಶಿಕ ಸಂಪ್ರದಾಯಗಳ ಜೊತೆಗೆ ರುಚಿ ಮತ್ತು ಪೌಷ್ಟಿಕಾಂಶದ ವೈವಿಧ್ಯತೆಯಿಂದ ಕೂಡಿದ ಭಾರತೀಯ ಸಸ್ಯಾಹಾರಿ ಅಡುಗೆಯನ್ನು ನಮ್ಮ ಅತಿಥಿಗಳು ಇಷ್ಟಪಟ್ಟು ಸವಿದಿದ್ದಾರೆ" ಎಂದು ರಿಜಿಜು ಸಾಮಾಜಿಕ ಜಾಲತಾಣದಲ್ಲಿ ಬರೆದುಕೊಂಡಿದ್ದಾರೆ

# ಪ್ರತಿಪಕ್ಷ ನಾಯಕ ಅಶೋಕ್, ವಿಜಯೇಂದ್ರ ಅವರನ್ನು ಸರಿಸಿ ಅಧಿಕಾರಕ್ಕೆ ಬರೋ ಆಸೆ ಎಚ್.ಡಿ.ಕುಮಾರಸ್ವಾಮಿಯದು: ಸಿಎಂ ಡಿ.ಕೆ.ಶಿವಕುಮಾರ್ ವ್ಯಂಗ್ಯ

**ನಮ್ಮ ಗ್ಯಾರಂಟಿ ಯೋಜನೆಗಳನ್ನು ಟ್ರಂಪ್ ಕೂಡ ನಕಲು ಮಾಡುತ್ತಿದ್ದಾರೆ**

**ಬೆಂಗಳೂರು, ಸೆ.13:** "ಚುನಾವಣೆ ಹತ್ತಿರ ಬರಲಿ ಅಶೋಕ್ ಹಾಗೂ ವಿಜಯೇಂದ್ರ ಅವರಿಗೆ ಯಾವ ಅಧಿಕಾರವೂ ಇರೋದಿಲ್ಲ. ಬೇರೆಯವರು (ಕುಮಾರಸ್ವಾಮಿ)ಪ್ಯಾರಾಶೂಟ್ ಮೂಲಕ ಇಳಿಯುತ್ತಾರೆ ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ವ್ಯಂಗ್ಯವಾಡಿದರು.

"ಅಶೋಕ್, ವಿಜಯೇಂದ್ರ ಅವರ ಕತೆ ಏನಿದ್ದರೂ, ಬರೀ ಬುಟ್ಟಿ ಬೇವಿನಸೊಪ್ಪು, ನಂದೀ ಬೆಳಗು ಪೂಜಾರಿ ಅನ್ನೋ ತರಹ. ಕುಮಾರಸ್ವಾಮಿ ಇವರಿಬ್ಬರನ್ನು ಇಳಿಸಿ ನನಗೇನಾದರೂ ಸಿಗಬಹುದಾ ಅಂತಾ ನೋಡುತ್ತಿದ್ದಾರೆ. ಹೀಗಾಗಿ ದಿನಕ್ಕೊಂದು ಹೇಳಿಕೆ ನೀಡುತ್ತಿದ್ದಾರೆ. ಬಾಂಬ್ ಹಾಕುತ್ತೇನೆ ಎನ್ನುತ್ತಿದ್ದಾರೆ" ಎಂದೂ ಸಿಎಂ ಅವರು ಛೇಡಿಸಿದರು.

ಕೆಪಿಸಿಸಿ ಕಚೇರಿಯಲ್ಲಿ ಭಾನುವಾರ ಬಿಜೆಪಿ ಮಾಜಿ ಶಾಸಕ ನೆ.ಲ.ನರೇಂದ್ರಬಾಬು ಅವರ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಮಾತನಾಡಿದರು.

"ಕುಮಾರಸ್ವಾಮಿ ಅವರಿಗೆ ಕೇಂದ್ರದಲ್ಲಿ ದೊಡ್ಡ ಮಂತ್ರಿ ಸ್ಥಾನ ಸಿಕ್ಕಿದೆ. ಅದರ ಮೂಲಕ ಕರ್ನಾಟಕದ 50 ಸಾವಿರ ಜನರಿಗೆ ಉದ್ಯೋಗ ಸಿಗುವಂತೆ ಮಾಡಲಿ. ಅವರಿಗೆ ಎಲ್ಲಿ ಬೇಕೋ ಅಲ್ಲಿ, ಮಂಡ್ಯದಲ್ಲೇ ಬೇಕಾದರೂ ಭೂಸ್ವಾಧೀನ ಮಾಡಿ ಕೊಡೋಣ. ಆದರೆ ಅವರು ನನ್ನನ್ನು ಅಧಿಕಾರದಿಂದ ಇಳಿಸಿಬಿಡ್ತೇನೆ, ದೆಹಲಿಯಿಂದ ಬಾಂಬ್ ಹಾಕಿ ಬಿಡ್ತೇನೆ, ಅಲ್ಲೋಲಕಲ್ಲೋಲ ಮಾಡಿಬಿಡ್ತೇನೆ ಅಂತ ಮಾತಾಡುತ್ತಿದ್ದಾರೆ" ಎಂದು ತಿರುಗೇಟು ನೀಡಿದರು.

**ಜನರ ನಡುವೆ ನಾಯಕನಿದ್ದರೆ ಜನ ಜಾತಿ ಕೇಳುವುದಿಲ್ಲ:** ರಾಜಕೀಯ ಸಾಧ್ಯತೆಗಳ ಕಲೆ. ಜನರ ನಡುವೆ ಇದ್ದರೆ ಜನ ಜಾತಿ ಕೇಳಲ್ಲ. ನಾಯಕ ಕ್ರಿಯಾಶೀಲನಾಗಿದ್ದರೆ ಜನ ಗೆಲ್ಲಿಸುತ್ತಾರೆ. ಕೆಲವರು ಭಾವನೆಗಳ ಮೇಲೆ ಜಾತಿ ಮಾಡುತ್ತಾರೆ. ನನಗೆ ಜಾತಿಗಿಂತ ನೀತಿ, ಸಿದ್ಧಾಂತದ ಮೇಲೆ ನಂಬಿಕೆ ಎಂದು ಹೇಳಿದರು. "ನನಗೆ ಶ್ರಮ, ಸಿದ್ಧಾಂತ, ಕಾಯಕದ ಮೇಲೆ ನಂಬಿಕೆ. ಶ್ರಮ ಇದ್ದ ಕಡೆ ಫಲವಿದೆ. ಒಂಟಿಯಾಗಿರುವ ನಾಯಕ ಎಂದಿಗೂ ಗೆಲುವು ಕಾಣುವುದಿಲ್ಲ. ಜನ ಜಾತಿ ನೋಡುವ ಹಾಗಿದ್ದರೆ ದೊಡ್ಡಬಳ್ಳಾಪುರದಲ್ಲಿ ಬಿಜೆಪಿ ಅಭ್ಯರ್ಥಿ ಗೆಲ್ಲಲು ಹೇಗೆ ಸಾಧ್ಯ? ಸಿಂಧ್ಯಾ ಅವರು ನನ್ನ ಕ್ಷೇತ್ರದಲ್ಲಿ 6 ಬಾರಿ ಶಾಸಕರಾಗಿದ್ದರು. ಅಲ್ಲಿ ಮರಾಠಿ ಮತದಾರರ ಸಂಖ್ಯೆ 3 ಸಾವಿರವೂ ದಾಟಲ್ಲ. ರಾಮನಗರದಲ್ಲಿ ನಿಖಿಲ್ ಎದುರು "ಇಕ್ಬಾಲ್ ಹುಸೇನ್ ಗೆಲ್ಲಲು ಹೇಗೆ ಸಾಧ್ಯ" ಎಂದು ಹೇಳಿದರು.

"ಮಾಜಿ ಮೇಯರ್ ನಾಗರಾಜ್ ಅವರಿಗೆ, ಕೆ.ಎಂ.ನಾಗರಾಜ್ ಅವರಿಗೆ ಎಸ್.ಎಂ.ಕೃಷ್ಣ ಅವರ ಕಾಲದಲ್ಲಿ ಟಿಕೆಟ್ ನೀಡಲು ತೀರ್ಮಾನಿಸಲಾಯಿತು. ಆಗ ನಾವು ನರೇಂದ್ರ ಬಾಬು ಹಾಗೂ ಚಂದ್ರಶೇಖರ್ ಅವರಿಗೆ ನೀಡೋಣ ಎಂದು ಎಸ್.ಎಂ.ಕೃಷ್ಣ ಅವರಿಗೆ ಹೇಳಿದೆವು. ಆಗ ಅನೇಕರು ಎರಡೂ ಕ್ಷೇತ್ರಗಳು ಒಕ್ಕಲಿಗರ ಪ್ರಾಬಲ್ಯವಿದೆ. ಅಲ್ಲಿ ಪರಿಶಿಷ್ಟರು, ಹಿಂದುಳಿದ ವರ್ಗದವರು ಗೆಲ್ಲಲು ಸಾಧ್ಯವೇ ಎಂದು ಕೇಳಿದರು. ಆದರೆ ಇವರಿಬ್ಬರೂ ಗೆದ್ದರು ಎಂದರು.

**ಗ್ಯಾರಂಟಿ ಯೋಜನೆಗಳನ್ನು ಟ್ರಂಪ್ ನಕಲು ಮಾಡುತ್ತಿದ್ದಾರೆ:** "ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಲು ಸಾಧ್ಯವಿಲ್ಲ ಎಂದು ವಿರೋಧ ಪಕ್ಷಗಳು ಟೀಕೆ ಮಾಡಿದವು. ಆದರೆ ಇಂದು ನಾವು ಗ್ಯಾರಂಟಿಗಳಿಂದಲೇ ದೇಶಕ್ಕೆ ಮಾದರಿಯಾಗಿದ್ದೇವೆ. ಬಿಹಾರ, ಮಧ್ಯಪ್ರದೇಶ, ಉತ್ತರ ಪ್ರದೇಶ ಹೀಗೆ ಎಲ್ಲಾ ಕಡೆ ಕರ್ನಾಟಕ ಮಾದರಿ ನಕಲು ಮಾಡಿದರು ಈಗ ಅಮೆರಿಕ ಅಧ್ಯಕ್ಷ ಟ್ರಂಪ್ ಕೂಡ ನಕಲು ಮಾಡುತ್ತಿದ್ದಾರೆ. ನನಗೆ ಮತ ಹಾಕಿ, ಇಂತಿಷ್ಟು ಡಾಲರ್ ಹಣ ನೀಡುತ್ತೇನೆ ಎಂದು ಹೇಳುತ್ತಿದ್ದಾರೆ. ನಮ್ಮ ಆಲೋಚನೆ ಇಡೀ ವಿಶ್ವಕ್ಕೆ ಪರಿಚಯವಾಗುತ್ತಿದೆ" ಎಂದರು.

ಗ್ಯಾರಂಟಿ ಯೋಜನೆಗಳನ್ನು ಎಲ್ಲಾ ಪಕ್ಷ, ಜಾತಿಗಳಿಗೂ ನೀಡುತ್ತಿದ್ದೇವೆ. ಕಾಂಗ್ರೆಸ್ ಪಕ್ಷಕ್ಕೆ ಬಂದ ಮತಗಳು 1.34 ಲಕ್ಷ ಆದರೆ 4.44 ಕೋಟಿ ಜನರಿಗೆ ಅನ್ನಭಾಗ್ಯ ನೀಡುತ್ತಿದ್ದೇವೆ. ಅದಕ್ಕೆ ಕಾಂಗ್ರೆಸ್ ಶಕ್ತಿಯೇ ದೇಶದ ಶಕ್ತಿ, ಇತಿಹಾಸ" ಎಂದರು. "ಅಸ್ಸಾಂ ರಾಜ್ಯದಲ್ಲಿ ಕೆಲವರಿಗೆ ಮಾತ್ರ ಗ್ಯಾರಂಟಿ ಯೋಜನೆಗಳನ್ನು ನೀಡುತ್ತಿದ್ದಾರೆ. ಎಸ್‌ಸಿಪಿ, ಟಿಎಸ್‌ಪಿ ಜಾರಿಗೆ ತಂದಿದ್ದು ಕಾಂಗ್ರೆಸ್ ಪಕ್ಷ. ವಿದ್ಯಾರ್ಥಿಗಳಿಗೆ ಬಸ್‌ಪಾಸ್ ಉಚಿತವಾಗಿ ನೀಡಲಾಗುತ್ತಿದೆ. ಜನರ ಮನೆಬಾಗಿಲಿಗೆ ಸರ್ಕಾರ ತಲುಪಿಸಿದ್ದೇವೆ. ಪ್ರಜಾಸೇವೆ ಮಾಡುತ್ತಿದ್ದೇವೆ. ಇದನ್ನು ಶಾಸಕರು ಹೇಗೆ ಬಳಸಿಕೊಳ್ಳುತ್ತಾರೋ ತಿಳಿದಿಲ್ಲ. ನಾನಂತೂ ಆದಷ್ಟು ಯಶಸ್ವಿಗೊಳಿಸುವೆ"

"ಭಾರತ್ ಜೋಡೋ ಮೂಲಕ ದೇಶದ ಐಕ್ಯತೆ, ಸಮಗ್ರತೆಯನ್ನು ಕಾಪಾಡಲು ಮಾಡಲಾಯಿತು. ಈ ಪಾದಯಾತ್ರೆ ನಡೆದ ಸ್ಥಳಗಳಲ್ಲಿ ಕಾಂಗ್ರೆಸ್ ಪಕ್ಷ ಗೆದ್ದಿತ್ತು. ಇದೇ ಅಲೆ 2028 ರಲ್ಲಿಯೂ ಇರಲಿದೆ. ಕಾಂಗ್ರೆಸ್ ಪಕ್ಷ ಮತ್ತೆ ಅಧಿಕಾರಕ್ಕೆ ಬರುವ ವಿಶ್ವಾಸವಿದೆ". "ಈ ದೇಶಕ್ಕೆ ಸ್ವಾತಂತ್ರ್ಯ, ರಾಷ್ಟ್ರಧ್ವಜ, ಸಂವಿಧಾನ, ರಾಷ್ಟ್ರಗೀತೆ ಸೇರಿದಂತೆ ಅನೇಕ ಕೊಡುಗೆಗಳನ್ನು ನೀಡಿದ್ದು ಕಾಂಗ್ರೆಸ್ ಪಕ್ಷ. ಬಡವರ ಪರ ಆಲೋಚನೆ ಮಾಡುವುದು, ಕಲ್ಯಾಣ ಯೋಜನೆಗಳನ್ನು ಜಾರಿಗೆ ತರುವುದು, ತಂದಿರುವುದು ಕಾಂಗ್ರೆಸ್ ಪಕ್ಷ ಮಾತ್ರ. ಅದಕ್ಕೆ ನಾವು ಕಾರ್ಯಕರ್ತರಿಗೆ ಅಧಿಕಾರ ನೀಡಲು ಮುಂದಾಗಿದ್ದೇವೆ" ಎಂದರು.

**ಪಂಚಾಯತಿ ಮಟ್ಟದಲ್ಲಿ 70 ಸಾವಿರ ಜನರಿಗೆ ಅಧಿಕಾರ:** "ಪ್ರತಿ ಪಂಚಾಯತಿಯಲ್ಲೂ 6 ಜನರಿಗೆ ಗ್ಯಾರಂಟಿ ಸಮಿತಿಯಲ್ಲಿ ಇರಲು ಅವಕಾಶ ನೀಡಲಾಗಿದೆ. ಇದರಿಂದ 70 ಸಾವಿರ ಜನರಿಗೆ ಅಧಿಕಾರ ಸಿಗಲಿದೆ. ಇದರಿಂದ ನೀವುಗಳು ವಿಧಾನಸೌಧಕ್ಕೆ ಬರುವ ಅಧಿಕಾರ, ಜನರ ಸೇವೆ ಮಾಡಲು ಅವಕಾಶ ಸಿಗಲಿದೆ" ಎಂದರು.

"ಯುವಕರು ಕೌಶಲ್ಯದ ಮೇಲೆ ಹೆಚ್ಚು ಆದ್ಯತೆ ನೀಡಬೇಕು. ಇದರಿಂದ ಹೆಚ್ಚು ಅವಕಾಶ ಸೃಷ್ಟಿಯಾಗಲಿದೆ. ಎಲ್ಲರ ಕೆಲಸಗಳನ್ನು ಎಲ್ಲರೂ ಮಾಡಲು ಸಾಧ್ಯವಿಲ್ಲ. ಅದಕ್ಕೆ ಅದರದೇ ಆದ ಕೌಶಲ್ಯ ಮುಖ್ಯ. ಉದ್ಯೋಗ ಮಾಡುವ ಅವಕಾಶವಿದೆ" ಎಂದರು. "ಎಲ್ಲಾ ಜಾತಿಗಳು ಒಂದೇ ಎಂದು ನಾವು ಭಾವಿಸಿದ್ದೇವೆ. ಶಾಲೆಗಳಲ್ಲಿ ಯಾರೂ ಜಾತಿ ಕೇಳುವುದಿಲ್ಲ. ನಮ್ಮೆಲ್ಲರ ರಕ್ತ ಕೆಂಪು. ಬೆವರು ಉಪ್ಪು. ಮಾನವೀಯತೆ ಕಾಂಗ್ರೆಸ್ ಪಕ್ಷದ ಆಧಾರ ಸ್ತಂಭ. ಬಸವಣ್ಣ, ಏಸು ಸೇರಿದಂತೆ ಅನೇಕ ಪೂಜ್ಯರ ಆಶೀರ್ವಾದ ನಮ್ಮ ಸರ್ಕಾರದ ಮೇಲಿದೆವು". "ಯುವಕರು ಭಾರತ್ ಜೋಡೋ ಸಂಘಗಳನ್ನು ಯುವಕರು ಸದುಪಯೋಗ ಮಾಡಿಕೊಳ್ಳಬೇಕು. ನಾಟಕ, ಕ್ರೀಡೆ ಸೇರಿದಂತೆ ಹಾಗೂ ಇತರೇ ಕಾರ್ಯಗಳನ್ನು ಯುವಕರು ಮಾಡಬೇಕು. ಕ್ರಿಯಾಶೀಲವಾಗಿ ಇದರಲ್ಲಿ ತೊಡಗಿಕೊಳ್ಳಬೇಕು" ಎಂದರು.

**ಆತ ಪಂಕ್ಚರ್ ಹಾಕದಿದ್ದರೆ ಅವನ ಗಾಡಿ ಓಡುತ್ತದೆಯೇ?** "ಈ ದೇಶದಲ್ಲಿ ಯಾವ ಯಾವ ಜನಪರ ಕಾರ್ಯಕ್ರಮ ಇದ್ದಾವೋ ಅದೆಲ್ಲವೂ ಕಾಂಗ್ರೆಸ್ ಪಕ್ಷದ ಕೊಡುಗೆ. 100 ದಿನ ತುಂಬಿದಕ್ಕೆ ಅನೇಕ ಹೊಸ ಕಾರ್ಯಕ್ರಮ ನೀಡಲಾಗಿದೆ. ಎಲ್ಲಾ ವರ್ಗಕ್ಕೂ ಕಾರ್ಯಕ್ರಮ ನೀಡುತ್ತಿದ್ದೇವೆ. ಈ ದೇಶದ ಅಲ್ಪ ಸಂಖ್ಯಾತರನ್ನು ವೈರಿಗಳ ತರ ನೋಡಲಾಗುತ್ತಿದೆ. ಹಾಗಾದರೆ ಕೇಂದ್ರ ಸರ್ಕಾರ ಅ ಲ್ಪ



ಸಂಖ್ಯಾತ ಇಲಾಖೆಯನ್ನು ಮುಚ್ಚಿಬಿಡಲಿ. ದೇಶದಿಂದ ಹೊರಗೆ ಹೋಗಿ ಎಂದು ಹೇಳಲು ಆಗುತ್ತದೆಯೇ? ಶೇ.13 ರಷ್ಟು ಅವರ ಜನಸಂಖ್ಯೆಯಿದೆ. ಯಾರೋ ಒಬ್ಬ ಪಂಕ್ಚರ್ ಹಾಕುವವರು ಎಂದು ಹೇಳಿದ. ಅವನ ಪಕ್ಷದವರು ಅಲ್ಪಸಂಖ್ಯಾತರಿಗೆ ಟಿಕೆಟ್ ನೀಡಲಿಲ್ಲ. ಮಂತ್ರಿ ಮಾಡಲಿಲ್ಲ. ಆತ ಪಂಕ್ಚರ್ ಹಾಕದಿದ್ದರೆ ಅವನ ಗಾಡಿ ಓಡುತ್ತದೆಯೇ" ಎಂದರು.

"ಜನರಿಗೆ ಅನುಕೂಲ ಮಾಡಲು ಹೊರಟರೆ ಬಂಡೆಯನ್ನು ತಬ್ಬುತ್ತಿದ್ದಾರೆ. ಒಂದು ದಿನವೂ ಬಂಡೆ ನೋಡಿರಲಿಲ್ಲ. ನಾವು ಮೂಲೆಯಲ್ಲಿ ಮಾಡಲು ಹೊರಟಿದ್ದೆವು. ಡಬಲ್ ಎಂಜಿನ್ ಸರ್ಕಾರ ಇದ್ದಾಗ ಗುರುತಾಗುವಂತಹ ಒಂದೇ ಒಂದು ಕಾರ್ಯಕ್ರಮ ಮಾಡಿದ್ದಾರೆಯೇ? ಗುರುತಾಗಿ ಒಂದೇ ಒಂದು ಕಲ್ಲು ನೆಟ್ಟಿದ್ದಾರೆಯೇ? ಯಾವ ಕಾರ್ಯಕ್ರಮವೂ ಮಾಡಲಿಲ್ಲ. ಆತ ಮೊನ್ನೆ ಸಿಕ್ಕಿದಾಗ ಪರಿಹಾರ ಹೇಳಿ ಎಂದು ಕೇಳಿದೆ. ಸಾರ್ವಜನಿಕ ಸಾರಿಗೆಯಲ್ಲಿ ಓಡಾಟ ಮಾಡಿ ಎಂದ. ಆಗ ನಾನು ಅವನಿಗೆ, ಪತ್ನಿ ಜೊತೆ ಬಸ್‌ನಲ್ಲಿ ಓಡಾಡಿ ಎಂದು ಸಲಹೆ ನೀಡಿದೆ. ಆತ ದೆಹಲಿಗೆ ಬಸ್‌ನಲ್ಲಿ ಹೋಗಲಿ" ಎಂದು ಕುಟುಕಿದರು.

ಕಾಂಗ್ರೆಸ್ ಪಕ್ಷದಲ್ಲಿ ಹಳಬರು ಹೊಸಬರು ಎನ್ನುವ ಭೇದವಿಲ್ಲ. ಜಗದೀಶ್ ಶೆಟ್ಟರ್ ಅವರು ಸೋತರೂ ಎಂಎಲ್ ಸಿ ಮಾಡಲಾಯಿತು. ಸವದಿ ಅವರನ್ನು ಮಂತ್ರಿ ಮಾಡಲಾಯಿತು. ಎಷ್ಟೋ ಜನ ದಳದಲ್ಲಿ ಇದ್ದವರಿಗೂ ಅವಕಾಶ ನೀಡಿದ್ದೇವೆ. ಇದರಿಂದ ನಮ್ಮ ಪಕ್ಷದವರಿಗೆ ತೊಂದರೆ ಯಾಗಿದೆ. ಏಕೆಂದರೆ ನಮ್ಮನ್ನು ನಂಬಿದವರಿಗೆ, ದುಡಿಯುವ ವರಿಗೆ ಅವಕಾಶ ನೀಡಬೇಕು" "ಬಿಜೆಪಿಗೆ ನಮ್ಮ 13 ಮಂದಿಯನ್ನು ಕರೆದುಕೊಂಡು ಹೋದರು. ಅದರಲ್ಲಿ 3–4 ಜನ ಮಾತ್ರ ಚಲಾವಣೆಯಲ್ಲಿ ಇದ್ದಾರೆ. ಅಲ್ಲಿ ಬದುಕಲು ಆಗುವುದಿಲ್ಲ. ಆದರೆ ಕಾಂಗ್ರೆಸ್ ಪಕ್ಷಕ್ಕೆ ಬೇರೆಯವರು ಬಂದು ಬದುಕಬಹುದು" ಎಂದರು.

**ಪಕ್ಷಕ್ಕೆ ಬರುವವರಿಗೆ ಅವಕಾಶ:**

"ಸಾಕಷ್ಟು ಬಿಜೆಪಿ ಹಾಗೂ ಜನತಾದಳದ ನಾಯಕರು ನನ್ನೊಂದಿಗೆ ಹಾಗೂ ಪಕ್ಷದ ಅಧ್ಯಕ್ಷರೊಂದಿಗೆ ಚರ್ಚಿಸುತ್ತಿದ್ದಾರೆ.

ನಮ್ಮ ಪಕ್ಷದ ಸಿದ್ಧಾಂತ ಹಾಗೂ ಪಕ್ಷದ ವರಿಷ್ಠರು ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು, ನಿಕಟಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ನಮ್ಮೆಲ್ಲರ ಬಗ್ಗೆ ನಂಬಿಕೆವುಳ್ಳವರ ಪಟ್ಟಿ ತಯಾರಿಸಲು ಜಿಲ್ಲಾ ಸಚಿವರು ಹಾಗೂ ಅಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ. ಪಕ್ಷಕ್ಕೆ ಬರುವವರಿಗೆ ಅವಕಾಶ ಮಾಡಿಕೊಡಲಾಗುವುದು ಎಂದರು. ಈಗಾಗಲೇ ವಿವಿಧ ಸ್ಥಾನಗಳಲ್ಲಿ ಹಲವರಿಗೆ ಅವಕಾಶ ನೀಡಲಾಗಿರುವುದು ತಿಳಿದ ವಿಷಯ. ನಾವೆಲ್ಲರೂ ಒಟ್ಟಾಗಿ ಕೆಲಸ ಮಾಡುತ್ತೇವೆ" ಎಂದು ಹೇಳಿದರು.

**ಒಟ್ಟಾಗಿ ಕೆಲಸ ಮಾಡಬೇಕಿದೆ:** "ವಿಶೇಷವಾಗಿ ಯುವಪೀಳಿಗೆ ಇದನ್ನು ಗಮನಿಸುತ್ತಿದ್ದು ಅವರಿಗೆ ಸಾಕಷ್ಟು ಅವಕಾಶ ಒದಗಿಸಲಾಗುತ್ತಿದೆ. ಎಲ್ಲರೂ ಒಟ್ಟಿಗೆ ಕೆಲಸ ಮಾಡಬೇಕಿದೆ" ಎಂದರು.

"ನರೇಂದ್ರ ಬಾಬು ಅವರು ಸಾವಿರಕ್ಕೂ ಹೆಚ್ಚು ಕಾರ್ಯಕರ್ತರನ್ನು ಕಾಂಗ್ರೆಸ್ ಪಕ್ಷಕ್ಕೆ ಕರೆದುಕೊಂಡು ಬಂದಿದ್ದಾರೆ. ಪ್ರತಿಯೊಬ್ಬ ಕಾರ್ಯಕರ್ತರ ನಿಷ್ಠೆಯೇ ನಾಯಕನ ಗೆಲುವು. ಕಾಂಗ್ರೆಸ್ ಪಕ್ಷದಲ್ಲಿ ದುಡಿಯುವ ಎಲ್ಲಾ ಕಾರ್ಯಕರ್ತರಿಗೂ ಅವಕಾಶವಿದೆ. ತಾಳ್ಮೆ ಇರಬೇಕು. ಕೆಲವರು ಯಾವುದೇ ಫಲಾಪೇಕ್ಷೆ ಇಲ್ಲದೇ ದುಡಿಯುತ್ತಾ ಹೋಗುತ್ತಾರೆ.

"ನಾನು ದೆಹಲಿಗೆ ಯುವ ಕಾಂಗ್ರೆಸ್ ಅಧಿವೇಶನಕ್ಕೆ ಹೋದಾಗ ನಾವುಗಳು ರಾಜೀವ್ ಗಾಂಧಿಯವರನ್ನು ಭೇಟಿ ಮಾಡಲು ಹೋದೆವು.

ಆದರೆ ಅಲ್ಲಿಗೆ ಅನೇಕ ನಾಯಕರು ಬಂದಿದ್ದರು. ಆ ವೇಳೆ ಅಲ್ಲಿಗೆ ಹಿರಿಯ ನಾಯಕರೊಬ್ಬರು ಬಂದರು. ಅವರನ್ನು ನೋಡಿ ಭದ್ರತಾ ಸಿಬ್ಬಂದಿ ಅವರನ್ನು ನೇರ ರಾಜೀವ್ ಗಾಂಧಿಯವರ ಬಳಿ ಕರೆದುಕೊಂಡು ಹೋದರು. ನಮಗೆ ಅವರು ಯಾರು ಎಂದು ತಿಳಿಯಲಿಲ್ಲ.

ಅವರ ಬಗ್ಗೆ ರಾಜೀವ್ ಗಾಂಧಿ ಅವರ ಬಳಿ ಕೇಳಿದಾಗ. ಅವರು ಬಾಬುಜಗಜೀವನ್ ರಾಮ್. ಕಾರಣಾಂತರಗಳಿಂದ ಕಾಂಗ್ರೆಸ್ ಪಕ್ಷ ಬಿಟ್ಟಿದ್ದರು. ಈಗ ನಾನು ಕಾಂಗ್ರೆಸ್ಸಿಗನಾಗಿಯೇ ಮರಣ ಹೊಂದಬೇಕು ಎಂದು ಅಭಿಲಾಷೆ ವ್ಯಕ್ತಪಡಿಸಿದ್ದಾರೆ. ಅವರನ್ನು ಸಂತೋಷದಿಂದ ಬರಮಾಡಿಕೊಂಡೆ ಎಂದು ವಿವರಿಸಿದರು" ಎಂದು ಹೇಳಿದರು.

## ಲಾಲ್‌ಬಾಗ್‌ಗೆ ಭೇಟಿ: ಪಶ್ಚಿಮ ದ್ವಾರದಲ್ಲಿ ಪರಿಸರಸ್ನೇಹಿ ಮಣ್ಣಿನ ಗೌರಿ-ಗಣೇಶ ಮೂರ್ತಿ ವಿತರಿಸಿದ ರಾಮಲಿಂಗಾರೆಡ್ಡಿ



**ಬೆಂಗಳೂರು, ಸೆ.13:** ಪಿಓಪಿ ಗಣೇಶೋತ್ಸವಗಳಿಗೆ ಕರೆಯಬೇಡಿ, ಪಾಲ್ಗೊಳ್ಳುವುದೂ ಇಲ್ಲ ಎಂದು ಘೋಷಿಸಿರುವ ಅರಣ್ಯ ಮತ್ತು ಪರಿಸರ ಸಚಿವ ರಾಮಲಿಂಗಾರೆಡ್ಡಿ, ಇಂದು ಬೆಳ್ಳಂ ಬೆಳಿಗ್ಗೆ ಲಾಲ್ ಬಾಗ್‌ಗೆ ಭೇಟಿ ನೀಡಿ ಪರಿಸರ ಸ್ನೇಹಿ ಮಣ್ಣಿನ ಗೌರಿ, ಗಣೇಶ ಮೂರ್ತಿಗಳನ್ನು ವಿತರಿಸಿದರು. ಪ್ರತಿಯೊಬ್ಬರೂ ಪರಿಸರ ಉಳಿಸುವ ಮೂಲಕ ಅರ್ಥಪೂರ್ಣವಾಗಿ ಗಣೇಶ ಹಬ್ಬ ಆಚರಿಸಬೇಕು ಎಂದು ಕರೆ ನೀಡಿದ್ದಾರೆ.

ಅವೆನ್ಯೂ ರಸ್ತೆಯ ಆರ್ಯ ವೈಶ್ಯ ಮಂಡಳಿ ಹಾಗೂ ವಾಸವಿ ಯುವಜನ ಸಂಘದ ವತಿಯಿಂದ ಕಳೆದ ಹತ್ತು ವರ್ಷಗಳಿಂದ ನಿರಂತರವಾಗಿ ಗಣೇಶ ಚತುರ್ಥಿಯನ್ನು ಪರಿಸರಸ್ನೇಹಿ ಹಾಗೂ ಅರ್ಥಪೂರ್ಣವಾಗಿ ಆಚರಿಸುತ್ತಿದ್ದು, ಈ ಬಾರಿಯೂ ಸಾರ್ವಜನಿಕರಿಗೆ 251 ಪರಿಸರ ಸ್ನೇಹಿ ಗಣೇಶ ಹಾಗೂ ಗೌರಿ ಮೂರ್ತಿಗಳನ್ನು ವಿತರಿಸಲಾಯಿತು, ಭಾನುವಾರ ಬೆಳಿಗ್ಗೆ ಲಾಲ್‌ಬಾಗ್‌ನ ಪಶ್ಚಿಮ ದ್ವಾರದಲ್ಲಿ ಅರಣ್ಯ ಮತ್ತು ಪರಿಸರ ಸಚಿವ ರಾಮಲಿಂಗಾರೆಡ್ಡಿ ಮಣ್ಣಿನ ಮೂರ್ತಿಗಳನ್ನು ವಿತರಿಸಿದರು ಸ್ವತಃ ಸಚಿವ ರಾಮಲಿಂಗಾರೆಡ್ಡಿ ಸಾರ್ವಜನಿಕರಿಗೆ ಮೂರ್ತಿಗಳನ್ನು ವಿತರಿಸಿ, ವಾಸವಿ ಮಂಡಳಿ ಮತ್ತು ವಾಸವಿ ಯುವಜನ ಸಂಘದ ಸದಸ್ಯರು ನೈಜ ಪರಿಸರ ಪ್ರೇಮಿಗಳು. ಇದೇ ಮಾದರಿಯಲ್ಲಿ ಎಲ್ಲಾ ಸಂಘ ಸಂಸ್ಥೆಗಳು ಪರಿಸರ ಸ್ನೇಹಿಯಾಗಿ ಹಬ್ಬ ಆಚರಿಸಬೇಕು. ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯೂ ಸಹ ಪಿಓಪಿ ಗಣೇಶ ಮೂರ್ತಿಗಳ ವಿರುದ್ಧ ವ್ಯಾಪಕ ಕಾರ್ಯಾಚರಣೆ ಕೈಗೊಂಡಿದೆ. ದೀಪಾವಳಿ ಸಂದರ್ಭದಲ್ಲೂ ಪಟಾಕಿ ಬೇಡ ಎಂದು ಮನವಿ ಮಾಡುತ್ತೇವೆ. ಪ್ರತಿಯೊಬ್ಬರೂ ಪರಿಸರ ಸಂರಕ್ಷಣೆಗೆ ಸರ್ಕಾರ ಮತ್ತು ಸಮಾಜದ ಜೊತೆ ಕೈಜೋಡಿಸಬೇಕು ಎಂದು ಕರೆ ನೀಡಿದರು. ಗಣೇಶ ಮೂರ್ತಿಗಳೊಂದಿಗೆ ಶಿಕ್ಷಣ ತಜ್ಞ ಸಿಎ ಡಾ. ವಿಷ್ಣು ಭರತ್ ಆಲಂಪಲ್ಲಿ ಅವರು ರಚಿಸಿರುವ 'ಎಜುಕೇಶ್ ಇಸ್ ಎ ಟೂಲ್ ಆಫ್ ಸಕ್ಸಸ್' (ಶಿಕ್ಷಣವು ಯಶಸ್ಸಿನ ಸಾಧನ) ಎಂಬ ಪುಸ್ತಕವನ್ನೂ ಸಾರ್ವಜನಿಕರಿಗೆ ವಿತರಿಸಲಾಯಿತು.

ಬಳಿಕ ಮಾತನಾಡಿದ ಡಾ. ವಿಷ್ಣು ಭರತ್ ಆಲಂಪಲ್ಲಿ, ಹಬ್ಬವನ್ನು ಪರಿಸರ ಕ್ರಮಗಳ ಮೂಲಕ ಆಚರಿಸಲು ಸಚಿವರು ನಮಗೆ ಪ್ರೇರಣೆಯಾಗಿದ್ದಾರೆ. ಸಂಪ್ರದಾಯ ಮತ್ತು ಭಕ್ತಿಭಾವದಿಂದ ಪರಿಸರ ಸಂರಕ್ಷಿಸುವ ನಿಟ್ಟಿನಲ್ಲಿ ಹಬ್ಬ ಆಚರಿಸೋಣ. ಜಲಮೂಲಗಳಿಗೆ ಮಾಲಿನ್ಯ ಉಂಟುಮಾಡುವುದು ಬೇಡ ಎಂದರು. ವಾಸವಿ ಯುವ ಜನ ಸಂಘದ ಅಧ್ಯಕ್ಷ ಗುರುಪ್ರಸಾದ್ ಮಾತನಾಡಿ, ಪಿಓಪಿ ಮೂರ್ತಿಗಳನ್ನು ಪ್ರತಿಷ್ಠಾಪಿಸಿರುವ ಕಾರ್ಯಕ್ರಮಗಳಲ್ಲಿ ತಾವು ಭಾಗವಹಿಸುವುದಿಲ್ಲ ಎಂದು ಸಚಿವ ರಾಮಲಿಂಗಾರೆಡ್ಡಿ ಹೇಳಿರುವುದು ಅತ್ಯಂತ ಸ್ವಾಗತಾರ್ಹ ಎಂದರು.

## ಪ್ರತಾಪ್‌ಸಿಂಹ ಅವರನ್ನು ಮೈಸೂರಿನ ಕೊನೆಯ ಪೇಟೆ ರೌಡಿ ಎಂದು ವ್ಯಂಗ್ಯವಾಡಿದ ಪ್ರಿಯಾಂಕ್ ಖರ್ಗೆ



**ಬೆಂಗಳೂರು, ಸೆ.13:** ಪೋಲಿಸ್ ಇಲಾಖೆ ಮತ್ತು ಕಾನೂನು ಸುವ್ಯವಸ್ಥೆಗೆ ಸವಾಲು ಹಾಕುವ ರೀತಿಯಲ್ಲಿ ಹೇಳಿಕೆ ನೀಡುತ್ತಿರುವ ಮಾಜಿ ಸಂಸದ ಪ್ರತಾಪ್ ಸಿಂಹ ವಿರುದ್ಧ ಗೃಹ ಸಚಿವ ಪ್ರಿಯಾಂಕ್ ಖರ್ಗೆ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಪೊಲೀಸರ ಕರ್ತವ್ಯಕ್ಕೆ ಅಡ್ಡಿಪಡಿಸುವ ಮತ್ತು ಸಮಾಜದ ಸ್ವಾಸ್ಥ್ಯ ಕೆಡಿಸಲು ಯತ್ನಿಸುವವರ ವಿರುದ್ಧ ರಾಜ್ಯ ಸರ್ಕಾರ ನಿರ್ದಾಕ್ಷಿಣ್ಯ ಕಾನೂನು ಕ್ರಮ ಕೈಗೊಳ್ಳಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ.

ಇತ್ತೀಚೆಗೆ, ಟಿ.ನರಸೀಪುರ ಪೊಲೀಸರ ವಿರುದ್ಧ ಮಾತನಾಡಿದ್ದ ಪ್ರತಾಪ್ ಸಿಂಹ, ನಾನು ಪೊಲೀಸ್ ಠಾಣೆಗೆ ನುಗ್ಗುತ್ತೇನೆ ಎಂದು ಸವಾಲು ಹಾಕಿದ್ದರು. ಅವರ ಹೇಳಿಕೆಗೆ ತೀಕ್ಷ್ಣವಾಗಿ ಪ್ರಕ್ರಿಯಿಸಿ ಟ್ವೀಟ್ ಮಾಡಿರುವ ಪ್ರಿಯಾಂಕ್ ಖರ್ಗೆ, ಯಾರಾದರೂ ಠಾಣೆಗೆ ನುಗ್ಗುವ ದುಸ್ಸಾಹಸಕ್ಕೆ ಕೈಹಾಕಿದರೆ, ಅಲ್ಲಿಂದ ನೇರವಾಗಿ ಪರಪ್ಪನ ಅಗ್ರಹಾರ ಕೇಂದ್ರ ಜೈಲಿಗೂ ನುಗ್ಗಿಸುವ ವ್ಯವಸ್ಥೆಯನ್ನು ಉಚಿತವಾಗಿ ಮಾಡಲಾಗುವುದು ಎಂದು ವ್ಯಂಗ್ಯಭರಿತ ಎಚ್ಚರಿಕೆ ನೀಡಿದ್ದಾರೆ. ಪ್ರತಾಪ್ ಸಿಂಹ ಅವರ ಹೆಸರು ಉಲ್ಲೇಖಿಸದೆ ಮೈಸೂರಿನ ಕೊನೆಯ ಪೇಟೆ ರೌಡಿ ಎಂದು ಪ್ರಿಯಾಂಕ್ ಖರ್ಗೆ ಲೇವಡಿ ಮಾಡಿದ್ದಾರೆ. ರಾಜಕೀಯವಾಗಿ ಅಸ್ತಿತ್ವ ಕಳೆದು ಕೊಂಡು ನರಳುತ್ತಿರುವ ವ್ಯಕ್ತಿಯೊಬ್ಬರು ತಮ್ಮ ಅಸ್ತಿತ್ವ ಉಳಿಸಿಕೊಳ್ಳಲು ವಾರಕ್ಕೊಮ್ಮೆ ಮಾಧ್ಯಮಗಳ ಮುಂದೆ ಚಿಲ್ಲರೆ ಹೇಳಿಕೆ ನೀಡುತ್ತಿದ್ದಾರೆ. ಪೊಲೀಸರಿಗೆ ಬೆದರಿಕೆ ಹಾಕಿ ಅವರ ನೈತಿಕ ಸ್ಥೈರ್ಯ ಕುಗ್ಗಿಸುವ ಯತ್ನವನ್ನು ಸರ್ಕಾರ ಸಹಿಸುವುದಿಲ್ಲ ಎಂದಿದ್ದಾರೆ.

ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವುದು ಸರ್ಕಾರದ ಮೊದಲ ಆದ್ಯತೆಯಾಗಿದ್ದು, ರಾಜಕೀಯ ಬೇಳೆ ಬೇಯಿಸಿಕೊಳ್ಳಲು ಬೆದರಿಕೆ ಒಡ್ಡುವ ಪ್ರವೃತ್ತಿಗೆ ಕಡಿವಾಣ ಹಾಕಲಾಗುವುದು. ಸೂಕ್ಷ್ಮ ಪರಿಸ್ಥಿತಿಯ ದುರ್ಬಳಕೆ ಮಾಡಿ ಕೊಂಡು ಶಾಂತಿ ಕದಡಲು ಯತ್ನಿಸುವ ಯಾವುದೇ ಶಕ್ತಿಯ ವಿರುದ್ಧ ಕಾನೂನುಬದ್ಧವಾಗಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಖರ್ಗೆ ಸ್ಪಷ್ಟಪಡಿಸಿದ್ದಾರೆ.

## ಗ್ರೇಟರ್ ಬೆಂಗಳೂರು ವ್ಯಾಪ್ತಿಯಲ್ಲಿ ಇಂದು ಪ್ರಾಣಿವಧೆ ನಿಷೇಧ

**ಬೆಂಗಳೂರು,ಸೆ.13:** ಗೌರಿ– ಗಣೇಶ ಹಬ್ಬದ ಹಿನ್ನೆಲೆಯಲ್ಲಿ ಸೋಮವಾರ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಪ್ರಾಣಿವಧೆ ಮತ್ತು ಮಾಂಸ ಮಾರಾಟ ನಿಷೇಧಿಸಲಾಗಿದೆ.

ಒಂದು ದಿನದ ಮಟ್ಟಿಗೆ ಕಸಾಯಿ ಖಾನೆಗಳನ್ನು ಸ್ಥಗಿತಗೊಳಿಸುವಂತೆ ಜಿ ಬಿ ಎ ಪಶುಪಾಲನಾ ವಿಭಾಗದ ಉಪನಿರ್ದೇಶಕರು ಆದೇಶ ಹೊರಡಿಸಿದ್ದಾರೆ. ಈ ನಡುವೆ ಗಣೇಶಮೂರ್ತಿಗಳ ಪ್ರತಿಷ್ಠಾಪನೆ ಹಾಗೂ ವಿಸರ್ಜನೆಗೆ ಬೆಂಗಳೂರಿನಲ್ಲಿ ವ್ಯವಸ್ಥೆ ಮಾಡಲಾಗಿದೆ. ಗಣೇಶಮೂರ್ತಿಗಳ ಪ್ರತಿಷ್ಠಾಪನೆಗೆ ಅನುಮತಿ ಪಡೆಯಲು 122 ಏಕ ಗವಾಕ್ಷಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಸಾರ್ವಜನಿಕರಿಗೆ ಅಗತ್ಯ ಮಾರ್ಗದರ್ಶನ ಹಾಗೂ ಮೇಲ್ವಿಚಾರಣೆಗೆ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆ.

ಅದೇ ರೀತಿ ಗಣೇಶ ಮೂರ್ತಿಗಳ ವಿಸರ್ಜನೆಗೆ ಜಿ ಬಿ ಎ ವ್ಯಾಪ್ತಿಯಲ್ಲಿ 42 ಕೆರೆ ಅಂಗಳದ ತಾತ್ಕಾಲಿಕ ಕಲ್ಯಾಣಿಗಳನ್ನು ಹಾಗೂ 659 ಮೊಬೈಲ್ ಟ್ಯಾಂಕ್‌ಗಳ ವ್ಯವಸ್ಥೆ ಮಾಡಲಾಗಿದೆ. ವಿಸರ್ಜನಾ ಸ್ಥಳಗಳು, ಮೊಬೈಲ್ ಟ್ಯಾಂಕ್‌ಗಳು ಏಕಗವಾಕ್ಷಿ ಕೇಂದ್ರಗಳ ಬಗ್ಗೆ ಮಾಹಿತಿ ಪಡೆಯಲು ಕ್ಯೂ ಆರ್ ಕೋಡ್ ವ್ಯವಸ್ಥೆ ಸಹ ಮಾಡಲಾಗಿದೆ. ಸಾರ್ವಜನಿಕರು ಜಿಬಿಎ ಜಾಲತಾಣದಲ್ಲಿ ಮಾಹಿತಿ ಪಡೆಯಬಹುದು.

## ಗಣೇಶೋತ್ಸವಕ್ಕೆ ಅಡ್ಡಿಪಡಿಸುವುದು ಹಿಂದುಗಳ ಧಾರ್ಮಿಕ ಸ್ವಾತಂತ್ರ್ಯದ ಮೇಲೆ ಹಸ್ತಕ್ಷೇಪ: ವಿಜಯೇಂದ್ರ ಆಕ್ರೋಶ

**ಬೆಂಗಳೂರು, ಸೆ.13:** ಗಣೇಶೋತ್ಸವ ಸಂದರ್ಭದಲ್ಲಿ ಕಾನೂನುಬಾಹಿರ ಚಟುವಟಿಕೆಗಳಿಗೆ ಅವಕಾಶ ನೀಡಬಾರದು ಎಂಬ ಪೊಲೀಸರ ಕ್ರಮವನ್ನು ಯಾರೂ ವಿರೋಧಿಸುವುದಿಲ್ಲ. ಆದರೆ ಗಣೇಶ ಮೂರ್ತಿ ವಿಸರ್ಜನೆ ಸಂದರ್ಭದಲ್ಲಿ ಸಾರ್ವಜನಿಕ ರಸ್ತೆಗಳಲ್ಲೂ ಪಟಾಕಿ ಸಿಡಿಸಬಾರದು ಎಂದು ನಿರ್ಬಂಧಿಸುವ ರೀತಿಯ ಹೇಳಿಕೆಗಳು ಸ್ವೀಕಾರಾರ್ಹವಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ.

ಗಣೇಶೋತ್ಸವ ಕೇವಲ ಒಂದು ಧಾರ್ಮಿಕ ಆಚರಣೆಯಲ್ಲ. ಇದು ಹಿಂದೂ ಸಮಾಜದಲ್ಲಿ ಜಾಗೃತಿ, ಐಕ್ಯತೆ ಮತ್ತು ಸಾಮಾಜಿಕ ಬಾಂಧವ್ಯವನ್ನು ಮೂಡಿಸುವ ಪ್ರಮುಖ ಹಬ್ಬ. ಇಂತಹ ಹಬ್ಬವನ್ನು ಆಚರಿಸುವುದಕ್ಕೂ ಸರ್ಕಾರ ಅನುಮತಿ, ನಿರ್ಬಂಧ, ವಿವಿಧ ನೆಪಗಳ ಮೂಲಕ ಅಡ್ಡಿಪಡಿಸುವುದು ಏಕೆ ಎಂದು ಕಾಂಗ್ರೆಸ್ ಸರ್ಕಾರ ಸ್ಪಷ್ಟಪಡಿಸಬೇಕು ಎಂದು ಅವರು ಪ್ರಶ್ನಿಸಿದ್ದಾರೆ.

ಮಸೀದಿಯೊಳಗೆ ಪ್ರವೇಶಿಸಿ ಪಟಾಕಿ ಸಿಡಿಸುವುದು ಕಾನೂನು ಬಾಹಿರವಾದರೆ, ಅದಕ್ಕೆ ಯಾರೂ ಅವಕಾಶ ನೀಡಬಾರದು. ಆದರೆ ಅದೇ ಕಾರಣವನ್ನು ಮುಂದಿಟ್ಟುಕೊಂಡು ಸಾರ್ವಜನಿಕ ರಸ್ತೆಗಳಲ್ಲೂ ಪಟಾಕಿ ಸಿಡಿಸಬಾರದು ಎಂದು ಹೇಳುವುದು ಅತಿರೇಕದ ಕ್ರಮ. ?ನಾವು ನಮ್ಮ ಕಾರ್ಯಕರ್ತರಿಗೂ ಕಾನೂನು ಉಲ್ಲಂಘಿಸಬೇಡಿ ಎಂದು ಹೇಳುತ್ತೇವೆ. ಆದರೆ ಹಬ್ಬ ಆಚರಿಸುವುದಕ್ಕೂ ನಿರ್ಬಂಧ ಹೇರುವ ಪರಿಸ್ಥಿತಿ ಬಂದರೆ ನಾವು ಪಾಕಿಸ್ತಾನದಲ್ಲಿದ್ದೇವೆಯೇ?? ಎಂದು ವಿಜಯೇಂದ್ರ ಪ್ರಶ್ನಿಸಿದ್ದಾರೆ.

ಒಬ್ಬ ಪೊಲೀಸ್ ಇನ್ಸ್ಪೆಕ್ಟರ್ ಈ ರೀತಿಯ ಹೇಳಿಕೆ ನೀಡಿರುವುದನ್ನು ಕೇವಲ ಅಧಿಕಾರಿಯ ವೈಯಕ್ತಿಕ ಹೇಳಿಕೆ ಎಂದು ಪರಿಗಣಿಸಲು ಸಾಧ್ಯವಿಲ್ಲ. ಆಡಳಿತ ಪಕ್ಷದ ಧೋರಣೆಯೇ ಅಧಿಕಾರಿಗಳ ಮೂಲಕ ಹೊರಬರುತ್ತಿದೆಯೇ ಎಂಬ ಅನುಮಾನ ಜನರಲ್ಲಿ ಮೂಡಿದೆ. ಸರ್ಕಾರ ಮತ್ತು ಪೊಲೀಸ್ ಹಿರಿಯ ಅಧಿಕಾರಿಗಳು ಈ ಕುರಿತು ಸ್ಪಷ್ಟನೆ ನೀಡಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಈಗಾಗಲೇ ವಂದೇ ಮಾತರಂ ವಿಚಾರದಲ್ಲೂ ಕಾಂಗ್ರೆಸ್ ಸರ್ಕಾರದ ಗೊಂದಲಕಾರಿ ಮತ್ತು ಎಡಬಿಡಂಗಿ ನಿರ್ಧಾರಗಳನ್ನು ರಾಜ್ಯದ ಜನತೆ ನೋಡಿದ್ದಾರೆ. ಇದೀಗ ಗಣೇಶೋತ್ಸವಕ್ಕೂ ನಿರ್ಬಂಧಗಳನ್ನು ಹೇರುವ ಮೂಲಕ ಹಿಂದೂಗಳ ಭಾವನೆಗಳಿಗೆ ಧಕ್ಕೆ ತರುವ ಪ್ರಯತ್ನ ನಡೆಯುತ್ತಿದೆ.ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರ ಒಂದು ಕಡೆ ಅಲ್ಪಸಂಖ್ಯಾತರ ಓಲೈಕೆ ಮತ್ತು ತುಷ್ಟೀಕರಣದ ರಾಜಕಾರಣ ಮಾಡುತ್ತಿದ್ದು, ಮತ್ತೊಂದು ಕಡೆ ಬಹುಸಂಖ್ಯಾತ ಹಿಂದೂಗಳ ಧಾರ್ಮಿಕ ಆಚರಣೆಗಳಿಗೆ ಅಡ್ಡಿಪಡಿಸುತ್ತಿದೆ ಎಂಬ ಭಾವನೆ ಜನರಲ್ಲಿ ಮೂಡುತ್ತಿದೆ. ಸರ್ಕಾರಕ್ಕೆ ಹಿಂದೂಗಳ ಮತ ಬೇಡವೆಂದು ನಿರ್ಧರಿಸಿದ್ದರೆ ಅದನ್ನು ಬಹಿರಂಗವಾಗಿ ಹೇಳಲಿ. ಆದರೆ ಈ ರೀತಿಯ ಉದ್ಧಟತನದ ಹೇಳಿಕೆಗಳ



ಮೂಲಕ ಸಮಾಜದಲ್ಲಿ ಅಸಮಾಧಾನ ಸೃಷ್ಟಿಸುವುದು ಸರಿಯಲ್ಲ. ಹಿಂದೂ ಸಮಾಜ ಅತ್ಯಂತ ಶಾಂತಿ ಮತ್ತು ಸಂಯಮದಿಂದ ಹಬ್ಬಗಳನ್ನು ಆಚರಿಸುತ್ತಿದೆ. ಅವರ ತಾಳ್ಮೆಯನ್ನು ಪರೀಕ್ಷಿಸುವ ಕ್ರಮಗಳನ್ನು ಸರ್ಕಾರ ಕೈಗೊಳ್ಳಬಾರದು. ಧಾರ್ಮಿಕ ಆಚರಣೆಗಳಿಗೆ ಅನಗತ್ಯ ಅಡ್ಡಿ, ಬೆದರಿಕೆ ಅಥವಾ ನಿರ್ಬಂಧ ಹೇರುವ ಮೂಲಕ ಪರಿಸ್ಥಿತಿ ಉದ್ವಿಗ್ನಗೊಂಡು ಮುಂದೆ ಕಾನೂನು ಸುವ್ಯವಸ್ಥೆ ಹದಗೆಟ್ಟರೆ ಅದಕ್ಕೆ ಕಾಂಗ್ರೆಸ್ ಸರ್ಕಾರ ಮತ್ತು ಗೃಹ ಸಚಿವರೇ ನೇರ ಹೊಣೆಗಾರರಾಗಬೇಕಾಗುತ್ತದೆ ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

ಪೊಲೀಸ್ ಅಧಿಕಾರಿಯ ಹೇಳಿಕೆಯ ಕುರಿತು ಗೃಹ ಸಚಿವರು ಮತ್ತು ಹಿರಿಯ ಪೊಲೀಸ್ ಅಧಿಕಾರಿಗಳು ತಕ್ಷಣ ಗಮನಹರಿಸಬೇಕು. ಕಾನೂನಿನ ಮಿತಿಯನ್ನು ಮೀರಿ ಬೆದರಿಕೆಯ ರೀತಿಯಲ್ಲಿ ಮಾತನಾಡಿರುವುದು ಸಾಬೀತಾದರೆ ಸಂಬಂಧಿಸಿದ ಅಧಿಕಾರಿಯ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ವಿಜಯೇಂದ್ರ ಒತ್ತಾಯಿಸಿದ್ದಾರೆ.

'ಬಳ್ಳಾರಿ ಚಲೋ' ಪಾದಯಾತ್ರೆ ಯಶಸ್ವಿಯಾಗಿ ಪೂರ್ಣಗೊಂಡಿದ್ದು, ಮುಂದಿನ ಹೋರಾಟಗಳು ಮತ್ತು ರಾಜ್ಯ ಪ್ರವಾಸದ ಕುರಿತು ಪಕ್ಷದ ಹಿರಿಯ ನಾಯಕರೊಂದಿಗೆ ಚರ್ಚಿಸಿ ಶೀಘ್ರದಲ್ಲೇ ರೂಪುರೇಷೆ ಪ್ರಕಟಿಸಲಾಗುವುದು. ರಾಜ್ಯದಲ್ಲಿ ಬರಗಾಲ ತೀವ್ರವಾಗಿದ್ದರೂ ಕಾಂಗ್ರೆಸ್ ಸರ್ಕಾರ ರೈತರ ಸಮಸ್ಯೆಗಳಿಗೆ ಗಂಭೀರವಾಗಿ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿದರು.

ರಾಜ್ಯದ ಹಲವು ಭಾಗಗಳಲ್ಲಿ ರೈತರಿಗೆ ಸಮರ್ಪಕವಾಗಿ ಮೂರು ಹಂತದ ವಿದ್ಯುತ್ ಪೂರೈಕೆ ಮಾಡಲು ಸರ್ಕಾರ ವಿಫಲವಾಗಿದೆ. ಆರು–ಏಳು ಗಂಟೆಗಳ ವಿದ್ಯುತ್ ಕೂಡ ಸಿಗದೆ ಬೋರ್‌ವೆಲ್ ಅವಲಂಬಿತ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಶಿಕಾರಿಪುರ ಸೇರಿದಂತೆ ರಾಜ್ಯದ ಅನೇಕ ತಾಲೂಕುಗಳಲ್ಲಿ ರೈತರು ವಿದ್ಯುತ್ ಸಮಸ್ಯೆ ವಿರುದ್ಧ ಪ್ರತಿಭಟನೆ ನಡೆಸುತ್ತಿದ್ದಾರೆ.

ಹಿಂದೆ ಬಿಜೆಪಿ ಸರ್ಕಾರದ ಅವಧಿಯಲ್ಲಿ ಭೀಕರ ಬರಗಾಲ ಎದುರಾದಾಗಲೂ ರೈತರ ಹಿತದೃಷ್ಟಿಯಿಂದ ಹೊರರಾಜ್ಯಗಳಿಂದ ವಿದ್ಯುತ್ ಖರೀದಿಸಿ ಪೂರೈಕೆ ಮಾಡಲಾಗಿತ್ತು. ಆದರೆ ಈಗಿನ ಸರ್ಕಾರ ಮಾತ್ರ ನಿರ್ಧಾರ ಕೈಗೊಳ್ಳದೆ ಮೀನ–ಮೇಷ ಎಣಿಸುತ್ತಿದೆ. ರೈತರ ಸಮಸ್ಯೆಗಳ ಬಗ್ಗೆ ಮುಖ್ಯಮಂತ್ರಿ ಮತ್ತು ಸರ್ಕಾರಕ್ಕೆ ಕಾಳಜಿಯೇ ಇಲ್ಲ ಎಂದು ಅವರು ಟೀಕಿಸಿದರು.

ರೈತರು ಬರಗಾಲದಿಂದ ಸಂಕಷ್ಟದಲ್ಲಿರುವ ಸಂದರ್ಭದಲ್ಲಿ ಸರ್ಕಾರ ಕೈಗೊಂಡ ಮೋಡ ಬಿತ್ತನೆ ಯೋಜನೆಯೂ ನಿರೀಕ್ಷಿತ ಫಲ ನೀಡಿಲ್ಲ. ಯೋಜನೆ ವಿಫಲವಾಗಿದೆ ಎಂಬುದನ್ನು ಸರ್ಕಾರದ ಸಚಿವರೇ ಒಪ್ಪಿಕೊಂಡಿದ್ದಾರೆ. ಹಾಗಿದ್ದರೆ ಈ ಯೋಜನೆಗೆ ಖರ್ಚು ಮಾಡಿದ ಸುಮಾರು 28 ಕೋಟಿಯ ಹಣವನ್ನು ಯಾರಿಗೆ, ಯಾವ ಉದ್ದೇಶಕ್ಕೆ ನೀಡಲಾಗಿದೆ ಎಂಬ ಸಂಪೂರ್ಣ ಲೆಕ್ಕವನ್ನು ಸರ್ಕಾರ ವಿಧಾನಸಭೆಯಲ್ಲಿ ರಾಜ್ಯದ ಜನರ ಮುಂದೆ ಇಡಬೇಕು ಎಂದು ವಿಜಯೇಂದ್ರ ಆಗ್ರಹಿಸಿದರು.

ವಾಲ್ಮೀಕಿ ಅಭಿವೃದ್ಧಿ ನಿಗಮದ ಪ್ರಕರಣದಂತಹ ವಿಚಾರಗಳಿಂದಾಗಿ ಇಡೀ ಅಧಿವೇಶನದ ಸಮಯ ವ್ಯರ್ಥವಾಗುವ ಪರಿಸ್ಥಿತಿ ನಿರ್ಮಾಣವಾಗಿತ್ತು. ಆದರೆ ಇಂದು ರಾಜ್ಯದ ರೈತರು ಎದುರಿಸುತ್ತಿರುವ ಬರ, ವಿದ್ಯುತ್ ಕೊರತೆ ಮತ್ತು ಬೆಳೆ ನಷ್ಟದಂತಹ ಗಂಭೀರ ಸಮಸ್ಯೆಗಳಿಗೆ ಸರ್ಕಾರ ಆದ್ಯತೆ ನೀಡಬೇಕು.

ಬರಗಾಲ, ರೈತರ ವಿದ್ಯುತ್ ಸಮಸ್ಯೆ, ಮೋಡಬಿತ್ತನೆ ವೈಫಲ್ಯ ಸೇರಿದಂತೆ ಜನರ ಬದುಕಿಗೆ ನೇರವಾಗಿ ಸಂಬಂಧಿಸಿದ ಎಲ್ಲ ವಿಚಾರಗಳನ್ನು ವಿಧಾನಸಭೆಯಲ್ಲಿ ಬಿಜೆಪಿ ಬಲವಾಗಿ ಪ್ರಸ್ತಾಪಿಸಲಿದೆ.

ರೈತರ ಹಿತಾಸಕ್ತಿಗೆ ವಿರುದ್ಧವಾಗಿ ಸರ್ಕಾರ ಯಾವುದೇ ನಿರ್ಲಕ್ಷ್ಯ ಮುಂದುವರಿಸಿದರೂ ಬಿಜೆಪಿ ಸುಮ್ಮನಿರುವುದಿಲ್ಲ ಎಂದು ಬಿ.ವೈ. ವಿಜಯೇಂದ್ರ ಎಚ್ಚರಿಸಿದರು.

**ಶ್ರೀ ಸುಬ್ರಮಣ್ಯೇಶ್ವರ ಕೋ-ಆಪರೇಟಿವ್ ಬ್ಯಾಂಕ್‌ಗೆ 1.10 ಕೋಟಿ ರೂ. ನಿವ್ವಳ ಲಾಭ**

## ಮಹಿಳಾ ಖಾತೆದಾರರಿಗೆ ಸಾಲದ ಬಡ್ಡಿದರದಲ್ಲಿ ಶೇ.1ರಷ್ಟು ವಿಶೇಷ ರಿಯಾಯಿತಿ: ಡಿ.ಆರ್. ವಿಜಯಸಾರಥಿ

**ಬೆಂಗಳೂರು, ಸೆ.13:** ಶ್ರೀ ಸುಬ್ರಮಣ್ಯೇಶ್ವರ ಕೋ–ಆಪರೇಟಿವ್ ಬ್ಯಾಂಕ್ ಲಿಮಿಟೆಡ್ 2025–26ನೇ ಸಾಲಿನಲ್ಲಿ 1.10 ಕೋಟಿ ನಿವ್ವಳ ಲಾಭ ಗಳಿಸಿದೆ ಎಂದು ಬ್ಯಾಂಕ್ ಅಧ್ಯಕ್ಷ ಡಿ.ಆರ್. ವಿಜಯಸಾರಥಿ ಘೋಷಿಸಿದರು. ಸೌತ್ ಎಂಡ್ ಸರ್ಕಲ್‌ನ ಚಾಮರಾಜ ಕಲ್ಯಾಣ ಮಂಟಪದಲ್ಲಿ ನಡೆದ ಬ್ಯಾಂಕಿನ ವಾರ್ಷಿಕ ಮಹಾಸಭೆಯಲ್ಲಿ ಮಾತನಾಡಿದ ಅವರು, ಮಹಿಳೆಯರ ಆರ್ಥಿಕ ಸ್ವಾವಲಂಬನೆಗೆ ಉತ್ತೇಜನ ನೀಡುವ ಉದ್ದೇಶದಿಂದ, ಬ್ಯಾಂಕಿನ ಮಹಿಳಾ ಖಾತೆದಾರರು ಸಾಲ ಪಡೆದಾಗ ಸಾಮಾನ್ಯ ಬಡ್ಡಿದರಕ್ಕಿಂತ ಶೇ.1ರಷ್ಟು ಕಡಿಮೆ ಬಡ್ಡಿದರದಲ್ಲಿ ಸಾಲ ಸೌಲಭ್ಯ ಕಲ್ಪಿಸಲಾಗುವುದು.

ಮಹಿಳೆಯರಿಗೆ ವಿಶೇಷ ಬಡ್ಡಿದರ ರಿಯಾಯಿತಿ ನೀಡುವ ಮೂಲಕ ಅವರ ಆರ್ಥಿಕ ಚಟುವಟಿಕೆಗಳಿಗೆ ಉತ್ತೇಜನ ನೀಡುವುದು ನಮ್ಮ ಉದ್ದೇಶ ಎಂದು ತಿಳಿಸಿದರು. ಬ್ಯಾಂಕ್ ಪ್ರಸ್ತುತ 33,755 ಸದಸ್ಯರನ್ನು ಹೊಂದಿದ್ದು, ಕಳೆದ ಏಳು ವರ್ಷಗಳಿಂದ ಸದಸ್ಯರಿಗೆ ಶೇ.25ರಷ್ಟು ಲಾಭಾಂಶ ಘೋಷಿಸಲಾಗುತ್ತಿದೆ. ಆರ್‌ಬಿಐ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ




ಪಾಲಿಸಿಕೊಂಡು ಬ್ಯಾಂಕ್ ಆರ್ಥಿಕವಾಗಿ ಸದೃಢವಾಗಿ ಮುನ್ನಡೆಯುತ್ತಿದೆ. ಪ್ರಸಕ್ತ ಸಾಲಿನ ಅಂತ್ಯಕ್ಕೆ ಒಟ್ಟು ಎನ್‌ಪಿಎ ಶೇ.10.22, ನಿವ್ವಳ ಎನ್‌ಪಿಎ ಶೇ.2.03 ಹಾಗೂ ಸಿಆರ್‌ಎಆರ್ ಶೇ.17.90ರಷ್ಟಿದೆ ಎಂದು ವಿವರಿಸಿದರು.

ಡಿಜಿಟಲ್ ಪಾವತಿಗೆ ಹೆಚ್ಚಿನ ಸೌಲಭ್ಯ ಸದಸ್ಯರು ಮತ್ತು ಗ್ರಾಹಕರಿಗೆ ಸುಲಭ ಹಾಗೂ ವೇಗದ ಡಿಜಿಟಲ್ ಪಾವತಿ ವ್ಯವಸ್ಥೆ ಒದಗಿಸುವ ನಿಟ್ಟಿನಲ್ಲಿ ಬ್ಯಾಂಕ್ ಫೋನ್‌ಪೇ, ಗೂಗಲ್‌ಪೇ ಹಾಗೂ ಮರ್ಚೆಂಟ್ ಪೇಮೆಂಟ್ ಸ್ಕ್ಯಾನರ್ ಸೌಲಭ್ಯಗಳನ್ನು ಕಲ್ಪಿಸುತ್ತಿದೆ. ಈ ಮೂಲಕ ಗ್ರಾಹಕರು ಹಣ ವರ್ಗಾವಣೆ ಹಾಗೂ ವಿವಿಧ ಪಾವತಿಗಳನ್ನು ಸುಲಭವಾಗಿ ಡಿಜಿಟಲ್ ಮಾಧ್ಯಮದ ಮೂಲಕ ನಿರ್ವಹಿಸಬಹುದು. ಜೊತೆಗೆ ಖಾತೆ ವ್ಯವಹಾರಗಳ ಮಾಹಿತಿಯನ್ನು ಸುಲಭವಾಗಿ ಪಡೆಯಲು 'ಎಸ್.ಎಸ್.ಸಿ.ಬಿ.ಎಲ್–ಎಂ–ಪಾಸ್‌ಬುಕ್ ಆಪ್ ಪರಿಚಯಿಸಲಾಗಿದೆ ಎಂದರು.

ಸದಸ್ಯರ ಕಲ್ಯಾಣಕ್ಕೂ ಬ್ಯಾಂಕ್ ವಿಶೇಷ ಆದ್ಯತೆ ನೀಡಿದೆ. ಸಾಲ ಸೌಲಭ್ಯ ಪಡೆದ ಸದಸ್ಯರಿಗೆ 1 ಲಕ್ಷದ ಉಚಿತ ವೈಯಕ್ತಿಕ ಅಪಘಾತ ವಿಮೆ ಒದಗಿಸಲಾಗುತ್ತಿದೆ. ಯಶಸ್ವಿನಿ ಆರೋಗ್ಯ ವಿಮಾ ಯೋಜನೆಯ ಸೌಲಭ್ಯ ಕಲ್ಪಿಸುವುದರ ಜೊತೆಗೆ ಆರೋಗ್ಯ ಸಮಸ್ಯೆಗಳಿಗೆ 10 ಸಾವಿರದವರೆಗೆ ಆರ್ಥಿಕ ನೆರವು ನೀಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ಕ್ಯಾನ್ಸರ್ ಪೀಡಿತ ಸದಸ್ಯರಿಗೆ 50 ಸಾವಿರದವರೆಗೆ ಆರ್ಥಿಕ ನೆರವು ನೀಡಲು ಉದ್ದೇಶಿಸಲಾಗಿದೆ. ಅಲ್ಲದೆ, ಸದಸ್ಯರು ಹಾಗೂ ಅವರ ಮಕ್ಕಳಿಗೆ ಉದ್ಯೋಗಾವಕಾಶ ಕಲ್ಪಿಸಲು ವಿವಿಧ ಸಂಸ್ಥೆಗಳ ಸಹಯೋಗದಲ್ಲಿ ಉದ್ಯೋಗ ಮೇಳ ಆಯೋಜಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ವಿಜಯಸಾರಥಿ ತಿಳಿಸಿದರು.



ದಸರಾ ಶಿಬಿರಕ್ಕಾಗಿ ಮೈಸೂರು ಅರಮನೆಯಲ್ಲಿ ಭಾನುವಾರ ಸ್ವಾಗತಿಸಲಾದ ದಸರಾ ಆನೆಗಳ ಎರಡನೇ ತಂಡದ ಸುಗ್ರೀವ, ರೂಪ ಮತ್ತು ಚೈತ್ರ.

# ಬೀದರ ವಿವಿ ಪ್ರಥಮ ಘಟಿಕೋತ್ಸವ: ವಿಕಸಿತ ಭಾರತ ನಿರ್ಮಾಣದಲ್ಲಿ ಯುವಕರ ಪಾತ್ರ ಮಹತ್ವದ್ದು: ಥಾವರ್ ಚಂದ್ ಗೆಹ್ಲೋಟ್

**ಬೀದರ್, ಸೆ, 13:** ವಿಶ್ವವಿದ್ಯಾಲಯದಿಂದ ಪದವಿ ಪಡೆದು ಹೊರಬರುತ್ತಿರುವ ವಿದ್ಯಾರ್ಥಿಗಳು ತಮ್ಮ ಭವಿಷ್ಯ ರೂಪಿಸಿಕೊಳ್ಳುವುದರ ಜೊತೆಗೆ ದೇಶವನ್ನು ವಿಕಸಿತ ರಾಷ್ಟ್ರವನ್ನಾಗಿ ಮಾಡುವ ಸಂಕಲ್ಪದೊಂದಿಗೆ ಮುಂದುವರಿಯಬೇಕು ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕರೆ ನೀಡಿದರು.

ನಗರದ ಹೊರವಲಯದ ನಂದಿ ನಗರದಲ್ಲಿರುವ ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ನಡೆದ ಬೀದರ್ ವಿಶ್ವವಿದ್ಯಾಲಯದ ಪ್ರಥಮ ಘಟಿಕೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಬೀದರ್ ವಿಶ್ವವಿದ್ಯಾಲಯದ ಮೊದಲ ಘಟಿಕೋತ್ಸವ ಇತಿಹಾಸದಲ್ಲಿ ದಾಖಲೆಯಾಗುವ ಕಾರ್ಯಕ್ರಮವಾಗಿದೆ. ವಿದ್ಯಾರ್ಥಿಗಳು ಪದವಿ ಪಡೆಯುವ ಮೂಲಕ ಜೀವನದ ಹೊಸ ಅಧ್ಯಾಯ ಆರಂಭಿಸುತ್ತಿದ್ದಾರೆ. ಜೀವನದಲ್ಲಿ ಸುಖ–ದುಃಖ ಎರಡೂ ಬರುತ್ತವೆ. ಸುಖದ ವೇಳೆ ವಿನಯದಿಂದ ಇರಬೇಕು, ಕಷ್ಟದ ವೇಳೆ ಧೈರ್ಯದಿಂದ ಮುನ್ನಡೆಯಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ಎಐ ಯುಗದಲ್ಲಿ ಜಗತ್ತು ವೇಗವಾಗಿ ಬದಲಾಗುತ್ತಿದ್ದು, ಉತ್ತಮ ಶಿಕ್ಷಣ ಮತ್ತು ಕೌಶಲ್ಯದ ಮೂಲಕ ಸಾಧನೆ ಮಾಡಬೇಕು. ಗಣಿತ, ಖಗೋಳ, ವೈದ್ಯಕೀಯ, ಭಾಷೆ, ಸಾಹಿತ್ಯ ಹಾಗೂ ಕೃಷಿ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಭಾರತವು ವಿಶ್ವಕ್ಕೆ ಅಮೂಲ್ಯ ಕೊಡುಗೆ ನೀಡಿದೆ ಎಂ ದರು.

ಪ್ರಧಾನಿ ನರೇಂದ್ರ ಮೋದಿ ಅವರ ವಿಕಸಿತ ಭಾರತ–2047 ಸಂಕಲ್ಪ ಸಾಕಾರಗೊಳಿಸುವಲ್ಲಿ ಯುವಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ತಮ್ಮ ಜ್ಞಾನ ಮತ್ತು ಪರಿಶ್ರಮದಿಂದ ರಾಷ್ಟ್ರನಿರ್ಮಾಣದಲ್ಲಿ ಪಾಲ್ಗೊಳ್ಳಬೇಕು ಎಂದು ರಾಜ್ಯಪಾಲರು ಹೇಳಿದರು.

ನಿವೃತ್ತ ಮುಖ್ಯ ನ್ಯಾಯಮೂರ್ತಿ ಕೃಷ್ಣ ಎಸ್. ದೀಕ್ಷಿತ್ ಮಾತನಾಡಿ, ಪದವಿ ವಿದ್ಯಾರ್ಥಿಗಳಿಗೆ ಉನ್ನತ ವ್ಯಾಸಂಗ, ಸಂಶೋಧನೆ, ಉದ್ಯೋಗ ಹಾಗೂ ಸಮಾಜ ನಿರ್ಮಾಣದಲ್ಲಿ ಭಾಗವಹಿಸುವ ಅವಕಾಶ ಕಲ್ಪಿಸುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ 20 ವಿದ್ಯಾರ್ಥಿಗಳಿಗೆ ಚಿನ್ನದ ಪದಕ ಪ್ರದಾನ ಮಾಡಲಾಗಿದ್ದು, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಇಬ್ಬರು ಗಣ್ಯರಿಗೆ ಗೌರವ ಡಾಕ್ಟರೇಟ್ ಪದವಿ ನೀಡಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಬೀದರ್ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಬಿ.ಎಸ್.ಬಿರಾದಾರ್ ಅವರು ವಿಶ್ವವಿದ್ಯಾಲಯದ ಬಗ್ಗೆ ಸವಿಸ್ತಾರವಾಗಿ ಮಾಹಿತಿ ನೀಡಿದರು.




## ಇಬ್ಬರಿಗೆ ಗೌರವ ಡಾಕ್ಟರೇಟ್

ಸಾಹಿತ್ಯ ಕ್ಷೇತ್ರದಲ್ಲಿ ಸಾಧನೆ ಮಾಡಿದ ಎಸ್.ಎಂ ಜನವಾಡಕರ್ ಹಾಗೂ ಸಾಮಾಜಿಕ ಸೇವೆಯಲ್ಲಿ ಸಾಧನೆ ಮಾಡಿದ ಶಿವಯ್ಯ ಸ್ವಾಮಿ ಅವರಿಗೆ ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಲಾಯಿತು.

## ಚಿನ್ನದ ಪದಕ ಪಡೆದ ವಿದ್ಯಾರ್ಥಿಗಳು

ಎಂ.ಎ ಅರ್ಥಶಾಸ್ತ್ರದಲ್ಲಿ ಪಲ್ಲವಿ, ಎಂ.ಎ ಇಂಗ್ಲೀಷ್‌ನಲ್ಲಿ ನಿಕಿತಾ, ಎಂ.ಎ ಇತಿಹಾಸದಲ್ಲಿ ಭಾಗ್ಯಶ್ರೀ, ಎಂ.ಎ ಕನ್ನಡದಲ್ಲಿ ಜಯಶ್ರೀ, ಎಂ.ಎ ರಾಜ್ಯಶಾಸ್ತ್ರದಲ್ಲಿ ಅನುಪಮಾ, ಎಂ.ಎ ಸಮಾಜಶಾಸ್ತ್ರದಲ್ಲಿ ನಂದಿನಿ, ಎಂ.ಎ ಉರ್ದುವಿನಲ್ಲಿ ಇರ್ಫಾನಾ ಬೇಗಂ, ಎಂ.ಎ ಮಹಿಳಾ ಅಧ್ಯಯನದಲ್ಲಿ ರವಿಕುಮಾರ್, ಎಂ.ಕಾಂ ನಲ್ಲಿ ಮೊಹಮ್ಮದ್ ಮುಜಮ್ಮಿಲ್, ಎಂ.ಎಡ್ ನಲ್ಲಿ ಸ್ವಾತಿ, ಎಂ.ಎಸ್.ಡಬ್ಲ್ಯು ನಲ್ಲಿ ಆಶಾ, ಎಂ.ಎಸ್ಸಿ ಬಯೋಟೆಕ್ನಾಲಜಿಯಲ್ಲಿ ನಿದಾ ಹಬೀಬಾ, ಎಂ.ಎಸ್ಸಿ ಸಸ್ಯಶಾಸ್ತ್ರದಲ್ಲಿ ಸೋನಿಯಾ, ಎಂ.ಎಸ್ಸಿ ರಸಾಯನಶಾಸ್ತ್ರದಲ್ಲಿ ಸೈಯದಾ ಮಾರಿಯಾ ಫಾತಿಮಾ, ಎಂ.ಎಸ್ಸಿ ಕಂಪ್ಯೂಟರ್ ಸೈನ್ಸ್‌ನಲ್ಲಿ ಹುರಿಯತ್ ಫಾತಿಮಾ, ಎಂ.ಎಸ್ಸಿ ಗಣಿತದಲ್ಲಿ ಮೆಹರೀನ್ ಅಮೀನ್, ಎಂ.ಎಸ್ಸಿ ಆರ್ಗಾನಿಕ್ ಕೆಮಿಸ್ಟ್ರಿಯಲ್ಲಿ ಮನೀಷಾ, ಎಂ.ಎಸ್ಸಿ ಭೌತಶಾಸ್ತ್ರದಲ್ಲಿ ದಿವ್ಯಾ, ಎಂ.ಎಸ್ಸಿ ಪ್ರಾಣಿಶಾಸ್ತ್ರದಲ್ಲಿ ಸೈಯದಾ ಮೆಹಮೂದಾ ಬಾನು ಹಾಗೂ ಬಿ.ಎಡ್ ಪದವಿಯಲ್ಲಿ ರೇಣುಕಾ ಅವರು ಚಿನ್ನದ ಪದಕಗಳಿಸಿದ್ದಾರೆ.

# ವಸತಿ ಶಾಲೆಗಳಿಗೆ ಜಿಪಂ ಸಿಇಓ ದಿಢೀರ್ ಭೇಟಿ: ಮಕ್ಕಳ ಜೊತೆ ಉಪಹಾರ ಸೇವನೆ



**ಬೀದರ್, ಸೆ. 13:** ಜಿಲ್ಲೆಯ ವಸತಿ ಶಾಲೆಗಳಿಗೆ ಜಿಲ್ಲಾ ಪಂಚಾಯಿತಿ ಸಿಇಓ ಗಿತ್ತೆ ಮಾಧವ ವಿಠಲರಾವ್ ಅವರು ಬೆಳ್ಳಂಬೆಳಗ್ಗೆಯೇ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಜಿಲ್ಲೆಯ ಬಗ್ದಲ್ ಮುರಾರ್ಜಿ ವಸತಿ ಶಾಲೆ ಹಾಗೂ ಚಿಟಗುಪ್ಪಾ ತಾಲೂಕಿನ ನಿರ್ಣಾ ಡಾ. ಬಿ.ಆರ್. ಅಂಬೇಡ್ಕರ್ ವಸತಿ ನಿಲಯಕ್ಕೆ ಭೇಟಿ ನೀಡಿದ ಅವರು, ವಿದ್ಯಾರ್ಥಿಗಳೊಂದಿಗೆ ಬೆಳಗಿನ ಉಪಹಾರ ಸೇವಿಸಿ ಶಾಲೆಯ ವ್ಯವಸ್ಥೆ ಪರಿಶೀಲಿಸಿದರು.

ಹೊಸದಾಗಿ ಬೀದರ್ ಜಿಲ್ಲೆಗೆ ಜಿಲ್ಲಾ ಪಂಚಾಯಿತಿ ಸಿಇಓ ಆಗಿ ಅಧಿಕಾರ ವಹಿಸಿಕೊಂಡಿರುವ ಗಿತ್ತೆ ಮಾಧವ ವಿಠಲರಾವ್ ದಿಢೀರ್ ಭೇಟಿ ವಸತಿ ಶಾಲೆಗಳ ಸಿಬ್ಬಂದಿಯಲ್ಲಿ ಎಚ್ಚರಿಕೆ ಮೂಡಿಸಿದೆ. ಬೆಳಗಿನ ಸಮಯದಲ್ಲೇ ಅಧಿಕಾರಿಗಳು ವಸತಿ ಶಾಲೆಗಳಿಗೆ ಭೇಟಿ ನೀಡಿದ ಹಿನ್ನೆಲೆಯಲ್ಲಿ ಪ್ರಾಂಶುಪಾಲರು, ವಾರ್ಡನ್ ಹಾಗೂ ಸಿಬ್ಬಂದಿಯ ಕಾರ್ಯವೈಖರಿ ಕುರಿತು ಚರ್ಚೆ ನಡೆದಿದೆ.

ಬಗ್ದಲ್ ಹಾಗೂ ನಿರ್ಣಾ ವಸತಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿದ್ದ ಬೆಳಗಿನ ಉಪಹಾರವನ್ನು ಸಿಇಓ ಅವರೇ ಮಕ್ಕಳೊಂದಿಗೆ ಕುಳಿತು ಸೇವಿಸಿದರು. ಬಳಿಕ ಉಪಹಾರದ ಗುಣಮಟ್ಟವನ್ನು ಪರಿಶೀಲಿಸಿ, ಎರಡೂ ವಸತಿ ಶಾಲೆಗಳಲ್ಲಿ ಉಪಹಾರದ ಗುಣಮಟ್ಟದ ಬಗ್ಗೆ ತೃಪ್ತಿ ವ್ಯಕ್ತಪಡಿಸಿದರು.

ಜಿಲ್ಲೆಯ ವಸತಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಸೌಲಭ್ಯಗಳು, ಆಹಾರ ವ್ಯವಸ್ಥೆ ಹಾಗೂ ಇತರ ಮೂಲಭೂತ ವ್ಯವಸ್ಥೆಗಳು ಸಮರ್ಪಕವಾಗಿವೆಯೇ ಎಂಬುದನ್ನು ಪರಿಶೀಲಿಸುವ ನಿಟ್ಟಿನಲ್ಲಿ ಈ ದಿಢೀರ್ ಭೇಟಿ ನಡೆದಿದೆ.

### ಕೋಟ್ಪಾ ಕಾಯ್ದೆ ಕಾರ್ಯಾಗಾರ

# ತಂಬಾಕು ಮುಕ್ತ ಸಮಾಜ ನಿರ್ಮಾಣಕ್ಕೆ ಒಟ್ಟಾಗಿ ದುಡಿಯೋಣ: ಡಾ.ಶರಣಪ್ಪ



ಕಲಬುರಗಿ ನಗರದ ಪೊಲೀಸ್ ಆಯುಕ್ತರ ಕಚೇರಿ ಸಭೆ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಮತ್ತು ಪೊಲೀಸ್ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯುಕ್ತಾಲಯ ವ್ಯಾಪ್ತಿಯ ಪೊಲೀಸ್ ಅಧಿಕಾರಿಗಳಿಗೆ ಆಯೋಜಿಸಿದ "ಕೋಟ್ಪಾ ತಿದ್ದುಪಡಿ ಕಾಯ್ದೆ–2024 ನಿಬಂಧನೆಗಳು ಮತ್ತು ಕಾನೂನುಗಳು' ಕುರಿತ ಸಂವೇದನಾಶೀಲ ಕಾರ್ಯಾಗಾರವನ್ನು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ. ಅವರು ಉದ್ಘಾಟಿಸಿದರು.

**ಕಲಬುರಗಿ, ಸೆ. 13:** ತಂಬಾಕು, ಗುಟ್ಕಾ, ಜರ್ದಾ ಸೇವನೆ ಆರೋಗ್ಯಕ್ಕೆ ಹಾನಿಕಾರಕವಾಗಿದ್ದು, ತಂಬಾಕು ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಒಟ್ಟಾಗಿ ದುಡಿಯುವುದು ಅಗತ್ಯವಿದೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ. ಅವರು ಕರೆ ನಿಡಿದರು.

ನಗರದ ಪೊಲೀಸ್ ಆಯುಕ್ತರ ಕಚೇರಿ ಸಭೆ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಮತ್ತು ಪೊಲೀಸ್ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯುಕ್ತಾಲಯ ವ್ಯಾಪ್ತಿಯ ಪೊಲೀಸ್ ಅಧಿಕಾರಿಗಳಿಗೆ ಆಯೋಜಿಸಿದ "ಕೋಟ್ಪಾ ತಿದ್ದುಪಡಿ ಕಾಯ್ದೆ–2024 ನಿಬಂಧನೆಗಳು ಮತ್ತು ಕಾನೂನುಗಳು' ಕುರಿತ ಸಂವೇದನಾಶೀಲ ಕಾರ್ಯಾಗಾರ ಉದ್ಘಾಟಿಸಿ, ತಂಬಾಕು ಉತ್ಪನ್ನಗಳ ಸೇವನೆಯಿಂದ ಮಾರಕ ಕ್ಯಾನ್ಸರ್‌ಗೆ ತುತ್ತಾಗಿ ನಾವೇ ರೋಗಕ್ಕೆ ಆಹ್ವಾನ ನೀಡಿದಂತಾಗುತ್ತದೆ. ಒಮ್ಮೆ ರೋಗ ದೇಹಕ್ಕೆ ಅಂಟಿಕೊಂಡಲ್ಲಿ ಇಡೀ ಕುಟುಂಬ ಅರ್ಥಿಕವಾಗಿ, ಮಾನಸಿಕವಾಗಿ ಸಂಕಷ್ಟಕ್ಕೆ ಎಡೆ ಮಾಡಿಕೊಡುತ್ತದೆ. ಹೀಗಾಗಿ ನಮ್ಮ ಪೊಲೀಸ್ ಅಧಿಕಾರಿಗಳು ಈ ಬಗ್ಗೆ ಸಮಾಜದಲ್ಲಿ ಅರಿವು ಮೂಡಿಸಬೇಕು ಮತ್ತು ಸ್ವತ: ಸಹ ಯಾವುದೇ ಗುಟಕಾ ಪದಾರ್ಥಗಳ ಸೇವನೆಗೆ ಬಲಿಯಾಗಬಾರದು. ಕೋಟ್ಪಾ ಕಾಯ್ದೆಯ ಪ್ರಕಾರ ಸಾರ್ವಜನಿಕರ ಸ್ಥಳಗಳಲ್ಲಿ, ಶಿಕ್ಷಣ ಸಂಸ್ಥೆಗಳ ಅವರಣದಲ್ಲಿ, ರಸ್ತೆಗಳಲ್ಲಿ ಧೂಮಪಾನ ಮಾಡುವುದು ಮತ್ತು ಉಗುಳುವುದು ಕಂಡುಬಂದಲ್ಲಿ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ಜರುಗಿಸಬೇಕು. ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಯಂತ್ರಣ, ಅಪ್ರಾಪ್ತ ವಯಸ್ಕರಿಗೆ ತಂಬಾಕು ಉತ್ಪನ್ನಗಳ ಮಾರಾಟಕ್ಕೆ ಇರುವ ನಿರ್ಬಂಧಗಳು ಹಾಗೂ ತಂಬಾಕು ಉತ್ಪನ್ನಗಳ ಜಾಹೀರಾತು ಮತ್ತು ಪ್ರಚಾರದ ಮೇಲಿನ ನಿಯಂತ್ರಣದ ಕುರಿತು ಪೊಲೀಸ್ ಅಧಿಕಾರಿಗಳು ಅರಿತು ಅದರಂತೆ ಕಾರ್ಯಚರಣೆ ನಡೆಸಬೇಕೆಂದರು.

ವಿಶೇಷವಾಗಿ ಉತ್ತರ ಕರ್ನಾಟಕ ಭಾಗದಲ್ಲಿ ಜನ ಹೆಚ್ಚು ಸಿಗರೇಟ್, ತಂಬಾಕು, ಗುಟಕಾದಂತಹ ಮಾದಕ ವಸ್ತುವನ್ನು ಸೇವಿಸುತ್ತಿದ್ದು, ಇದು ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ. ನಿಮ್ಮ ಆರೋಗ್ಯ ರಕ್ಷಣೆ ಜೊತೆಗೆ ಬೇರೆಯವರ ಆರೋಗ್ಯಕರ ಜೀವನಕ್ಕೂ ಈ ಕೆಟ್ಟ ಹವ್ಯಾಸ ತ್ಯಜಿಸಬೇಕು ಎಂದು ಕರೆ ನೀಡಿದ ಅವರು, ಇತ್ತೀಚೆಗೆ ನಗರ ಪ್ರದೇಶದಲ್ಲಿ ಎಲೆಕ್ಟ್ರಾನಿಕ್ ಸಿಗರೇಟ್‌ಗಳ ಹಾವಳಿ ಹೆಚ್ಚಾಗುತ್ತಿದ್ದು, ಇದರ ಉತ್ಪಾದನೆ, ಆಮದು, ಮಾರಾಟ, ವಿತರಣೆ, ಸಂಗ್ರಹಣೆ ಮತ್ತು ಜಾಹೀರಾತಿಗೆ ಸಂಬಂಧಿಸಿದ ನಿಷೇಧಗಳ ಕುರಿತು ಅಧಿಕಾರಿಗಳಿಗೆ ಸಂಕ್ಷಿಪ್ತವಾಗಿಹೇಳಿದರು.

ಇನ್ನು ಪೊಲೀಸ್ ಆಯುಕ್ತಾಲಯ ವ್ಯಾಪ್ತಿಯ ಎಲ್ಲ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ COTPA ಕಾಯ್ದೆ ಉಲ್ಲಂಘಿಸಿ ಧೂಮಪಾನ ಮಾಡಿದಲ್ಲಿ ಮೊದಲು 500 ರೂ. ದಂಡ ವಿಧಿಸಲಾಗುತ್ತಿತ್ತು. ಇದೀಗ 1,000 ರೂ. ದಂಡ ಹಾಕಲಾಗುತ್ತಿದ್ದು, ಇದನ್ನು ಜಾಗೃತಿ ಮೂಡಿಸಲು ಪೋಸ್ಟರ್ ಅಳವಡಿಸಿ ಅದರಂತೆ ದಂಡ ವಸೂಲಿ ಮಾಡಬೇಕೆಂದು ಅಧಿಕಾರಿ ಗಳಿಗೆ ಡಾ.ಎಸ್.ಡಿ.ಶರಣಪ್ಪ ಸೂಚಿಸಿದರು.

ನವದೆಹಲಿಯ ವೈಟಲ್ ಸ್ಟಾಟರ್ಜಿ ನಿರ್ದೇಶಕ ಡಾ.ಅಮಿತ್ ಯಾದವ ಅವರು, ಕೋಟ್ಪಾ–2003ರ ರಾಜ್ಯ ತಿದ್ದುಪಡಿ–2024ರ ಪ್ರಮುಖ ಅಂಶಗಳು ಮತ್ತು ಎಲೆಕ್ಟ್ರಾನಿಕ್ ಸಿಗರೇಟ್‌ಗಳ ತಯಾರಿಕೆ, ಆಮದು, ಮಾರಾಟ, ವಿತರಣೆ, ಸಂಗ್ರಹಣೆ ಮತ್ತು ಜಾಹೀರಾತಿಗೆ ಸಂಬಂಧಿಸಿದ ನಿಷೇಧಗಳ ಕುರಿತು ಅಧಿಕಾರಿಗಳಿಗೆ ಸವಿಸ್ತಾರವಾಗಿ ವಿವರಿಸಿದರು.

ಕಾರ್ಯಾಗಾರಕ್ಕೆ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ ಎಸ್.ಎಸ್.ಎಲ್ ಕಾನೂನು ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಮಹೇಶ್ವರಿ ಹಿರೇಮಠ್ ಮತ್ತು ರಾಜ್ಯ ತಂಬಾಕು ನಿಯಂತ್ರಣ ಕೋಶದ ವಿಭಾಗೀಯ ಸಂಯೋಜಕ ಮಹಾಂತೇಶ ಉಳ್ಳಾಗಡ್ಡಿ ಅವರು ಕೋಟ್ಪಾ ಕಾಯ್ದೆ–2003ಯಡಿ ಸಾರ್ವಜನಿಕ ಆರೋಗ್ಯ ರಕ್ಷಣೆ ಕುರಿತು ಮಾತನಾಡಿ

**ಜಾಗೃತಿ ಪೋಸ್ಟರ್ ಬಿಡುಗಡೆ:** ಇದೇ ಸಮಯದಲ್ಲಿ ಕೋಟ್ಪಾ ಕಾಯ್ದೆ ಅಡಿಯಲ್ಲಿ ಸಾರ್ವಜನಿಕರಿಗೆ ಸ್ಥಳದಲ್ಲಿಯೇ ದಂಡ ವಿಧಿಸುವ ಕುರಿತು ಜಾಗೃತಿ ಮೂಡಿಸುವ ಪೋಸ್ಟರಗಳನ್ನು ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ ಬಿಡುಗಡೆ ಗೊಳಿಸಿದರು.

# 14 ಕಡೆ ಗಣೇಶೋತ್ಸವ ಪ್ರತಿಷ್ಠಾಪನೆಗೆ ನಿರ್ಬಂಧ



**ರಾಯಚೂರು, ಸೆ. 13:** ಜಿಲ್ಲೆಯಲ್ಲಿ ಗಣೇಶೋತ್ಸವವನ್ನು ಶಾಂತಿ, ಸೌಹಾರ್ದತೆ ಹಾಗೂ ಸುರಕ್ಷಿತವಾಗಿ ಆಚರಿಸಲು ಅಗತ್ಯ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದ್ದು, ಜಿಲ್ಲಾಡಳಿತದ ನಿಯಮಗಳನ್ನು ಉಲ್ಲಂಘಿಸುವ ಗಣೇಶೋತ್ಸವ ಮಂಡಳಿಗಳಿಗೆ ಶೀಘ್ರವೇ ಪೊಲೀಸ್ ನೋಟಿಸ್ ನೀಡಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಶು ಗಿರಿ ಎಚ್ಚರಿಸಿದರು.

ಕಳೆದ ಒಂದು ತಿಂಗಳಿಂದ ಗಣೇಶೋತ್ಸವ ಮಂಡಳಿಗಳಿಗೆ ನಿಯಮಗಳ ಕುರಿತು ನಿರಂತರವಾಗಿ ತಿಳಿವಳಿಕೆ ನೀಡಲಾಗುತ್ತಿದೆ. ಆದರೂ ಕೆಲವು ಮಂಡಳಿಗಳು ಜಿಲ್ಲಾಡಳಿತದ ಆದೇಶಗಳನ್ನು ಗಂಭೀರವಾಗಿ ಪರಿಗಣಿಸದಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ. ನಿಯಮ ಉಲ್ಲಂಘನೆ ಕಂಡುಬಂದರೆ ಯಾವುದೇ ಮುಲಾಜಿಲ್ಲದೆ ಕ್ರಮ ಕೈಗೊಳ್ಳಲಾಗುವುದು ಎಂದು ಸುದ್ದಿಗಾರರಿಗೆ ತಿಳಿಸಿದರು.

ಸಾರ್ವಜನಿಕರ ಸುರಕ್ಷತೆ ಹಾಗೂ ಸಂಚಾರ ದಟ್ಟಣೆ ನಿಯಂತ್ರಣಕ್ಕೆ ಆದ್ಯತೆ ನೀಡಿ ನಿಯಮಗಳನ್ನು ರೂಪಿಸಲಾಗಿದೆ. ಏಕಗವಾಕ್ಷಿ ವ್ಯವಸ್ಥೆ ಮೂಲಕ ಗಣೇಶೋತ್ಸವ ಮಂಡಳಿಗಳಿಗೆ ಅನುಮತಿ ನೀಡಲಾಗುತ್ತಿದೆ. ಶನಿವಾರದವರೆಗೆ ಜಿಲ್ಲೆಯಲ್ಲಿ 2,578 ಸಾರ್ವಜನಿಕ ಗಣೇಶೋತ್ಸವ ಮಂಡಳಿಗಳು ನೋಂದಣಿ ಮಾಡಿಕೊಂಡಿದ್ದು, ಭಾನುವಾರ ಸಂಜೆವರೆಗೆ ನೋಂದಣಿಗೆ ಅವಕಾಶವಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ 2,570 ಗಣೇಶ ಮೂರ್ತಿಗಳ ಪ್ರತಿಷ್ಠಾಪನೆಗೆ ನೋಂದಣಿ ಮಾಡಿಕೊಳ್ಳಲಾಗಿದ್ದು, 48 ಸ್ಥಳಗಳನ್ನು ಸೂಕ್ಷ್ಮ ಪ್ರದೇಶಗಳೆಂದು ಗುರುತಿಸಲಾಗಿದೆ. 14 ಕಡೆ ಗಣೇಶ ಮೂರ್ತಿ ಪ್ರತಿಷ್ಠಾಪನೆಗೆ ನಿರ್ಬಂಧ ಹೇರಲಾಗಿದೆ ಎಂದರು.

**ಬಿಗಿ ಬಂದೋಬಸ್ತ್:** ಗಣೇಶೋತ್ಸವದ ಹಿನ್ನೆಲೆಯಲ್ಲಿ 148 ಶಾಂತಿ ಸಭೆಗಳನ್ನು ನಡೆಸಿ ಸಾರ್ವಜನಿಕರು ಹಾಗೂ ಗಣೇಶೋತ್ಸವ ಮಂಡಳಿಗಳಿಗೆ ಸೂಚನೆ ನೀಡಲಾಗಿದೆ. ಪೊಲೀಸ್ ಅಧಿಕಾರಿಗಳು, ಸಿಬ್ಬಂದಿ, ಗೃಹರಕ್ಷಕ ದಳ, ಸಶಸ್ತ್ರ ಮೀಸಲು ಪಡೆ ಹಾಗೂ ಕೆಎಸ್‌ಆರ್‌ಪಿ ತುಕಡಿಗಳನ್ನು ಭದ್ರತೆಗೆ ನಿಯೋಜಿಸ ಲಾಗಿದೆ.

ಜಿಲ್ಲೆಯಾದ್ಯಂತ 16 673 ಸಿಸಿಟಿವಿ ಕ್ಯಾಮೆರಾಗಳ ಮೂಲಕ ನಿಗಾ ವಹಿಸಲಾಗುತ್ತಿದೆ. ರಾಯಚೂರು ನಗರದಲ್ಲಿ ಮಹಾನಗರ ಪಾಲಿಕೆ ವತಿಯಿಂದ 180 ಸಿಸಿಟಿವಿಗಳನ್ನು ಅಳವಡಿಸಲಾಗುವುದು ಎಂದು ಹೇಳಿದರು.

ಕಾನೂನು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಜಿಲ್ಲೆಯ 1,557 ರೌಡಿಗಳ ಪೈಕಿ 1,474 ಮಂದಿಯ ವಿರುದ್ಧ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ.

1,124 ಮಂದಿಯಿಂದ ಮುಚ್ಚಳಿಕೆ ಪತ್ರ ಪಡೆಯಲಾಗಿದೆ. 23 ಮಂದಿಯನ್ನು ಗಡಿಪಾರು ಮಾಡಲಾಗಿದ್ದು, ಇನ್ನೂ ಐದು ಮಂದಿಯ ಗಡಿಪಾರಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ರೂಢಿಗತ ಅಪರಾಧಿ ಗಳನ್ನು ಒಂದು ತಿಂಗಳ ಕಾಲ ಜೈಲಿಗೆ ಕಳುಹಿಸಲಾಗಿದೆ ಎಂದರು.

### ಸಿಎಂ ಡಿಕೆ ಸರ್ಕಾರದ ಶತದಿನೋತ್ಸವದ ಸಂಭ್ರಮ

# ದೀಪಾಲಂಕಾರದಿಂದ ಜಗಮಗಿಸಿದ ಜಿಲ್ಲಾಧಿಕಾರಿ ಕಚೇರಿ



**ಕಲಬುರಗಿ, ಸೆ. 13:** ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ನೇತೃತ್ವದ ರಾಜ್ಯ ಸರ್ಕಾರ 100 ದಿನ ಪೂರೈಸಿರುವ ಹಿನ್ನೆಲೆಯಲ್ಲಿ ಕಲಬುರಗಿ ನಗರದ ಮಿನಿ ವಿಧಾನ ಸೌಧ ಕಟ್ಟಡ ಮತ್ತು ಜಗತ್ ವೃತ್ತಗಳು ಸಂಜೆ ಹಳದಿ, ಕೆಂಪು ಬಣ್ಣದ ವಿದ್ಯುತ್ ದೀಪಾ ಲಂಕಾರದಲ್ಲಿ ಕಂಗೊಳಿಸಿದವು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಲೈಟಿಂಗ್ ವ್ಯವಸ್ಥೆ ಮಾಡಲಾಗಿದ್ದು, ಎರಡು ದಿನಗಳ ಕಾಲ ಸಂಜೆ ಹೊತ್ತಿನಲ್ಲಿ ಝಗಮಗಿಸುವ ವಿದ್ಯುತ್ ದೀಪದಲ್ಲಿ ಜಿಲ್ಲಾಡಳಿತ ಕಟ್ಟಡ ಮತ್ತು ಜಗತ್ ವೃತ್ತ ನೋಡುಗರ ಗಮನ ಸೆಳೆಯಲಿದೆ.

ಶತ ದಿನದ ಸಂಭ್ರಮದಲ್ಲಿರುವ ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನದ ಜೊತೆಗೆ ನಾಡಿನ ರೈತರ, ಯುವಕರ, ವಿದ್ಯಾರ್ಥಿಗಳ, ಮಹಿಳೆಯರ ಸರ್ವಾಂಗೀಣ ಏಳಿಗೆಗೆ ಪ್ರಗತಿಯ ರಥವನ್ನು ಮುಂದುವರೆಸಿದೆ.

ನಾಡಿನ ಆಶಕಿರಣವಾಗಿರುವ ಪ್ರಜಾ ಸೇವಕ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರ ನೇತೃತ್ವದ ಸರ್ಕಾರ ನವ ಭಾರತ ನಿರ್ಮಾಣಕ್ಕೆ ಯುವ ಕರ್ನಾಟಕ ನಿರ್ಮಿಸುವ ದೃಢ ಸಂಕಲ್ಪ ಹೊಂದಿದೆ.

**ಬೃಹತ್ ಎಲ್.ಇ.ಡಿ. ಪರದೆ ಅಳವಡಿಕೆ:** ಇನ್ನು ಜಗತ್ ವೃತ್ತದಲ್ಲಿ ಎರಡು ಬೃಹತ್ ಎಲ್.ಇ.ಡಿ. ಪರದೆ ಅಳವಡಿಕೆ ಅಳವಡಿಸಿದ್ದು, ಇದರಲ್ಲಿ ಕಳೆದ 100 ದಿನದಲ್ಲಿ ನೂತನ ಸರ್ಕಾರ ಜಾರಿಗೆ ತಂದಿರುವ ಉದ್ಯೋಗ ನಿಧಿ, ವಿದ್ಯಾರ್ಥಿ ಉಚಿತ ಬಸ್ ಪಾಸ್, ಭೂ ಗ್ಯಾರಂಟಿ, ಭಾರತ ಜೋಡೋ ಸಂಘ ರಚನೆ, ಟೆಲಿ ಮೆಡಿಸಿನ್, ಆರೋಗ್ಯ ಸ್ಪಂದನ, ಅಪರೇಷನ್ ರೈಸ್ ಬೇಡ ಬ್ರೋ ಅಭಿಯಾನ.

ಗ್ರಾಮೀಣ ಭಾಗದಲ್ಲಿ ಸರ್ಕಾರಿ ಶಾಲೆಯಲ್ಲಿ ಓದಿದ ಮಕ್ಕಳಿಗೆ ಶೇ.7.50 ರಷ್ಟು ಮೀಸಲಾತಿ, ಕೃಷಿ ಯಾಂತ್ರಿಕರಣ ಸೇವೆ ಪಡೆಯುವ ರೈತರಿಗೆ ಸಬ್ಸಿಡಿ, ಪ್ರಜಾ ಸೇವೆ ಅಭಿಯಾನ, ಬೆಂಗಳೂರು ದಾಚೆ ಟೈರ್ –2 ಮತ್ತು ಟೈರ್–3 ನಗರಗಳಲ್ಲಿ ಆರ್ಥಿಕ ಬೆಳವಣಿಗೆಗೆ ಲೀಪ್ ಯೋಜನೆ ಸೇರಿದಂತೆ ಹಲವಾರು ಯೋಜನೆಗಳು ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಲಾಗುತ್ತಿದೆ.

# ಇ.ಡಿ ಕಾರ್ಯವೈಖರಿಗೆ ಸವಾಲು ಹಾಕುವ ಪ್ರಶ್ನೆಯೇ ಇಲ್ಲ: ಸತೀಶ್ ಜಾರಕಿಹೊಳಿ ಸ್ಪಷ್ಟನೆ



**ಬೆಳಗಾವಿ, ಸೆ.13–** ಜಾರಿ ನಿರ್ದೇಶನಾಲಯ ಒಂದು ಪ್ರಮುಖ ತನಿಖಾ ಸಂಸ್ಥೆಯಾಗಿದ್ದು, ಅದರ ಕಾರ್ಯವೈಖರಿಯನ್ನು ಪ್ರಶ್ನಿಸುವ ಅಥವಾ ಸವಾಲು ಹಾಕುವ ಪ್ರಶ್ನೆಯೇ ಇರುವುದಿಲ್ಲ ಎಂದು ಸಚಿವ ಸತೀಶ ಜಾರಕಿಹೊಳಿ ಸ್ಪಷ್ಟಪಡಿಸಿದ್ದಾರೆ.

ಈ ಕುರಿತು ಭಾನುವಾರ ವಿಡಿಯೊ ಹೇಳಿಕೆ ಬಿಡುಗಡೆ ಮಾಡಿ ಮಾತನಾಡಿದ ಅವರು, ಇ.ಡಿ ಯಾವುದೇ ಖಾಸಗಿ ಮಾಧ್ಯಮ ಸಂಸ್ಥೆಯಲ್ಲ. ನಮ್ಮ ಮೇಲೆ ದಾಳಿ ನಡೆದ ಬಳಿಕವಷ್ಟೇ ನಾವು ಮಾಧ್ಯಮಗಳಿಗೆ ಅಧಿಕೃತ ಮಾಹಿತಿ ನೀಡುವ ಕೆಲಸ ಮಾಡಿದ್ದೇವೆ. ಇಲಾಖೆಯ ತನಿಖಾ ಪ್ರಕ್ರಿಯೆಯನ್ನು ಪ್ರಶ್ನಿಸುವ ಯಾವುದೇ ಉದ್ದೇಶ ನಮ್ಮಲ್ಲಿಲ್ಲ ಎಂದು ತಿಳಿಸಿದರು.

**ಮಾಧ್ಯಮ ವರದಿ ಬಗ್ಗೆ ಅಸಮಾಧಾನ:** ಮಾಧ್ಯಮಗಳಲ್ಲಿ ಪ್ರಕಟವಾಗುತ್ತಿರುವ ಕೆಲವು ಮಾಹಿತಿಗಳು ಸತ್ಯಾಂಶಕ್ಕೆ ದೂರವಾಗಿವೆ ಎಂದು ಬೇಸರ ವ್ಯಕ್ತಪಡಿಸಿದರು.

ನಾವು ಮಾಧ್ಯಮಗಳ ಮುಂದೆ ನೀಡುವ ಹೇಳಿಕೆಗಳನ್ನು ಯಾವುದೇ ತಿರುಚುವಿಕೆ ಇಲ್ಲದೆ ಯಥಾವತ್ತಾಗಿ ರಾಜ್ಯದ ಜನತೆಗೆ ತಲುಪಿಸಿದರೆ ಉತ್ತಮ. ಇಲ್ಲದಿದ್ದರೆ ಸಾರ್ವಜನಿಕವಾಗಿ ಅನಗತ್ಯ ಗೊಂದಲಗಳಿಗೆ ಕಾರಣವಾಗುತ್ತದೆ ಎಂದು ಅಸಮಾಧಾನ ಹೊರಹಾಕಿದರು.

# ಬರಗಾಲದಿಂದ ಸಂಕಷ್ಟದಲ್ಲಿ ರೈತರು: ಪರಿಹಾರಕ್ಕೆ ಶಾಸಕ ಶರಣು ಸಲಗರ ಒತ್ತಾಯ

**ಬಸವಕಲ್ಯಾಣ, ಸೆ. 12:** ಬರಗಾಲದಿಂದಾಗಿ ರೈತರು ತೀವ್ರ ಸಂಕಷ್ಟಕ್ಕೆ ಗುರಿಯಗಿ ಅಪಾರ ಅನುಭವಿಸುತ್ತಿದ್ದು ಸೆಪ್ಟೆಂಬರ್ 21ರಂದು ನಡೆಯಲಿರುವ ಅಧಿವೇಶನದಲ್ಲಿ ಈ ದುಸ್ಥಿತಿಯ ಬಗ್ಗೆ ಪ್ರಸ್ತಾಪಿಸುತ್ತೇನೆ ಎಂದು ಶಾಸಕ ಶರಣು ಸಲಗರ ಹೇಳಿದರು.

ತಾಲ್ಲೂಕಿನ ಕೊಹಿನೂರನಲ್ಲಿ ನಡೆದ ಹೋಬಳಿ ಮಟ್ಟದ ಪ್ರಜಾಸೇವಾ ಅಭಿಯಾನದಲ್ಲಿ ಅವರು ಮಾತನಾಡಿದರು. ಮಳೆ ಕೊರತೆಯಿಂದ ಜನರು ಗುಳೆ ಹೋಗುತ್ತಿದ್ದು ಮೇವು, ನೀರಿನ ಕೊರತೆಯ ಭಯದಿಂದ ಜಾನುವಾರು ಮಾರಾಟ ಮಾಡುತ್ತಿದ್ದಾರೆ. ಆದ್ದರಿಂದ ಪ್ರತಿ ಜಾನುವಾರಿಗೆ 50 ಸಾವಿರ ಪರಿಹಾರ ನೀಡಬೇಕು ಎಂದು ಒತ್ತಾಯಿಸುತ್ತೇನೆ. ಸೌಲಭ್ಯಗಳು ಮನೆ ಬಾಗಿಲಿಗೆ ತಲುಪಲಿ ಎಂಬ ಉದ್ದೇಶದಿಂದ ಸರ್ಕಾರ ಈ ಆಂದೋಲನ ನಡೆಸುತ್ತಿದೆ' ಎಂದರು.

ಬೀದರ್ ಜಿಲ್ಲಾಧಿಕಾರಿಯಾಗಿ ಉತ್ತಮ ಕಾರ್ಯನಿರ್ವಹಿಸಿದ್ದ ಹರ್ಷ ಗುಪ್ತಾ ಈ ಯೋಜನೆಯ ಮುಖ್ಯಸ್ಥ ಆಗಿದ್ದಾರೆ. ಅವರು ನಿಷ್ಠಾವಂತ ಅಧಿಕಾರಿ ಆಗಿದ್ದಾರೆ. ಆದ್ದರಿಂದ ವಿವಿಧ ಇಲಾಖೆಗಳ ಅಧಿಕಾರಿಗಳು ಇಲ್ಲಿ ಸಲ್ಲಿಕೆಯಾದ ಅರ್ಜಿಗಳನ್ನು ಪರಿಶೀಲಿಸಿ ಶೀಘ್ರದಲ್ಲಿ ಪರಿಹಾರ ಒದಗಿಸಬೇಕು ಎಂದರು.

ತಹಶೀಲ್ದಾರ್ ದತ್ತಾತ್ರೇಯ ಗಾದಾ, ಇಒ ರಮೇಶ ಸುಲ್ಫಿ, ಬಿಇಓ ಸಿದ್ದವೀರಯ್ಯ ರುದನೂರು, ಎಇಇ ಶಿವಕುಮಾರ ಬುದ್ರೆ ಮತ್ತಿತರರು ಪಾಲ್ಗೊಂಡಿದ್ದರು.

**ಸಂತ್ರಸ್ತರ ಅಳಲು:**

**ಮನ್ನಳ್ಳಿ(ಜನವಾಡ):** ಬೀದರ್ ತಾಲ್ಲೂಕಿನ ಮನ್ನಳ್ಳಿ ಗ್ರಾಮದಲ್ಲಿ ಶನಿವಾರ ಆಯೋಜಿಸಿದ್ದ ಪ್ರಜಾಸೇವಾ ಆಂದೋಲನ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಆಡಳಿತದ ಎದುರು ತಮ್ಮ ಅಳಲು ತೋಡಿಕೊಂಡರು.



ಕೆಲವರು ಪಡಿತರ ಚೀಟಿ, ಇನ್ನು ಕೆಲವರು ಪಿಂಚಣಿ ಕಡಿತದಿಂದ ತಮಗೆ ತೊಂದರೆಯಾಗಿದೆ ಎಂದು ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರ ಗಮನ ಸೆಳೆದರು. ಗ್ರಾಮಗಳಲ್ಲಿ ಕುಡಿಯುವ ನೀರು, ರಸ್ತೆ, ಚರಂಡಿ, ದಾರಿದೀಪ, ಆರೋಗ್ಯ, ಕೃಷಿ, ಕಂದಾಯ ಹಾಗೂ ಗ್ರಾಮೀಣ ಅಭಿವೃದ್ಧಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಬೇಕು ಎಂದು ಅನೇಕರು ಅರ್ಜಿ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಮನ್ನಳ್ಳಿ ಹೋಬಳಿ ವ್ಯಾಪ್ತಿಯ 214 ಅರ್ಜಿಗಳು ಸಲ್ಲಿಕೆಯಾದವು. ಈ ಪೈಕಿ ಕಂದಾಯ ಇಲಾಖೆಗೆ ಸಂಬಂಧಿಸಿದ 183 ಹಾಗೂ ಗ್ರಾಮ ಪಂಚಾಯಿತಿಗೆ ಸಂಬಂಧಿಸಿದ 10 ಅರ್ಜಿಗಳನ್ನು ಸ್ಥಳದಲ್ಲೇ ಇತ್ಯರ್ಥಪಡಿಸಲಾಯಿತು. ಸಾಧ್ಯವಾದ ಅರ್ಜಿಗಳನ್ನು ಸ್ಥಳದಲ್ಲೇ ಪರಿಹರಿಸಲಾಗಿದೆ. ಬಾಕಿ ಇರುವ ಅರ್ಜಿಗಳನ್ನು ನಿಯಮಾನುಸಾರ ಆದಷ್ಟು ಬೇಗ ಬಗೆಹರಿಸಬೇಕು ಎಂದು ಡಾ. ಶೈಲೇಂದ್ರ ಬೆಲ್ದಾಳೆ ಅಧಿಕಾರಿಗಳಿಗೆ ಸೂಚಿಸಿದರು. ಗ್ರಾಮಗಳ ಮೂಲಸೌಕರ್ಯಕ್ಕೆ ಸಂಬಂಧಿಸಿದ ಸಮಸ್ಯೆಗಳನ್ನು ಆದ್ಯತೆ ಮೇರೆಗೆ ಪರಿಹರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸರ್ಕಾರದ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಬೇಕು. ಅಧಿಕಾರಿಗಳು ಗ್ರಾಮಗಳಿಗೆ ಭೇಟಿ ಕೊಟ್ಟು, ಸಮಸ್ಯೆಗಳ ವಾಸ್ತವಿಕತೆ ಅರಿತು ಪರಿಹಾರ ಕಲ್ಪಿಸಬೇಕು. ಸಾರ್ವಜನಿಕರಿಗೆ ತ್ವರಿತ ಸೇವೆ ಒದಗಿಸಬೇಕು.

ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮವು ಸಾರ್ವಜನಿಕರ ಸಮಸ್ಯೆ, ಕುಂದು ಕೊರತೆಗಳನ್ನು ಅಧಿಕಾರಿಗಳ ಗಮನಕ್ಕೆ ತರಲು ಉತ್ತಮ ವೇದಿಕೆಯಾಗಿದೆ. ಜನರು ಇದರ ಸದುಪಯೋಗ ಪಡೆಯಬೇಕು ಎಂದು ತಹಶೀಲ್ದಾರ್ ರವೀಂದ್ರ ದಾಮಾ ತಿಳಿಸಿದರು.

**ಟ್ಯಾಂಕರ್ ನೀರು ಪೂರೈಕೆಗೆ ಆಗ್ರಹ:** ಕೊಹಿನೂರ ಗ್ರಾಮದಲ್ಲಿನ ಅರ್ಧದಷ್ಟು ಮನೆಗಳಿಗೆ ದೂರದಿಂದ ನೀರು ತರಬೇಕಾಗುತ್ತಿದೆ. ಕೆಲವರು ಖಾಸಗಿ ಟ್ಯಾಂಕರ್‌ಗಳಿಂದ ನೀರು ಖರೀದಿಸುತ್ತಿದ್ದಾರೆ. ಆದ್ದರಿಂದ ಸರ್ಕಾರದಿಂದ ಟ್ಯಾಂಕರ್ ಮೂಲಕ ನೀರು ಪೂರೈಸುವ ವ್ಯವಸ್ಥೆ ಮಾಡಬೇಕು ಎಂದು ಮುಖಂಡ ಶಿವಶರಣಪ್ಪ ಸಂತಾಜಿ ಮತ್ತಿತರರು ಮನವಿಪತ್ರ ಸಲ್ಲಿಸಿದರು. ಕೊಹಿನೂರ ತಾಲ್ಲೂಕು ಕೇಂದ್ರವನ್ನಾಗಿಸಿ ವಿವಿಧ ಸೌಲಭ್ಯಗಳನ್ನು ನೀಡಬೇಕು, ಪೊಲೀಸ್ ಠಾಣೆ ಆರಂಭಿಸಬೇಕು. ಪದವಿಪೂರ್ವ ಕಾಲೇಜು ಮಂಜೂರು ಮಾಡಬೇಕು ಎಂದರು. ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಆಂಬ್ಯುಲೆನ್ಸ್ ಒದಗಿಸಬೇಕು. ಬಸ್ ನಿಲ್ದಾಣ ಕಟ್ಟಬೇಕು. ಶುದ್ಧ ಕುಡಿಯುವ ನೀರಿನ ಘಟಕ ದುರುಸ್ತಿಗೊಳಿಸಬೇಕು ಎಂದು ಪ್ರಶಾಂತ ಲಕಮಾಜಿ ಆಗ್ರಹಿಸಿದರು. ರತಿಕಾಂತ ಕೋಹಿನೂರ್, ವೈಜನಾಥ ಪೂಜಾರಿ, ಶಿವಶರಣಪ್ಪ ಮೂಲಗೆ, ಬಸವರಾಜ ಕಾಂದೆ, ವಸಂತರಾವ್ ಪಾಟೀಲ, ಕಲ್ಯಾಣರಾವ್ ವಿಸಾಜಿ, ಕರಬಸಯ್ಯ ಸ್ವಾಮಿ ಮತ್ತಿತರರು ಮನವಿಪತ್ರಗಳನ್ನು ಸಲ್ಲಿಸಿದರು. ಹೆಚ್ಚಿನವರು ವಿಧವಾ ವೇತನ, ಸಂಧ್ಯಾಸುರಕ್ಷಾ ವೇತನ ಬಿಡುಗಡೆಗೆ ಆಗ್ರಹಿಸಿದರು. ಕೆಲವರು ವೈಯಕ್ತಿಕ ಸಮಸ್ಯೆ ಹೇಳಿದರು. ಹೆಚ್ಚಿನ ಪ್ರಚಾರವಾಗದ ಕಾರಣ ಜನರ ಉಪಸ್ಥಿತಿ ಕಡಿಮೆ ಇತ್ತು. ಈ ಬಗ್ಗೆ ಶಾಸಕ ಶರಣು ಸಲಗರ ಸಹ ಮಾತನಾಡುವಾಗ ಅತೃಪ್ತಿ ವ್ಯಕ್ತಪಡಿಸಿದರು. ಅನೇಕ ಗ್ರಾಮಗಳವರು ನಮಗೆ ಸಭೆ ಆಯೋಜಿಸುತ್ತಿರುವ ಕುರಿತು ಯಾವುದೇ ಮಾಹಿತಿ ಇಲ್ಲ ಎಂದು ಗೋಳು ತೋಡಿಕೊಂಡಿದ್ದಾರೆ.

# ಡಿಜಿಟಲ್ ಯುಗದಲ್ಲಿ ಹೇಲಿನೆಟ್, ಜ್ಞಾನಭಂಡಾರದ ಸದುಪಯೋಗ ಪಡೆಯಲು ವಿದ್ಯಾರ್ಥಿಗಳಿಗೆ ಡಾ.ಭಗವಾನ್ ಕರೆ

**ಕಲಬುರಗಿ, ಸೆ. 13:** ಶೈಕ್ಷಣಿಕವಾಗಿ ಹಿಂದುಳಿದ ಭಾಗದಲ್ಲಿ ಉನ್ನತ ಶಿಕ್ಷಣದ ಮೂಲಕ ಸಾಮಾಜಿಕ ಪರಿವರ್ತನೆಗೆ ಮುನ್ನುಡಿ ಬರೆದಿರುವ ಹೈದ್ರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆ, ವೈದ್ಯಕೀಯ ಶಿಕ್ಷಣ ಕ್ಷೇತ್ರದಲ್ಲಿಯೂ ತನ್ನದೇ ಆದ ಛಾಪು ಮೂಡಿಸಿದೆ. ಈ ಸಂಸ್ಥೆಯಲ್ಲಿ ವೈದ್ಯಕೀಯ ಶಿಕ್ಷಣ ಪಡೆದ ಸಾವಿರಾರು ವೈದ್ಯರು ಇಂದು ದೇಶ-ವಿದೇಶಗಳ ವೈದ್ಯಕೀಯ ಕ್ಷೇತ್ರದಲ್ಲಿ ಹೆಸರಾಂತ ವೈದ್ಯರೆಂದು ಸೇವೆ ಸಲ್ಲಿಸುತ್ತಿರುವುದು ಸಂಸ್ಥೆಯ ಶೈಕ್ಷಣಿಕ ಸಾಧನೆಗೆ ಜೀವಂತ ಸಾಕ್ಷಿಯಾಗಿದೆ ಎಂದು ರಾಜೀವ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ. ಭಗವಾನ್ ಬಿ.ಸಿ. ಅಭಿಪ್ರಾಯಪಟ್ಟರು.

ನಗರದ ಹೈದ್ರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಗೆ ಕುಲಪತಿಯಾಗಿ ಪ್ರಥಮ ಬಾರಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಸಂಸ್ಥೆಯ ವತಿಯಿಂದ ಏರ್ಪಡಿಸಿದ್ದ ಸನ್ಮಾನ ಸ್ವೀಕರಿಸಿ, ವೈದ್ಯಕೀಯ ಸಿಬ್ಬಂದಿ ಹಾಗೂ ವೈದ್ಯಕೀಯ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಉತ್ತರ ಕರ್ನಾಟಕದ ವೈದ್ಯಕೀಯ ಶಿಕ್ಷಣಕ್ಕೆ ಹೊಸ ಬಲ ನೀಡಿದೆ. ಕಲಬುರಗಿ ಸೇರಿದಂತೆ ಉತ್ತರ ಕರ್ನಾಟಕದ ಶೈಕ್ಷಣಿಕ ಮತ್ತು ಸಾಮಾಜಿಕ ಬೆಳವಣಿಗೆಯಲ್ಲಿ ಹೈದ್ರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಪಾತ್ರವನ್ನು ನಿರ್ಲಕ್ಷಿಸಲು ಸಾಧ್ಯವಿಲ್ಲ. ವಿಶೇಷವಾಗಿ ವೈದ್ಯಕೀಯ ಶಿಕ್ಷಣಕ್ಕೆ ಸಂಸ್ಥೆ ನೀಡುತ್ತಿರುವ ಆದ್ಯತೆ ಈ ಭಾಗದ ಜನರಿಗೆ ಗುಣಮಟ್ಟದ ವೈದ್ಯಕೀಯ ಶಿಕ್ಷಣ ಮತ್ತು ಆರೋಗ್ಯ ಸೇವೆ ದೊರೆಯಲು ಬಲ ತುಂಬಿದೆ ಎಂದರು.

ದಶಕಗಳ ಹಿಂದೆ ಈ ಭಾಗದಲ್ಲಿ ಉನ್ನತ ಶಿಕ್ಷಣದ ಅವಕಾಶಗಳು ಸೀಮಿತವಾಗಿದ್ದ ಕಾಲದಲ್ಲಿ ಈ ಶಿಕ್ಷಣ ಸಂಸ್ಥೆ ಕೈಗೊಂಡ ದೂರದೃಷ್ಟಿಯ ನಿರ್ಧಾರಗಳು ಇಂದು ಫಲ ನೀಡುತ್ತಿವೆ. ವೈದ್ಯಕೀಯ ಶಿಕ್ಷಣ ಪಡೆದು ಹೊರಬಂದ ವೈದ್ಯರು ದೇಶ-ವಿದೇಶಗಳಲ್ಲಿ ಸೇವೆ ಸಲ್ಲಿಸುತ್ತಿರುವುದು ಕಲಬುರಗಿಯ ಶೈಕ್ಷಣಿಕ ಸಾಮರ್ಥ್ಯವನ್ನು ಜಾಗತಿಕ ಮಟ್ಟದಲ್ಲಿ ಪರಿಚಯಿಸುತ್ತಿದೆ



ರಾಜೀವ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ನೇತೃತ್ವದಲ್ಲಿ ಕಲಬುರಗಿಯಲ್ಲಿ ಇಂದು ನಡೆದ 8,000 ವಿದ್ಯಾರ್ಥಿಗಳ ಜಾಗೃತಿ ವಾಕಥಾನ್, 'ಬೇಡ ಬ್ರೋ' ಹಾಗೂ 'ಆಪರೇಷನ್ ರೈಸ್' ಅಂಗಾಂಗ ದಾನ ಜಾಗೃತಿ ಅಭಿಯಾನ ಯಶಸ್ವಿಯಾಗುವಲ್ಲಿ ಹೈದ್ರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಸಹಕಾರ ಮಹತ್ವದ್ದಾಗಿದೆ ಎಂದು ಕುಲಪತಿ ಶ್ಲಾಘಿಸಿದರು.

ಯುವಜನರಲ್ಲಿ ಆರೋಗ್ಯದ ಬಗ್ಗೆ ಅರಿವು ಮೂಡಿಸುವುದು, ಅಂಗಾಂಗ ದಾನದ ಮಹತ್ವವನ್ನು ಸಮಾಜಕ್ಕೆ ತಿಳಿಸುವುದು ಹಾಗೂ ಆರೋಗ್ಯಕರ ಸಮಾಜ ನಿರ್ಮಾಣದ ಸಂದೇಶವನ್ನು ಜನರಿಗೆ ತಲುಪಿಸುವ ಇಂತಹ ಅಭಿಯಾನಗಳಿಗೆ ಶಿಕ್ಷಣ ಸಂಸ್ಥೆಗಳು ಕೈಜೋಡಿಸುವುದು ಅತ್ಯಂತ ಅಗತ್ಯ ಎಂದರು.

ಹೈದ್ರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ಶಶಿಲ್ ನಮೋಶಿ ಅವರು ಸಂಸ್ಥೆಯ ಅಭಿವೃದ್ಧಿಯ ಕುರಿತು ವೈಯಕ್ತಿಕವಾಗಿ ಭೇಟಿ ಮಾಡಿ, ವೈದ್ಯಕೀಯ ಶಿಕ್ಷಣದ ಅವಕಾಶಗಳನ್ನು ಹೆಚ್ಚಿಸುವಂತೆ ಮನವಿ ಮಾಡಿದ್ದರು. ವೈದ್ಯಕೀಯ ಸೀಟುಗಳ ಹೆಚ್ಚಳಕ್ಕೆ ಸಂಬಂಧಿಸಿದಂತೆ ವಿಶ್ವವಿದ್ಯಾಲಯದ ಮಟ್ಟದಲ್ಲಿ ಅಗತ್ಯ ಸಹಕಾರ ನೀಡಲಾಗಿದ್ದು, ಅದರ ಫಲವಾಗಿ ಸೀಟುಗಳ ಸಂಖ್ಯೆ ಹೆಚ್ಚಳವಾಗಿದೆ ಎಂದು ತಿಳಿಸಿದರು.

ವೈದ್ಯಕೀಯ ವಿದ್ಯಾರ್ಥಿಗಳು ಬದಲಾಗುತ್ತಿರುವ ತಂತ್ರಜ್ಞಾನಕ್ಕೆ ಹೊಂದಿಕೊಳ್ಳಬೇಕು. ಜಗತ್ತಿನಾದ್ಯಂತ ನಡೆಯುತ್ತಿರುವ ವೈದ್ಯಕೀಯ ಸಂಶೋಧನೆ ಹಾಗೂ ಹೊಸ ಆವಿಷ್ಕಾರಗಳ ಬಗ್ಗೆ ನಿರಂತರವಾಗಿ ತಿಳಿದುಕೊಳ್ಳುವ ಮನೋಭಾವ ಬೆಳೆಸಿಕೊಳ್ಳಬೇಕು. ತಂತ್ರಜ್ಞಾನವನ್ನು ಸರಿಯಾದ ರೀತಿಯಲ್ಲಿ ಬಳಸಿಕೊಂಡರೆ ವೈದ್ಯಕೀಯ ಶಿಕ್ಷಣದ ಗುಣಮಟ್ಟವನ್ನು ಮತ್ತಷ್ಟು ಎತ್ತರಕ್ಕೆ ಕೊಂಡೊಯ್ಯಬಹುದು ಎಂದು ಅವರು ಹೇಳಿದರು.

**'ಹೇಲಿನೆಟ್' ವೈದ್ಯಕೀಯ ಜ್ಞಾನದ ಡಿಜಿಟಲ್ ಭಂಡಾರ:** ವೈದ್ಯಕೀಯ ಮತ್ತು ಆರೋಗ್ಯ ವಿಜ್ಞಾನ ಕ್ಷೇತ್ರದಲ್ಲಿ ಅಧ್ಯಯನ ನಡೆಸುತ್ತಿರುವ ವಿದ್ಯಾರ್ಥಿಗಳು, ಬೋಧಕ ಸಿಬ್ಬಂದಿ ಹಾಗೂ ಸಂಶೋಧಕರಿಗೆ ಅತ್ಯಂತ ಉಪಯುಕ್ತವಾಗುವಂತೆ ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು 'ಹೇಲಿನೆಟ್' ಡಿಜಿಟಲ್ ಗ್ರಂಥಾಲಯವನ್ನು ಪರಿಚಯಿಸಿದೆ. ವೈದ್ಯಕೀಯ ಶಿಕ್ಷಣ ಮತ್ತು ಸಂಶೋಧನೆಗೆ ಅಗತ್ಯವಿರುವ ಜ್ಞಾನ ಸಂಪನ್ಮೂಲಗಳನ್ನು ಒಂದೇ ಡಿಜಿಟಲ್ ವೇದಿಕೆಯಲ್ಲಿ ಪಡೆಯಲು ಇದು ನೆರವಾಗಲಿದೆ. ವಿದ್ಯಾರ್ಥಿಗಳು ಸಾಂಪ್ರದಾಯಿಕ ಗ್ರಂಥಾಲಯದ ಜತೆಗೆ ಇಂತಹ ಡಿಜಿಟಲ್ ಜ್ಞಾನ ಸಂಪನ್ಮೂಲಗಳನ್ನೂ ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕು ಎಂದರು.

## ಸಂಸ್ಥೆಯಿಂದ ಕುಲಪತಿಗೆ ಗೌರವ

ಹೈದ್ರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ವತಿಯಿಂದ ಡಾ. ಭಗವಾನ್ ಬಿ.ಸಿ. ಅವರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು. ಸಂಸ್ಥೆಯ ಜಂಟಿ ಕಾರ್ಯದರ್ಶಿ ಡಾ. ಕೈಲಾಶ್ ಪಾಟೀಲ್, ಆಡಳಿತ ಮಂಡಳಿ ಸದಸ್ಯರು ಹಾಗೂ ಕಾರ್ಯಕ್ರಮದ ಸಂಘಟಕರು, ಬಸವೇಶ್ವರ ಆಸ್ಪತ್ರೆಯ ಸಂಚಾಲಕ ಡಾ. ಕಿರಣ ದೇಶಮುಖ್, ವೈದ್ಯಕೀಯ ಕಾಲೇಜಿನ ಸಂಚಾಲಕ ಡಾ. ಶರಣಬಸಪ್ಪ ಹರವಾಳ, ಡಾ. ಮಹಾದೇವಪ್ಪ ರಾಂಪುರೆ, ಸಾಯಿನಾಥ್ ಪಾಟೀಲ್, ಅನಿಲಕುಮಾರ ಮರಗೋಳ, ಡೀನ್ ಡಾ. ಶರಣಗೌಡ ಪಾಟೀಲ್, ಉಪ ಡೀನ್ ಡಾ. ವಿಜಯಕುಮಾರ್ ಕಪ್ಪಿಕೇರಿ, ಡಾ. ಮಲ್ಲಿಕಾರ್ಜುನ ಭಂಡಾರ ಸೇರಿದಂತೆ ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸಿಂಡಿಕೇಟ್, ಸೆನೆಟ್, ಅಕಾಡೆಮಿಕ್ ಕೌನ್ಸಿಲ್ ಸದಸ್ಯರು ಹಾಗೂ ವಿಶ್ವವಿದ್ಯಾಲಯದ ಸಂಯೋಜಿತ ಕಾಲೇಜುಗಳ ಪ್ರಾಚಾರ್ಯರು ಉಪಸ್ಥಿತರಿದ್ದರು.



ಮೈಸೂರಿನ ದೇವರಾಜ ಮಾರುಕಟ್ಟೆಯಲ್ಲಿ ಭಾನುವಾರ ಗೌರಿ-ಗಣೇಶ ಹಬ್ಬಕ್ಕಾಗಿ ಜನರು ಉತ್ಸಾಹದಿಂದ ಅಗತ್ಯ ಸಾಮಗ್ರಿಗಳನ್ನು ಖರೀದಿಸಿದರು.

# ಶಾಂತಿ ಸುವ್ಯವಸ್ಥೆ ಕಾಪಾಡಲು ಮುಂದಾದ ಟಿ.ನರಸಿಪುರ ಇನ್ಸ್‌ಪೆಕ್ಟರ್ ಮೇಲೆ ಮುಗಿಬಿದ್ದ ಬಿಜೆಪಿ ನಾಯಕರು

**ಟಿ.ನರಸಿಪುರ, ಸೆ.13:** ಗಣೇಶೋತ್ಸವದ ಮೆರವಣಿಗೆಗಳನ್ನು ನೆಪವಾಗಿಸಿಕೊಂಡು ಕೋಮು ಸೌಹಾರ್ದತೆಗೆ ಧಕ್ಕೆ ತರುವ, ಸೂಕ್ಷ್ಮ ಪ್ರದೇಶಗಳಲ್ಲಿ ಪ್ರಚೋದನಾಕಾರಿ ಘೋಷಣೆಗಳನ್ನು ಕೂಗಿ ಗಲಭೆಗೆ ಪ್ರೇರೇಪಿಸುವ ಕೃತ್ಯಗಳಿಗೆ ಬ್ರೇಕ್ ಹಾಕಲು ಪೊಲೀಸ್ ಇಲಾಖೆ ಮುಂದಾಗಿದೆ. ಈ ಹಿನ್ನೆಲೆಯಲ್ಲಿ, ಮೈಸೂರು ಜಿಲ್ಲೆಯ ಟಿ ನರಸೀಪುರ ಪೊಲೀಸ್ ಇನ್‌ಸ್ಪೆಕ್ಟರ್ ಧನಂಜಯ್ ಅವರು ಹಿಂದುತ್ವವಾದಿ ಗುಂಪುಗಳನ್ನು ಕರೆದು ಶಾಂತಿ ಸಭೆ ನಡೆಸಿ ಸೌಹಾರ್ದತೆಯ ಮಾರ್ಗದರ್ಶನ್ ನೀಡಿ, ರಂಪಾಟ ನಡೆಸದಂತೆ ಖಡಕ್ ಎಚ್ಚರಿಕೆ ನೀಡಿದ್ದಾರೆ. ಆದರೆ, ಪೊಲೀಸರ ಕ್ರಮವನ್ನೂ ಸಹಿಸದ ಪ್ರತಿಪಕ್ಷ ನಾಯಕ ಆರ್. ಅಶೋಕ್, ಮೈಸೂರು ಸಂಸದ ಯದುವೀರ್ ಒಡೆಯರ್ ಹಾಗೂ ಮಾಜಿ ಸಂಸದ ಪ್ರತಾಪ್ ಸಿಂಹ ಮತ್ತಿತರ ಬಿಜೆಪಿಗರು ಟಿ. ನರಸೀಪುರ ಪೊಲೀಸ್ ಠಾಣೆ ಬಳಿ ಜಮಾಯಿಸಿ ದಾಂಧಲೆ ನಡೆಸಿದ್ದಾರೆ. ಆಡಳಿತ ಯಂತ್ರಕ್ಕೇ ಬೆದರಿಕೆ ಒಡ್ಡಿದ್ದಾರೆ.

ಟಿ ನರಸೀಪುರ ಠಾಣೆ ವ್ಯಾಪ್ತಿಯಲ್ಲಿ ಗಣೇಶೋತ್ಸವ ಮತ್ತು ಮೂರ್ತಿ ವಿಸರ್ಜನೆಗೆ ಸಂಬಂಧಿಸಿದಂತೆ ಸಾರ್ವಜನಿಕ ಶಾಂತಿ ಕಾಯ್ದುಕೊಳ್ಳಲು ಇನ್‌ಸ್ಪೆಕ್ಟರ್ ಧನಂಜಯ್ ಆಯೋಜಕರು ಮತ್ತು ಯುವಕರ ಸಭೆ ಕರೆದಿದ್ದರು. ಈ ವೇಳೆ ಮಾತನಾಡಿದ ಅವರು, ಮೆರವಣಿಗೆಯನ್ನು ಪೊಲೀಸರು ನಿಗದಿಪಡಿಸಿದ ಮಾರ್ಗದಲ್ಲೇ ನಡೆಸಬೇಕು. ಟಿ. ನರಸೀಪುರ ಲಿಂಕ್ ರಸ್ತೆಯಲ್ಲಿ ಮೆರವಣಿಗೆಗೆ ಅವಕಾಶವಿಲ್ಲ. ಮಸೀದಿಗಳ ಮುಂಭಾಗದಲ್ಲಿ ಅನಗತ್ಯವಾಗಿ



ಮೆರವಣಿಗೆ ತಡೆದು ನಿಲ್ಲಿಸುವುದು, ಪಟಾಕಿ ಸಿಡಿಸಿ ಪ್ರಚೋದನಕಾರಿ ಘೋಷಣೆ ಕೂಗುವುದನ್ನು ಸಹಿಸುವುದಿಲ್ಲ. ನಿಯಮ ಉಲ್ಲಂಘಿಸಿ ವಾತಾವರಣ ಕೆಡಿಸಿದರೆ ಗ್ರಹಚಾರ ಬಿಡಿಸುತ್ತೇನೆ' ಎಂದು ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದ್ದರು.

ಯಾವುದೇ ಕೋಮು ಗಲಭೆಗೆ ಆಸ್ಪದ ನೀಡಬಾರದೆಂಬ ಉದ್ದೇಶದಿಂದ ಪೊಲೀಸ್ ಅಧಿಕಾರಿ ನೀಡಿದ ಈ ಸ್ಪಷ್ಟ ಮತ್ತು ಕರ್ತವ್ಯನಿಷ್ಠ ಎಚ್ಚರಿಕೆಯ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿತ್ತು. ಪ್ರಚೋದನಕಾರಿ ಸನ್ನಿವೇಶಗಳನ್ನು ಸೃಷ್ಟಿಸಿ ರಾಜಕೀಯ ಬೇಳೆ ಬೇಯಿಸಿಕೊಳ್ಳಲು ಕಾಯುತ್ತಿದ್ದ ಹಿಂದುತ್ವವಾದಿ ಗುಂಪುಗಳಿಗೆ ಅಧಿಕಾರಿಯ ಈ ನಡೆಯು ನುಂಗಲಾರದ ತುತ್ತಾಗಿ ಪರಿಣಮಿಸಿದೆ.

ಖಡಕ್ ಅಧಿಕಾರಿಯ ಕ್ರಮದಿಂದ ಕಂಗಾಲಾದ ಬಿಜೆಪಿ ನಾಯಕರು, ವಿಷಯವನ್ನು 'ಹಿಂದು ವಿರೋಧಿ' ಎಂದು ಬಿಂಬಿಸಲು ತಕ್ಷಣವೇ ರಂಗಕ್ಕಿಳಿದಿದ್ದಾರೆ. ವಿಪಕ್ಷ ನಾಯಕ ಆರ್. ಅಶೋಕ್, ಮೈಸೂರು ಸಂಸದ ಯದುವೀರ್ ಒಡೆಯರ್ ಹಾಗೂ ಪ್ರತಾಪ್ ಸಿಂಹ ಬೆಂಬಲಿಗರೊಂದಿಗೆ ಟಿ. ನರಸೀಪುರ ಪೊಲೀಸ್ ಠಾಣೆಗೆ ಧಾವಿಸಿ ಅಧಿಕಾರಿಯನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ಅಧಿಕಾರಿಯ ಕ್ರಮವನ್ನು ಪ್ರಶ್ನಿಸಿದ ವಿಪಕ್ಷ ನಾಯಕ ಆರ್. ಅಶೋಕ್, ಕಾಂಗ್ರೆಸ್ ಸರ್ಕಾರ ಬಂದ ಮೇಲೆ ನೆಮ್ಮದಿಯಿಂದ ಗಣೇಶೋತ್ಸವ ಮಾಡಲೂ ಬಿಡುತ್ತಿಲ್ಲ, ಇಡೀ ರಾಜ್ಯಾದ್ಯಂತ ಸರ್ಕಾರದಿಂದ ಕಿರುಕುಳ ನಡೆಯುತ್ತಿದೆ. ಇನ್ಸ್‌ಟ್ಟರ್ ಧನಂಜಯ್ ಹೀಗೆ ಮಾತನಾಡಿದ್ದಾರೆ ಎಂದರೆ ಇದರ ಹಿಂದೆ ದೊಡ್ಡ ಷಡ್ಯಂತ್ರ ಮತ್ತು ಸರ್ಕಾರದ ಕುಮ್ಮಕ್ಕಿದೆ. ಹಿಂದುಗಳ ತಂಟೆಗೆ ಬಂದರೆ ಹುಷಾರ್, ಎಲ್ಲೇ ಗಣಪತಿ ಹಬ್ಬಕ್ಕೆ ತೊಂದರೆಯಾದರೂ ನಾನು ಬರುತ್ತೇನೆ. ನೀವೇನು ರೌಡಿನಾ ಗ್ರಹಚಾರ ಬಿಡಿಸೋಕೆ ಅಥವಾ ಮೆರವಣಿಗೆ ಮಾಡುವವರು ರೌಡಿಗಳಾ' ಎಂದು ಬೆದರಿಕೆ ಹಾಕಿದ್ದಾರೆ.

ಇತ್ತ ಮೈಸೂರು ಸಂಸದ ಯದುವೀರ್ ಒಡೆಯರ್ ಕೂಡ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದು, 'ಹಿಂದು ಹಬ್ಬಗಳ ಆಚರಣೆಗೆ ಮತ್ತು ಮೆರವಣಿಗೆಗಳಿಗೆ ಕಠಿಣ ಷರತ್ತುಗಳನ್ನು ವಿಧಿಸುವುದು ಈ ಸರ್ಕಾರದ ಅಭ್ಯಾಸವಾಗಿದೆ. ಮಸೀದಿ ಅಥವಾ ದೇವಸ್ಥಾನಗಳಿರುವ ರಸ್ತೆಗಳಲ್ಲಿ ಮೆರವಣಿಗೆ ಹೋಗಬಾರದು ಎಂದು ತಡೆಯುವುದು ಸೂಕ್ತವಲ್ಲ. ಸಾರ್ವಜನಿಕರಿಗೆ ಸೇರಿದ ಎಲ್ಲಾ ರಸ್ತೆಗಳಲ್ಲೂ ಮೆರವಣಿಗೆ ನಡೆಸುವ ಹಕ್ಕು ಪ್ರಜೆಗಳಿಗಿದೆ. ಧಾರ್ಮಿಕ ಚೌಕಟ್ಟಿನ ಆಚರಣೆಗಳಿಗೆ ಜಾತ್ಯತೀತತೆಯ ನೆಪದಲ್ಲಿ ಅಡೆತಡೆ ಉಂಟುಮಾಡಲಾಗುತ್ತಿದೆ' ಎಂದು ವಾದಿಸಿದ್ದಾರೆ.

ಗಲಭೆಪೀಡಿತ ಸೂಕ್ಷ್ಮ ಪ್ರದೇಶಗಳಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ಪೊಲೀಸರು ಕೈಗೊಳ್ಳುವ ಭದ್ರತಾ ನಿಯಮಗಳನ್ನು ರಾಜಕೀಯ ಲಾಭಕ್ಕೆ ಬಳಸಿಕೊಳ್ಳುತ್ತಿರುವ ಬಿಜೆಪಿ ನಾಯಕರ ನಡೆ, ಸಾರ್ವಜನಿಕ ವಲಯದಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

ಮೈಸೂರು ಜಿಲ್ಲೆಯ ಟಿ.ನರಸೀಪುರದಲ್ಲಿ ಗಣೇಶೋತ್ಸವ ಆಚರಣೆಯ ವೇಳೆ ಪೊಲೀಸರು ವಿಧಿಸಿರುವ ಷರತ್ತು ಹಾಗೂ ಯುವಕರಿಗೆ ಬೆದರಿಕೆ ಹಾಕಿದ ಆರೋಪ ಎದುರಿಸುತ್ತಿರುವ ಇನ್ಸ್ ಪೆಕ್ಟರ್ ಧನಂಜಯ್ ಅವರನ್ನು ತಕ್ಷಣವೇ ಸೇವೆಯಿಂದ ಅಮಾನತುಗೊಳಿಸಬೇಕೆಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆಗ್ರಹಿಸಿದ್ದಾರೆ. ತುಷ್ಟೀಕರಣ ರಾಜಕಾರಣದ ಫರ್ಮಾನಿನಿಂದ ಇಲಾಖೆ ಕಾರ್ಯನಿರ್ವಹಿಸುತ್ತಿದೆಯೇ ಎಂದು ಪ್ರಶ್ನಿಸಿರುವ ಜೋಶಿ, ಸನಾತನ ಸಂಸ್ಕೃತಿಯ ಆಚರಣೆಗೆ ಅಡ್ಡಿಪಡಿಸಿದರೆ ಸಹಿಸುವುದಿಲ್ಲ ಎಂದು ಎಕ್ಸ್ ನಲ್ಲಿ ಖಂಡಿಸಿದ್ದಾರೆ.ಭಕ್ತಿಭಾವದಿಂದ ಹಬ್ಬ ಆಚರಿಸಲು ಮುಂದಾದ ಯುವಕರಿಗೆ ಸಾರ್ವಜನಿಕವಾಗಿ ಪೊಲೀಸ್ ಅಧಿಕಾರಿಯೊಬ್ಬರು ಬೆದರಿಕೆ ಹಾಕಿರುವುದು ಅಕ್ಷಮ್ಯ ಎಂದಿದ್ದಾರೆ. ಅಧಿಕಾರಿಯ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳಬೇಕು ಮತ್ತು ಅವರನ್ನು ಸೇವೆಯಿಂದ ಅಮಾನತುಗೊಳಿಸಬೇಕು. ಗಣೇಶೋತ್ಸವದಂತಹ ಧಾರ್ಮಿಕ ಆಚರಣೆಗಳಿಗೆ ಅಡ್ಡಿಪಡಿಸುವ ಪ್ರಯತ್ನವನ್ನು ಯಾವುದೇ ಕಾರಣಕ್ಕೂ ಸಹಿಸಲಾಗದು. ಕಾಂಗ್ರೆಸ್ ಸರ್ಕಾರದ ಆಡಳಿತ ನೀತಿ ಮತ್ತು ತುಷ್ಟಿಕರಣದ ರಾಜಕಾರಣದ ಮೇಲೂ ಪ್ರಶ್ನೆಗಳನ್ನು ಎತ್ತಿದ್ದಾರೆ. ಟಿ.ನರಸೀಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಗಣೇಶ ಮೂರ್ತಿ ಪ್ರತಿಷ್ಠಾಪನೆ ಹಾಗೂ ಮೆರವಣಿಗೆಯ ಪೂರ್ವಭಾವಿ/ಆಚರಣಾ ಸಂದರ್ಭದಲ್ಲಿ ಕಾನೂನು-ಸುವ್ಯವಸ್ಥೆಯ ನೆಪ ಒಡ್ಡಿ ಇನ್ಸ್ ಪೆಕ್ಟರ್ ಧನಂಜಯ್ ಅವರು, ಗಣೇಶ ಸಮಿತಿಯ ಯುವಕರಿಗೆ ಸಾರ್ವಜನಿಕವಾಗಿ ಗದರಿಸಿ, ಕಾರ್ಯಕ್ರಮ ರದ್ದುಪಡಿಸುವುದಾಗಿ ಎಚ್ಚರಿಕೆ ನೀಡಿದ್ದರ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿತ್ತು.

## ವಿಜಯನಗರ ಸ್ಪೋರ್ಟ್ಸ್ ಅಂಡ್ ಕಲ್ಚರಲ್ ಅಸೋಸಿಯೇಷನ್

# 5000 ಉಚಿತ ವಿತರಣೆ ಪರಿಸರ ಸ್ನೇಹಿ ಗೌರಿ-ಗಣೇಶ ಮೂರ್ತಿಗಳ ಉಚಿತ ವಿತರಣೆ

**ವಿಜಯನಗರ, ಸೆ.13**-ವಿಜಯನಗರ ಸ್ಪೋರ್ಟ್ಸ್ ಅಂಡ್ ಕಲ್ಚರಲ್ ಅಸೋಸಿಯೇಷನ್ ಹಾಗೂ ಜಯ, ಜಯಸಾಯಿ ಎಂಟರ್‌ಪ್ರೈಸಸ್ ವತಿಯಿಂದ ಆಯೋಜಿಸಿದ್ದ ಮೆಗಾ ಕಾರ್ಯಕ್ರಮದಲ್ಲಿ ಬಿ.ವಿ. ಸುರೇಶ್ ಹಾಗೂ ಅರ್ಚನಾ ಸುರೇಶ್ ದಂಪತಿಯ ನೇತೃತ್ವದಲ್ಲಿ ಸಾರ್ವಜನಿಕರಿಗೆ 5000 ಮಣ್ಣಿನ ಗೌರಿ-ಗಣೇಶ ಮೂರ್ತಿಗಳನ್ನು ಉಚಿತವಾಗಿ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ, ಎಚ್. ರವೀಂದ್ರ, ಶೈಲಜಾ ಸೋಮಣ್ಣ, ಬಿ.ವಿ. ಸುರೇಶ್, ಶ್ರೀಮತಿ ಅರ್ಚನಾ ಸುರೇಶ್



ಸೇರಿದಂತೆ ಗಣ್ಯರು, ಸಂಘಟನೆಯ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಹಾಜರಿದ್ದರು.

# ಕಾಲುವೆ ನೀರಿಗೆ ಆಗ್ರಹಿಸಿ, ಸಿಂಧನೂರು-ಬಳ್ಳಾರಿ ಹೆದ್ದಾರಿ ತಡೆದು ರೈತರ ಪ್ರತಿಭಟನೆ



**ರಾಯಚೂರು, ಸೆ. 13:** ತುಂಗಭದ್ರಾ ಎಡದಂಡೆ ಮುಖ್ಯ ಕಾಲುವೆ 36ನೇ ವಿತರಣಾ ಕಾಲುವೆ ಕೆಳಭಾಗದ ಜಮೀನುಗಳಿಗೆ ನೀರು ಪೂರೈಕೆಗೆ ಆಗ್ರಹಿಸಿ ಜಿಲ್ಲೆಯ ಸಿಂಧನೂರು ತಾಲ್ಲೂಕಿನ ಬೂದಿವಾಳ ಕ್ಯಾಂಪ್‌ನಲ್ಲಿ ಪಕ್ಷಾತೀತವಾಗಿ ರೈತರಿಂದ ಸಿಂಧನೂರು-ಬಳ್ಳಾರಿ ಹೆದ್ದಾರಿ ಸಂಚಾರ ತಡೆದು ಪ್ರತಿಭಟನೆ ನಡೆಸಲಾಯಿತು.

ಬೆಳಿಗ್ಗೆ 9.30 ಗಂಟೆಗೆ ಆರಂಭವಾದ ರಸ್ತೆ ಸಂಚಾರ ತಡೆ ಮಧ್ಯಾಹ್ನ 12 ಗಂಟೆಯ ವರೆಗೂ ನಡೆಯಿತು. ಹತ್ತು ವರ್ಷಗಳ ಹಿಂದೆ 36ನೇ ವಿತರಣಾ ಕಾಲುವೆಗೆ 3,200 ಕ್ಯುಸೆಕ್ ನೀರು ಹರಿಸಿದರೂ ಬೂದಿವಾಳಕ್ಯಾಂಪ್ ಸೇರಿದಂತೆ ಸೋಮಲಾಪುರ, ದಢೇಸುಗೂರು, ಸಾಲಗುಂದಾ ಗ್ರಾಮದ ಜಮೀನುಗಳಿಗೆ ನೀರು ತಲುಪುತ್ತಿತ್ತು. ಮುಖ್ಯ ಕಾಲುವೆಗೆ 4,100 ಕ್ಯುಸೆಕ್ ನೀರು ಹರಿಸಿದರೂ ಜಮೀನುಗಳಿಗೆ ನೀರು ಬರುತ್ತಿಲ್ಲ ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದರು.

ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷ ಎಂ.ದೊಡ್ಡಬಸವರಾಜ, ಆರ್‌ಡಿಸಿಸಿ ಬ್ಯಾಂಕ್ ನಿರ್ದೇಶಕ ಸೋಮನಗೌಡ ಬಾದರ್ಲಿ, ಮುಖಂಡರಾದ ಸಾಯಿ ರಾಮಕೃಷ್ಣ, ಹುಸೇನ್‌ಬಾಷಾ ಸಾಲಗುಂದಾ ಮತ್ತಿತರರು ಮಾತನಾಡಿ, 'ಅಧಿಕಾರಿಗಳ ನಿರ್ಲಕ್ಷ್ಯ, ಜನಪ್ರತಿನಿಧಿಗಳ ಉದಾಸೀನತೆಯಿಂದ ಕೆಳ ಭಾಗದ ರೈತರ ಜಮೀನುಗಳಿಗೆ ನೀರು ಪೂರೈಕೆಯಾಗುತ್ತಿಲ್ಲ ಎಂದು ಆಪಾದಿಸಿದರು.

ಸ್ಥಳದಲ್ಲೇ ಇದ್ದ ಸಿಂಧನೂರು ಉಪ ವಿಭಾಗದ ಎಇಇ ನಾಗಪ್ಪ ಅವರಿಗೆ ಮುಂದಿನ ದಿನಗಳಲ್ಲಿ ಕಾಲುವೆಗೆ ಗೇಜಿನ ಪ್ರಕಾರ ನೀರು ಹರಿಸಬೇಕು. ಮೇಲ್ಭಾಗದಲ್ಲಿ ಕೆಲವರು ಅಕ್ರಮವಾಗಿ ಹಾಕಿಕೊಂಡಿರುವ ಪೈಪ್‌ಗಳನ್ನು ತೆರವುಗೊಳಿಸಬೇಕು ಎಂದು ಒತ್ತಾಯಿಸಿದರು.

ಪ್ರಭಾವಿಗಳು ನೇರ ಕಾರಣ: ಮುಖ್ಯ ಕಾಲುವೆಯ ಮೇಲ್ಭಾಗದಲ್ಲಿ ಪ್ರಭಾವಿಗಳು ಅನಧಿಕೃತವಾಗಿ ನೀರಾವರಿ ಮಾಡಿಕೊಂಡಿದ್ದಾರೆ. ಹೀಗಾಗಿ ಕೆಳಭಾಗದ ರೈತರ ಜಮೀನುಗಳಿಗೆ ನೀರು ತಲುಪುವುದು ಕಷ್ಟಸಾಧ್ಯವಾಗಿದೆ.

ಅಧಿಕಾರಿಗಳೂ ಅಸಹಾಯಕರಾಗಿದ್ದಾರೆ. ಗಂಗಾವತಿ, ಕನಕಗಿರಿ ತಾಲ್ಲೂಕಿನ ಶಾಸಕರು ಈ ಸಮಸ್ಯೆ ಮೂಲವಾಗಿದ್ದಾರೆ. ಈ ಅಕ್ರಮದ ವಿರುದ್ಧ ಸಿಂಧನೂರು, ಮಾನ್ವಿ, ರಾಯಚೂರು ಭಾಗದ ಶಾಸಕರು ಧ್ವನಿ ಎತ್ತದೇ ಮೌನವಾಗಿದ್ದಾರೆ ಎಂದು ರೈತ ಮುಖಂಡ ಸಾಯಿ ರಾಮಕೃಷ್ಣ ಆರೋಪಿಸಿದರು.

ಇಇ ಸತ್ಯನಾರಾಯಣ ಭರವಸೆ: 36ನೇ ವಿತರಣಾ ಕಾಲುವೆಗೆ ಸಮರ್ಪಕವಾಗಿ ನೀರು ಹರಿಸಲು ನಿರಂತರವಾಗಿ ಪ್ರಯತ್ನಿಸುತ್ತಿದ್ದೇವೆ. ಮಳೆಯ ಅಭಾವ ಉಂಟಾಗಿ ತೇವಾಂಶ ಕೊರತೆಯಿಂದ ಹೆಚ್ಚಿನ ನೀರು ಜಮೀನಿನಲ್ಲಿ ಇಂಗುತ್ತಿದೆ. ಇದರಿಂದ ಕೆಳಭಾಗದ ರೈತರಿಗೆ ತೊಂದರೆಯಾಗಿದೆ. ಇನ್ನು ಹೆಚ್ಚಿನ ನಿಗಾವಹಿಸಿ, ಕೆಳಭಾಗಕ್ಕೆ ನೀರು ತಲುಪಿಸಲಾಗುವುದು ಎಂದು ಸತ್ಯನಾರಾಯಣ ಭರವಸೆ ನೀಡಿದರು.

ಎಇಇ ನಾಗಪ್ಪ ಮಾತನಾಡಿ, ವಿತರಣಾ ಕಾಲುವೆಯಲ್ಲಿ ಹುಲ್ಲು ಮತ್ತು ಇತರೆ ತ್ಯಾಜ್ಯ ತುಂಬಿ ನೀರು ಹರಿಯಲು ಅಡೆಚಣೆಯಾಗಿತ್ತು. ಈಗ ತೆರವುಗೊಳಿಸಲಾಗಿದ್ದು, ಕೆಳಭಾಗಕ್ಕೆ ನೀರು ಸರಾಗವಾಗಿ ಹರಿಯಲಿದೆ ಎಂದು ಹೇಳಿದರು.

ಆದರೂ ತಹಶೀಲ್ದಾರ್ ಮತ್ತು ಶಾಸಕರು ಸ್ಥಳಕ್ಕೆ ಬರಬೇಕು ಎಂದು ಪಟ್ಟು ಹಿಡಿದರು. ನೀರು ತಲುಪಿಸುವ ಭರವಸೆ ನೀಡಿದ್ದಾರೆ. ಹಠ ಹಿಡಿಯುವುದು ಬೇಡ ನೀರು ತಲುಪಿಸದಿದ್ದರೆ ಪುನಃ ರಸ್ತೆ ಸಂಚಾರ ತಡೆದು ಉಗ್ರವಾಗಿ ಪ್ರತಿಭಟಿಸೋಣ ಎಂದು ಕೆ.ರಾಜಶೇಖರ, ಎಂ. ದೊಡ್ಡಬಸವರಾಜ, ಸೋಮನಗೌಡ ಬಾದರ್ಲಿ ರೈತರನ್ನು ಮನವೊಲಿಸಿದ್ದರಿಂದ ಪ್ರತಿಭಟನೆ ಹಿಂಪಡೆಯಲಾಯಿತು.

## ಉದ್ವಿಗ್ನ ಸ್ಥಿತಿ ನಿರ್ಮಾಣ

ಪ್ರತಿಭಟನೆ ವೇಳೆ ಮಾಜಿ ಸಚಿವ ವೆಂಕಟರಾವ್ ನಾಡಗೌಡರ ಪುತ್ರ ಅಭಿಷೇಕ್ ನಾಡಗೌಡ ಅವರು, ರೈತರು ಯಾರ ವಿರುದ್ಧ ಪ್ರತಿಭಟಸಬೇಕು ಎಂಬುದೇ ತಿಳಿಯದಂತಾಗಿದೆ. ಅಲ್ಲದೆ ಜೋಳ ಬೆಳೆಗಾರರ ?150 ಕೋಟಿ ಬಾಕಿ ಹಣ ಪಾವತಿಯಾಗಿಲ್ಲ ಎಂದು ಹೇಳಿ ಕುಳಿತರು. ನಂತರ ಆರ್‌ಡಿಸಿಸಿ ಬ್ಯಾಂಕ್ ನಿರ್ದೇಶಕ ಸೋಮನಗೌಡ ಬಾದರ್ಲಿ ಮಾತನಾಡಿ, 'ರೈತರ ವಿಷಯದಲ್ಲಿ ರಾಜಕೀಯ ಸರಿಯಲ್ಲ ಎಂದರು.

ಇದಕ್ಕೆ ಎಂಎಲ್‌ಸಿ ಬಸನಗೌಡರ ಆಪ್ತ ವೀರರಾಜು, ಕೇಂದ್ರ ಸಚಿವ ಕುಮಾರಸ್ವಾಮಿ ಅವರು ಜೋಳ ಮಾರಿದ ರೈತರಿಗೆ ಹಣ ಕೊಡಲಿ ಎಂದು ಪಿಸು ಧ್ವನಿಯಲ್ಲಿ ಹೇಳಿದರು. ಇದನ್ನು ಕೇಳಿಸಿಕೊಂಡ ಅಭಿಷೇಕ್ ನಾಡಗೌಡ ಅವರು ಆವೇಶಭರಿತರಾಗಿ ರೇಗಾಡಿದರು.

ಇದರಿಂದ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಯಿತು. ಎಸ್‌ಐ ಮೌನೇಶ ರಾಠೋಡ, ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷ ಎಂ.ದೊಡ್ಡಬಸವರಾಜ, ಆರ್‌ಡಿಸಿಸಿ ಬ್ಯಾಂಕ್ ನಿರ್ದೇಶಕ ಸೋಮನಗೌಡ ಬಾದರ್ಲಿ ಅವರು, ಅಭಿಷೇಕ್ ನಾಡಗೌಡ ಅವರನ್ನು ಮನವೊಲಿಸಿ ಪರಿಸ್ಥಿತಿ ತಿಳಿಗೊಳಿಸಿದರು.

# ವಿದ್ಯುತ್ ಕಣ್ಣಾಮುಚ್ಚಾಲೆ ವಿರುದ್ಧ ರೈತರ ಗುಡುಗು



ವಿಜಯಪುರ : ಇತ್ತೀಚೆಗೆ ಇಲಾಖೆ ಮುಖ್ಯಸ್ಥರಿಂದ ಜಿಲ್ಲೆಯ ಹೆಸ್ಕಾಂ ಅಧಿಕಾರಿಗಳಿಗೆ ಒಂದು ಸಂದೇಶ ಬಂದಿರುವ ಹಿನ್ನಲ್ಲೆಯಲ್ಲಿ ವಿದ್ಯುತ್ ವಿತರಣೆಯನ್ನು ತಡೆಹಿಡಿದಿರುವುದರಿಂದ ತಳುಕಿನ ಜಂಬಗಿ ರೈತರಿಗೆ ಸಾಕಷ್ಟು ಸಮಸ್ಯೆ ಉಂಟಾಗಿ ಕೆ.ಇ.ಬಿ ಮುತ್ತಿಗೆ ಹಾಕಿ ದಿನವಿಡೀ ಪ್ರತಿಭಟನೆ ಮಾಡಿದರು

ಕರ್ನಾಟಕ ರಾಜ್ಯ ರೈತಸಂಘ ಹಾಗೂ ಹಸಿರು ಸೇನೆಯ ವಿಜಯಪುರ ತಾಲೂಕು ಅಧ್ಯಕ್ಷ ಅನಮೇಶ ಜಮಖಂಡಿ ನೇತೃತ್ವದಲ್ಲಿ ನೂರಾರು ರೈತರು ಜಂಬಗಿ ಕೆ.ಇ.ಬಿ ಕಚೇರಿಗೆ ಬೀಗ ಜಡಿದು ಪ್ರತಿಭಟನೆ ಮಾಡಿದರು, ಈ ಮುಂಚೆ ಹಗಲು 7 ಗಂಟೆ ತ್ರೀ ಫೇಸ್, ರಾತ್ರಿ ಸಿಂಗಲ್ ಫೇಸ್‌ವಿರುದ್ಧ ಕೊಡುತ್ತಿದ್ದರು, ಆದರೆ ಈಗ ಏಕಾ ಏಕಿ ವಿದ್ಯುತ್ ಕಟ್ ಮಾಡುತ್ತಿರುವುದರಿಂದ ಈ ಬಾಗದ ರೈತರಿಗೆ ತುಂಬಾ ಸಮಸ್ಯೆ ಆಗುತ್ತಿದ್ದು, ಅದಕ್ಕಾಗಿ ಈ ಪ್ರತಿಭಟನೆ ಮಾಡುತ್ತಿದ್ದೆವೆ ಎಂದರು

ಇಲಾಖೆಯ ಅಧಿಕಾರಿಗಳು ರೈತರಿಗೆ ಸಮಾಧಾನ ಪಡಿಸಲು ಸಾಕಷ್ಟು ಪ್ರಯತ್ನಪಟ್ಟರೂ ಕೂಡಾ ಯಶಸ್ಸು ಕಾಣಲಿಲ್ಲ, ರೈತರು ಸರಕಾರವನ್ನು ದೂರುತ್ತಾ ಮೊದಲೇ ಬರಗಾಲದಿಂದ ಕಂಗೆಟ್ಟು ಹೋಗಿದ್ದೇವೆ, ಅಲ್ಪ ಸೊಲ್ಪ ನೀರಿನಿಂದ ಇರುವ ಬೆಳೆಗಳನ್ನು ಉಳಿಸಿಕೊಳ್ಳಬೇಕೆಂದರೆ ವಿದ್ಯುತ್ ಕರೆಂಟ್‌ನ ನಾಟಕ ಪ್ರಾರಂಭ ಮಾಡಿದ್ದಾರೆ, ರಾಜ್ಯದ ಮುಖ್ಯಮಂತ್ರಿಗಳು ಹಾಗೂ ಇಂಧನ ಸಚಿವರು ಯಾವುದೇ ಕಾರಣಕ್ಕೂ ರೈತರನ್ನು ಕೆಣಕಿದರೆ ನಾವೂ ಸುಮ್ಮನೆ ಕೂಡುವುದಿಲ್ಲ, ಈಡಿ ಜಿಲ್ಲೆಯನ್ನು ಬಂದ್ ಮಾಡಿ ಹೋರಾಟ ಮಾಡುತ್ತೆವೆ ಎಂದರು

ಈ ವೇಳೆ ವಿಜಯಪುರ ಗ್ರಾಮೀಣ ಹೆಸ್ಕಾಂ ಎ.ಇ.ಇ ಅನಿಲ್ ಪೂಜಾರಿ ಅವರು ಹೋರಾಟದ ಸ್ಥಳಕ್ಕೆ ಆಗಮಿಸಿ ರೈತರೊಂದಿಗೆ ವಿವಿಧ ರೀತಿಯಿಂದ ಮನಒಲಿಸಲು ಪ್ರಯತ್ನಿಸಿದರು ಕೊನೆಗೆ ಇದು ಸರ್ಕಾರ ನಿರ್ಣವಿದೆ, ಇನ್ನು ಕೇಲವೇ ದಿನಗಳಲ್ಲಿ ಈ ಸಮಸ್ಯೆ ಬಗೆಹರಿಯಲಿದೆ ಎಂದು ಮನವಿ ಸ್ವೀಕರಿಸಿ ಹೋರಾಟ ಮುಗಿಸುವಲ್ಲಿ ಸಫಲರಾದರು.

ಈವೇಳೆ ಬಸಗೊಂಡ ತೇಲಿ, ಆತ್ಮಾನಂದ ಭೈರೋಡಗಿ, ಲಗಮಣ್ಣ ಸಾತಪುರ, ರಾಕೇಸ್‌ಸಿಂಗ್ ಡೋಣೂರ, ಬಸವರಾಜ ಕಾಪ್ಸೆ, ಶಿವಪ್ಪ ಮಸೂತಿ, ರಾಜು ಜಾಧವ, ಚನ್ನು ಜಮಖಂಡಿ, ಗೋಪಾಲ ಜಾಧವ, ಶ್ರೀಮಂತ ಮಾಲಗಾರ, ಈರಯ್ಯ ಆಲಗೋಡ, ಸಂಗಮನಾಥ ಔರಸಂಗ, ಬಸವರಾಜ ದೇಶಮುಖ ಸೇರಿದಂತೆ ನೂರಾರು ರೈತರು ಇದ್ದರು.

# ಬ್ರಿಕ್ಸ್: ಗಲ್ಫ್ ಪ್ರದೇಶದ ಉದ್ವಿಗ್ನತೆ ಶಮನಕ್ಕೆ ಸಮ್ಮತಿಸಿದ್ದರೂ ಮಧ್ಯಸ್ಥಿಕೆಯಿಂದ ಹಿಂಜರಿದ ಕೆಲವು ರಾಷ್ಟ್ರಗಳು

**ನವದೆಹಲಿ, ಸೆ.13:** ನವದೆಹಲಿಯಲ್ಲಿ ನಡೆದ ಬ್ರಿಕ್ಸ್ ಶೃಂಗಸಭೆಯು ಮುಕ್ತಾಯಗೊಳ್ಳುತ್ತಿರುವಂತೆಯೇ, ಭಾನುವಾರ ಹಾರ್ಮುಜ್ ಜಲಸಂಧಿಯಲ್ಲಿ ಹಡಗೊಂದಕ್ಕೆ ಕ್ಷಿಪಣಿ ಅಪ್ಪಳಿಸಿದ ಆತಂಕಕಾರಿ ಸುದ್ದಿ ಹೊರಬಿದ್ದಿದೆ. ಇದಕ್ಕೂ ಮೊದಲು, ಇರಾಕ್ ಭೂಭಾಗದಿಂದ ನಡೆದ ಡ್ರೋನ್ ದಾಳಿಯ ನಂತರ ತನ್ನ ಈಸ್ಟ್–ವೆಸ್ಟ್ ಪೈಪ್‌ಲೈನ್ ಕಾರ್ಯಾಚರಣೆ ಯನ್ನು ಸ್ಥಗಿತಗೊಳಿಸುವುದಾಗಿ ಸೌದಿ ಅರೇಬಿಯಾ ಘೋಷಿಸಿತ್ತು. ಈ ಘಟನೆಗಳು ಭೀತಿಯನ್ನು ಹೆಚ್ಚಿಸಿದ್ದು, ಪ್ರದೇಶದಲ್ಲಿ ಸಂಯಮ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ರಾಜತಾಂತ್ರಿಕ ಪ್ರಯತ್ನಗಳನ್ನು ಚುರುಕುಗೊಳಿಸಿವೆ.

ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ಧವನ್ನು ಅಂತ್ಯಗೊಳಿಸಲು ಬ್ರಿಕ್ಸ್ ಒಕ್ಕೂಟಕ್ಕೆ ಜಾರಿಗೊಳಿಸುವ ಅಧಿಕಾರವಿಲ್ಲದಿದ್ದರೂ, ಇರಾನ್ ಅಧ್ಯಕ್ಷರು, ಯುಎಇ ಯುವರಾಜ ಹಾಗೂ ಸೌದಿ ಅರೇಬಿಯಾದ ವಿದೇಶಾಂಗ ಸಚಿವರು ನವದೆಹಲಿಯಲ್ಲಿ ಉಪಸ್ಥಿತರಿದ್ದರು. ಸಂಯಮ ವಹಿಸಲು ಮತ್ತು ಉಭಯ ಪಕ್ಷಗಳ ನಡುವೆ ಉನ್ನತ ಮಟ್ಟದ ನೇರ ಸಂಪರ್ಕವನ್ನು ಪುನರಾರಂಭಿಸಲು ಕರೆ ನೀಡುವ ಒಕ್ಕೂಟದ ಪ್ರಕಟಣೆಯು, ಸಂಘರ್ಷದಿಂದ ಬಾಧಿತರಾದವರ ಕಡೆಯಿಂದ ಶಾಂತಿಗಾಗಿ ಬಂದ ಬಲವಾದ ಸಂದೇಶವಾಗಿದೆ.

ಶೃಂಗಸಭೆಯ ಮೊದಲ ದಿನದಂದು ವಿಸ್ತರಿತ ಬ್ರಿಕ್ಸ್ ಒಕ್ಕೂಟವು ಒಮ್ಮತದಿಂದ



ನವದೆಹಲಿ ಪ್ರಕಟಣೆಯನ್ನು (New Delhi Declaration) ಅಂಗೀಕರಿಸಿದಾಗ ಈ ಪ್ರಮುಖ ಪ್ರಗತಿ ಕಂಡುಬಂತು. ಮಧ್ಯಪ್ರಾಚ್ಯದಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆಯ ಬಗ್ಗೆ "ತೀವ್ರ ಕಳವಳ" ವ್ಯಕ್ತಪಡಿಸಿದ ಒಕ್ಕೂಟವು, ಸಂಘರ್ಷವನ್ನು ಮತ್ತಷ್ಟು ಹೆಚ್ಚಿಸುವಂತಹ ಕ್ರಮಗಳನ್ನು ತಡೆಯುವುದರ ಜೊತೆಗೆ "ಗರಿಷ್ಠ ಸಂಯಮ" ವಹಿಸುವಂತೆ ಕರೆ ನೀಡಿದೆ.

"ಬ್ರಿಕ್ಸ್ ಒಕ್ಕೂಟವು ಜಗಳ ಮತ್ತು ಅದರ ಪರಿಣಾಮಗಳ ಕುರಿತು ವಿಶ್ವದ ಉಳಿದ ಭಾಗಗಳ ಕಳವಳವನ್ನು ವ್ಯಕ್ತಪಡಿಸಿದೆ. ಈ ಹಿಂದೆ ಮುಖಾಮುಖಿ ನೋಡದಿದ್ದ ನಾಯಕರು ಇದಕ್ಕೆ ಅಂಕಿತ ಹಾಕಿರುವುದು ನಮಗೆ ಕನಿಷ್ಠ ಭರವಸೆಯನ್ನು ನೀಡುತ್ತದೆ," ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಮಾಜಿ ಕಾರ್ಯದರ್ಶಿ (ಆರ್ಥಿಕ ಸಂಬಂಧಗಳು) ಪಿನಾಕ್ ರಂಜನ್ ಚಕ್ರವರ್ತಿ ಯುಎನ್‌ಐ ಸುದ್ದಿ ಸಂಸ್ಥೆಗೆ ತಿಳಿಸಿದ್ದಾರೆ.

> ಶೃಂಗಸಭೆಯ ಹೊರತಾಗಿ ಶನಿವಾರದಂದು ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯನ್ ಅವರು ಅಬುಧಾಬಿಯ ಯುವರಾಜ ಖಾಲಿದ್ ಬಿನ್ ಮೊಹಮ್ಮದ್ ಆಲ್ ನಹ್ಯಾನ್ ಅವರನ್ನು ಭೇಟಿಯಾದರು. ಸಂಘರ್ಷ ಪ್ರಾರಂಭವಾದ ನಂತರ ಎರಡೂ ನೆರೆಹೊರೆಯ ದೇಶಗಳ ನಡುವೆ ನಡೆದ ಅತ್ಯುನ್ನತ ಮಟ್ಟದ ಸಭೆ ಇದಾಗಿದೆ. ಗಲ್ಫ್ ಪರಿಸ್ಥಿತಿಯ ಕುರಿತು ರಷ್ಯಾ, ಭಾರತ ಮತ್ತು ಇರಾನ್ ಜೊತೆ ಮಾತುಕತೆ ನಡೆಸಿರುವ ಚೀನಾ ಅಧ್ಯಕ್ಷ ಕ್ಸಿ ಜಿನ್ಪಿಂಗ್ ಅವರು ಈ ತಿಂಗಳ ಅಂತ್ಯದಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಭೇಟಿಯಾಗಲಿದ್ದು, ಇದು ಸಂಘರ್ಷದಲ್ಲಿ ಕನಿಷ್ಠ ಒಂದು ಅಸ್ಥಿರ ಕದನ ವಿರಾಮ ತರಲು ವೇಗ ನೀಡಬಹುದು.

ಯೆಮೆನ್‌ನಲ್ಲಿ ಇರಾನ್ ಬೆಂಬಲಿತ ಹೌತಿ ದಂಗೆಕೋರರು ಸೌದಿ ಬೆಂಬಲಿತ ಸರ್ಕಾರಿ ಪಡೆಗಳಿಂದ ಪ್ರಮುಖ 'ಮೊಖಾ' ಬಂದರು ಮತ್ತು ಕೆಂಪು ಸಮುದ್ರದ ಪ್ರವೇಶ ದ್ವಾರದಲ್ಲಿರುವ ಎರಡು ದ್ವೀಪಗಳನ್ನು ವಶಪಡಿಸಿಕೊಂಡಿರುವುದರಿಂದ ಸಂಘರ್ಷವು ಈಗ ಮತ್ತಷ್ಟು ವಿಸ್ತರಿಸಿದೆ. ಸಂಘರ್ಷದ ಕಾರಣದಿಂದ ಹಾರ್ಮುಜ್ ಜಲಸಂಧಿ ಮುಚ್ಚಲ್ಪಟ್ಟರೆ ಹಾಗೂ ಹೌತಿಗಳ ಬೆದರಿಕೆಯಿಂದ ಕೆಂಪು ಸಮುದ್ರ ಮತ್ತು ಸೂಯೆಜ್ ಕಾಲುವೆ ಸಂಚಾರ ಸ್ಥಗಿತಗೊಂಡರೆ ಜಾಗತಿಕ ವ್ಯಾಪಾರವು ಸಂಪೂರ್ಣವಾಗಿ ಸ್ಥಬ್ದಗೊಳ್ಳಲಿದೆ. ವಿಶ್ವದ ಶೇ.40 ರಷ್ಟು ಕಚ್ಚಾ ತೈಲ ಮತ್ತು ಜಾಗತಿಕ ಸಮುದ್ರ ವ್ಯಾಪಾರದ ಅರ್ಧ ಒಂದು ಭಾಗವು ಈ ಎರಡು ಪ್ರಮುಖ ಜಲಮಾರ್ಗಗಳ ಮೂಲಕವೇ ಸಾಗುತ್ತದೆ.

ಈ ಪ್ರದೇಶದಲ್ಲಿ ಶಾಂತಿಯನ್ನು ಬಯಸುವ ಬ್ರಿಕ್ಸ್ ಪ್ರಕಟಣೆಯ ಮಹತ್ವ ಮತ್ತು ಇದರಲ್ಲಿ ಭಾಗಿಯಾಗಿರುವ ಮೂರು ದೇಶಗಳು ಇದಕ್ಕೆ ಸಹಿ ಹಾಕಿರುವುದು, ಈ ವರ್ಷದ ಕೊನೆಯಲ್ಲಿ ನಡೆಯ ಬಹುದಾದ ಬೆಳವಣಿಗೆಗಳಲ್ಲಿ ಈ ಸಭೆಯನ್ನು ಪ್ರಮುಖ ಅಂಶವನ್ನಾಗಿ ಮಾಡಿದೆ. ಇದಕ್ಕೂ ಮುನ್ನ, ಮೇ ತಿಂಗಳಲ್ಲಿ ಇರಾನ್ ಸಂಘರ್ಷದ ಕುರಿತು ತೀವ್ರ ಭಿನ್ನಾಭಿಪ್ರಾಯಗಳು ವ್ಯಕ್ತವಾಗಿದ್ದರಿಂದ ಬ್ರಿಕ್ಸ್ ವಿದೇಶಾಂಗ ಸಚಿವರ ಸಭೆಯಲ್ಲಿ ಜಂಟಿ ಹೇಳಿಕೆಯನ್ನು ಹೊರಡಿಸಲು ಸಾಧ್ಯವಾಗಿರಲಿಲ್ಲ. ಈ ಬಾರಿ, ಹಲವು ದಿನಗಳ ಸಂಧಾನದ ನಂತರ 11 ಸದಸ್ಯರ ಒಕ್ಕೂಟವನ್ನು ಒಮ್ಮತದತ್ತ ಕೊಂಡೊಯ್ಯುವಲ್ಲಿ ಭಾರತ ಯಶಸ್ವಿಯಾಗಿದೆ.

ಯುಎಇ ಯುವರಾಜನೊಂದಿಗಿನ ಪ್ರಧಾನಿ ನರೇಂದ್ರ ಮೋದಿ ಅವರ ಪ್ರತ್ಯೇಕ ಸಭೆಯು ದೇಶಗಳ ನಡುವಿನ ಸೇತುವೆಯಾಗಿ ಭಾರತದ ಪಾತ್ರವನ್ನು ಪುನರುಚ್ಚರಿಸಿದೆ. ಪ್ರಸ್ತುತ ಅಸ್ಥಿರ ಪಶ್ಚಿಮ ಏಷ್ಯಾದ ವಾತಾವರಣದಲ್ಲಿ ಶಾಂತಿ, ಸ್ಥಿರತೆ ಮತ್ತು ಸಮೃದ್ಧಿಗೆ ಪ್ರಬಲ ಭಾರತ–ಯುಎಇ ಸಹಭಾಗಿತ್ವ ಅತ್ಯಂತ ಮುಖ್ಯ ಎಂದು ಮೋದಿ ಬಣ್ಣಿಸಿದ್ದಾರೆ.

> ಆದಾಗ್ಯೂ, ಬ್ರಿಕ್ಸ್ ಇರಾನ್–ಅಮೆರಿಕ ಅಥವಾ ವಿಶಾಲ ಗಲ್ಫ್ ಸಂಘರ್ಷದಲ್ಲಿ ಅಧಿಕೃತ ಮಧ್ಯಸ್ಥಿಕೆ ವಹಿಸಿಲ್ಲ ಎಂಬುದನ್ನು ಅರ್ಥಮಾಡಿಕೊಳ್ಳುವುದು ಮುಖ್ಯವಾಗಿದೆ. ಇಲ್ಲಿ ಯಾವುದೇ ಬ್ರಿಕ್ಸ್ ಕದನ ವಿರಾಮ ವ್ಯವಸ್ಥೆ ಜಾರಿಗೊಳಿಸುವ ಒಪ್ಪಂದ ಅಥವಾ ಮಾತುಕತೆಯ ಪರಿಹಾರ ಸೂತ್ರ ರೂಪುಗೊಂಡಿಲ್ಲ. ಹಾಗೆಯೇ ಇರಾನ್–ಯುಎಇ ಸಭೆಯು ಹಡಗು ರಕ್ಷಣೆ ಅಥವಾ ಇಂಧನ ಭದ್ರತೆಯ ಕುರಿತು ಯಾವುದೇ ಸಾರ್ವಜನಿಕ ಒಪ್ಪಂದಕ್ಕೆ ಬಂದಿಲ್ಲ. ಆದಾಗ್ಯೂ, ಟೆಹ್ರಾನ್ ಮತ್ತು ಅಬುಧಾಬಿ ಅತ್ಯುನ್ನತ ಮಟ್ಟದಲ್ಲಿ ಭೇಟಿಯಾಗುವ ಜೊತೆಗೆ ಸಂಯಮಕ್ಕೆ ಕರೆ ನೀಡುವ ಬ್ರಿಕ್ಸ್ ಹೇಳಿಕೆಯನ್ನು ಬೆಂಬಲಿಸಿರುವುದು, ಪ್ರಾದೇಶಿಕ ಸರ್ಕಾರಗಳು ಸಂಘರ್ಷ ವಿಸ್ತರಿಸುವುದನ್ನು ತಡೆಯುವಲ್ಲಿ ಆಸಕ್ತಿ ಹೊಂದಿವೆ ಎಂಬುದರ ಸಂಕೇತವಾಗಿದೆ.

# ಬಾಂಗ್ಲಾದಲ್ಲಿ ದಡಾರ ಸಾಂಕ್ರಾಮಿಕ ಲಸಿಕಾ ಅಭಿಯಾನದ ಬಗ್ಗೆ ಕಳವಳ

**ನವದೆಹಲಿ, ಸೆ.13:** ಇತ್ತೀಚಿನ ವರ್ಷಗಳಲ್ಲಿ ಬಾಂಗ್ಲಾದೇಶವು ತೀವ್ರವಾದ ಸಾರ್ವಜನಿಕ ಆರೋಗ್ಯ ಬಿಕ್ಕಟ್ಟನ್ನು ಎದುರಿಸುತ್ತಿದೆ. ವ್ಯಾಪಕವಾಗಿ ಹರಡಿರುವ ದಡಾರ (measles) ಸಾಂಕ್ರಾಮಿಕವು ದೇಶದ ಲಸಿಕಾಕರಣ ಮತ್ತು ಆರೋಗ್ಯ ವ್ಯವಸ್ಥೆಗಳಲ್ಲಿನ ಗಂಭೀರ ನ್ಯೂನತೆಗಳನ್ನು ಬಯಲಿಗೆಳೆದಿದೆ ಎಂದು ವರದಿಯೊಂದು ತಿಳಿಸಿದೆ. 'ಡೈಲಿ ಸ್ಟಾರ್' ಪತ್ರಿಕೆಯು ಆರೋಗ್ಯ ಸೇವೆಗಳ ಮಹಾನಿರ್ದೇಶನಾಲಯದ ದತ್ತಾಂಶವನ್ನು ಉಲ್ಲೇಖಿಸಿ ಪ್ರಕಟಿಸಿದ ವರದಿಯ ಪ್ರಕಾರ, ಮಾರ್ಚ್ 15 ರಿಂದೀಚೆಗೆ 1.89 ಲಕ್ಷಕ್ಕೂ ಹೆಚ್ಚು ಜನರು (ಹೆಚ್ಚಾಗಿ ಮಕ್ಕಳು) ದಡಾರ ಅಥವಾ ದಡಾರದಂತಹ ರೋಗಲಕ್ಷಣಗಳಿಂದ ಬಳಲುತ್ತಿದ್ದಾರೆ. ಕನಿಷ್ಠ 1.49 ಲಕ್ಷ ರೋಗಿಗಳಿಗೆ ಆಸ್ಪತ್ರೆಗೆ ದಾಖಲಾಗುವ ಅಗತ್ಯವಿತ್ತು ಮತ್ತು ದೃಢಪಟ್ಟ ಹಾಗೂ ಶಂಕಿತ ಪ್ರಕರಣಗಳಿಂದಾಗಿ ಸಾವನ್ನಪ್ಪಿದವರ ಸಂಖ್ಯೆ 1,012 ಕ್ಕೆ ತಲುಪಿದೆ ಎಂದು ವರದಿ ಹೇಳಿದೆ.

ದೃಢಪಟ್ಟ ಸೋಂಕುಗಳು/ಸಾವುಗಳು ಮತ್ತು ಶಂಕಿತ ಪ್ರಕರಣಗಳ ನಡುವೆ ವ್ಯತ್ಯಾಸಗಳಿವೆ ಎಂದು ಆರೋಗ್ಯ ತಜ್ಞರು ಎಚ್ಚರಿಸಿದ್ದಾರೆ. ಆದಾಗ್ಯೂ, ಲಸಿಕೆಯಿಂದ ಸುಲಭವಾಗಿ ತಡೆಗಟ್ಟಬಹುದಾದ ಕಾಯಿಲೆಯಿಂದಾಗಿ ಅಸಹಜ ಸಂಖ್ಯೆಯಲ್ಲಿ ಮಕ್ಕಳು ಸಾವನ್ನಪ್ಪುತ್ತಿದ್ದಾರೆ ಎಂದು ವರದಿ ತಿಳಿಸಿದೆ.

ಈ ಸಾಂಕ್ರಾಮಿಕವು ಬಾಂಗ್ಲಾದೇಶದ ಲಸಿಕಾಕರಣ ಕಾರ್ಯಕ್ರಮದ ಬಗ್ಗೆ ಮತ್ತೆ ಕಳವಳವನ್ನು ಹುಟ್ಟುಹಾಕಿದೆ; ಈ ಕಾರ್ಯಕ್ರಮವು ಅಹಿಂದೆ ಅಭಿವೃದ್ಧಿಶೀಲ ರಾಷ್ಟ್ರಗಳ ಪೈಕಿ ಒಂದು ಪ್ರಮುಖ ಯಶೋಗಾಥೆಯೆಂದು ಪರಿಗಣಿಸಲ್ಪಟ್ಟಿತ್ತು. ಸರ್ಕಾರದ ನೇತೃತ್ವ, ಸ್ವಯಂಸೇವಾ ಸಂಸ್ಥೆಗಳ ಭಾಗವಹಿಸುವಿಕೆ ಮತ್ತು ಸಮುದಾಯದ ಕ್ರಿಯಾಶೀಲತೆಯ ಮೂಲಕ ಸಾಧಿಸಿದ ಹೆಚ್ಚಿನ ಲಸಿಕಾಕರಣ ವ್ಯಾಪ್ತಿಯು, ಹಿಂದೆ ಲಕ್ಷಾಂತರ ಮಕ್ಕಳನ್ನು ತಡೆಗಟ್ಟಬಹುದಾದ ರೋಗಗಳಿಂದ ರಕ್ಷಿಸಲು ಸಹಾಯ ಮಾಡಿತ್ತು ಎಂದು ವರದಿ ಉಲ್ಲೇಖಿಸಿದೆ.

ಪ್ರಸ್ತುತ ಬಿಕ್ಕಟ್ಟಿಗೆ ಅನೇಕ ಅಂಶಗಳು ಕಾರಣವಾಗಿವೆ ಎಂದು ಅದು ತೋರಿಸಿದೆ. "ಕೋವಿಡ್–19 ದಿನನಿತ್ಯದ ಲಸಿಕಾಕರಣಕ್ಕೆ ಅಡ್ಡಿಪಡಿಸಿತು. ಕೆಲವು ಮಕ್ಕಳನ್ನು ಮತ್ತೆ ವ್ಯವಸ್ಥೆಯ ವ್ಯಾಪ್ತಿಗೆ ತರಲೇ ಇಲ್ಲ," ಎಂದು 'ಡೈಲಿ ಸ್ಟಾರ್' ವರದಿ ಮಾಡಿದೆ.



"ತಲುಪಲು ಕಷ್ಟಕರವಾದ ಪ್ರದೇಶಗಳ ಜನರು, ನಗರದ ಕೊಳೆಗೇರಿ ನಿವಾಸಿಗಳು, ವಲಸಿಗರು ಮತ್ತು ಇತರ ಅಂಚಿನಲ್ಲಿರುವ ಸಮುದಾಯಗಳು ವಿಶೇಷವಾಗಿ ದುರ್ಬಲ ಸ್ಥಿತಿಯಲ್ಲಿದ್ದವು. ದಿನನಿತ್ಯದ ಪರಿಶೀಲನೆ ಮತ್ತು 'ಶೂನ್ಯ–ಡೋಸ್' (ಯಾವುದೇ ಲಸಿಕೆ ಪಡೆಯದ) ಮಕ್ಕಳ ಗುರುತಿಸುವಿಕೆ ಅಸಮರ್ಪಕವಾಗಿದ್ದವು. ಈ ನ್ಯೂನತೆಗಳು ಒಂದರ ಮೇಲೊಂದು ಸೇರಿಕೊಂಡವು," ಎಂದು ಅದು ಸೇರಿಸಿದೆ.

ಅಧಿಕಾರಿಗಳು ಬೃಹತ್ ಪ್ರಮಾಣದ ತುರ್ತು ಲಸಿಕಾಕರಣ ಅಭಿಯಾನದೊಂದಿಗೆ ಪ್ರತಿಕ್ರಿಯಿಸಿದರು ಮತ್ತು ಸುಮಾರು 1.97 ಕೋಟಿ ಮಕ್ಕಳಿಗೆ ಲಸಿಕೆ ನೀಡಲಾಗಿದೆ ಎಂದು ವರದಿ ಮಾಡಿದರು.

ಆದಾಗ್ಯೂ, ನಂತರದ ವಿಟಮಿನ್–ಎ ಅಭಿಯಾನವು ಅದೇ ವಯಸ್ಸಿನ ಗುಂಪಿನ ಸುಮಾರು 2.23 ಕೋಟಿ ಮಕ್ಕಳನ್ನು ತಲುಪಿದಾಗ ಜನಸಂಖ್ಯೆಯ ಅಂದಾಜಿನ ನಿಖರತೆಯ ಬಗ್ಗೆ ಪ್ರಶ್ನೆಗಳು ಉದ್ಭವಿಸಿದವು. ವರದಿಯ ಪ್ರಕಾರ, ದಡಾರ ಲಸಿಕೆಗಾಗಿ ಗುರಿಪಡಿಸಲಾದ ಮೂಲ ಜನಸಂಖ್ಯೆಯನ್ನು ಕಡಿಮೆ ಅಂದಾಜು ಮಾಡಲಾಗಿತ್ತು ಎಂಬುದನ್ನು ಅಧಿಕಾರಿಗಳು ಒಪ್ಪಿಕೊಂಡರು. ಜೂನ್ ಮತ್ತು ಜುಲೈನಲ್ಲಿ ಸೋಂಕುಗಳು ತಾತ್ಕಾಲಿಕವಾಗಿ ಕಡಿಮೆಯಾಗಿದ್ದರೂ, ಆಗಸ್ಟ್‌ನಲ್ಲಿ ದಡಾರ ಪ್ರಕರಣಗಳು ಮತ್ತೆ ಹೆಚ್ಚಾದವು. ಈ ಪರಿಸ್ಥಿತಿಯನ್ನು ತಡೆಗಟ್ಟಬಹುದಾದ ಸಾರ್ವಜನಿಕ ಆರೋಗ್ಯ ವೈಫಲ್ಯ ಮತ್ತು ವಿಶಾಲವಾಗಿ ಆಡಳಿತಾತ್ಮಕ ವೈಫಲ್ಯ ಎಂದು ಬಣ್ಣಿಸಿರುವ ವರದಿಯು, ಇಂತಹ ಬಿಕ್ಕಟ್ಟು ಮರುಕಳಿಸದಂತೆ ನೋಡಿಕೊಳ್ಳಲು ಸಮಗ್ರ ತನಿಖೆ ಮತ್ತು ನವೀಕೃತ ಪ್ರಯತ್ನಗಳಿಗೆ ಕರೆ ನೀಡಿದೆ.

# ಸೂಕ್ತವಾಗಿ ನಿರ್ವಹಿಸದಿದ್ದರೆ ಎಐ ಅಪಾಯಕಾರಿ: ಒಬಾಮಾ ಎಚ್ಚರಿಕೆ– ಮೇಲ್ವಿಚಾರಣೆಗೆ ಆದ್ಯತೆ ನೀಡಲು ಡೆಮಾಕ್ರಟ್‌ಗಳಿಗೆ ಕರೆ

**ಬ್ರಿಟನ್, ಸೆ.13:** ಕೃತಕ ಬುದ್ಧಿಮತ್ತೆ (ಎಐ) ತಂತ್ರಜ್ಞಾನವನ್ನು ಸರಿಯಾಗಿ ನಿರ್ವಹಿಸದಿದ್ದರೆ ಅದು "ಅಪಾಯಕಾರಿ" ಆಗುವ ಸಾಮರ್ಥ್ಯ ಹೊಂದಿದೆ ಎಂದು ಮಾಜಿ ಅಧ್ಯಕ್ಷ ಬರಾಕ್ ಒಬಾಮಾ ಎಚ್ಚರಿಕೆ ನೀಡಿದ್ದು, ಇದರ ಮೇಲ್ವಿಚಾರಣೆಗೆ ಡೆಮಾಕ್ರಾಟ್‌ಗಳು ಆದ್ಯತೆ ನೀಡುವ ಅಗತ್ಯವಿದೆ ಎಂದು ಒತ್ತಿ ಹೇಳಿದ್ದಾರೆ ಎಂದು ವರದಿಯಾಗಿದೆ. ಎಐ ನೀತಿಗೆ ಸಂಬಂಧಿಸಿದಂತೆ ಸ್ಪಷ್ಟ ಚೌಕಟ್ಟನ್ನು ರೂಪಿಸುವುದರ ಪ್ರಾಮುಖ್ಯತೆಯನ್ನು ಒಬಾಮ ಪ್ರತಿಪಾದಿಸಿದ್ದಾರೆ. ದಿ ನ್ಯೂಯಾರ್ಕ್ ಟೈಮ್ಸ್ ವರದಿಯ ಪ್ರಕಾರ, ಮುಂಬರುವ ಮಧ್ಯಂತರ ಚುನಾವಣೆಯಲ್ಲಿ ಡೆಮಾಕ್ರಟ್‌ಗಳು ಹೌಸ್ ಆಫ್ ರೆಪ್ರೆಸೆಂಟೇಟಿವ್ಸ್‌ನಲ್ಲಿ ಮತ್ತೆ ಅಧಿಕಾರಕ್ಕೆ ಬಂದರೆ ಎಐ ಕುರಿತ ಸಾರ್ವಜನಿಕ ಚರ್ಚೆಗಳಿಗೆ ಸ್ಪಷ್ಟ ರೂಪುರೇಷೆ ನೀಡಬೇಕು ಎಂದು ಗುರುವಾರ ನಡೆದ ಖಾಸಗಿ ನಿಧಿ ಸಂಗ್ರಹಣೆ ಕಾರ್ಯಕ್ರಮದಲ್ಲಿ ಒಬಾಮ ಹೇಳಿದ್ದಾರೆ. ಅವರು ಹೌಸ್ ಮೈನಾರಿಟಿ ನಾಯಕ ಹಕೀಮ್ ಜೆಫ್ರೈಸ್ (ಡಿ–ನ್ಯೂಯಾರ್ಕ್) ಅವರಿಗೆ ಈ ಉದ್ಯಮದ ಮೇಲ್ವಿಚಾರಣೆಯ ನೇತೃತ್ವ ವಹಿಸಲು ಸಲಹೆ ನೀಡಿದ್ದಾರೆ. ಅಲ್ಲದೆ, 2028ರ ಅಧ್ಯಕ್ಷೀಯ ಅಭ್ಯರ್ಥಿಗಳಿಗೆ ಎಐ ಒಂದು ಪ್ರಮುಖ ವಿಷಯವಾಗಬೇಕು ಎಂದು ಮಾಜಿ ಅಧ್ಯಕ್ಷರು ಸೂಚಿಸಿದ್ದಾರೆ.

**ಎಐ ಅಪಾಯಗಳ ಬಗ್ಗೆ ಹೆಚ್ಚುತ್ತಿರುವ ಕಳವಳಗಳು:**

ಎಐ ತಂತ್ರಜ್ಞಾನದ ಅಭಿವೃದ್ಧಿಯ ವೇಗವನ್ನು ಕಡಿಮೆ ಮಾಡಬೇಕು ಎಂದು ಕೆಲ ಕೈಗಾರಿಕಾ ಮುಖಂಡರು ವಾದಿಸುತ್ತಿರುವ ಬೆನ್ನಲ್ಲೇ ಒಬಾಮ ಅವರಿಂದ ಈ ಹೇಳಿಕೆ ಬಂದಿದೆ. ಮ್ಯಾನ್‌ಹಟನ್‌ನಲ್ಲಿ ಹೌಸ್ ಡೆಮಾಕ್ರಾಟ್‌ಗಳ ಪ್ರಚಾರ ವಿಭಾಗ ಆಯೋಜಿಸಿದ್ದ ಮುಚ್ಚಿದ ಬಾಗಿಲಿನ ಕಾರ್ಯಕ್ರಮದಲ್ಲಿ ಜೆಫ್ರೈಸ್



ಅವರೊಂದಿಗೆ ಒಬಾಮ ಈ ಮಾತುಗಳನ್ನುನ್ನಾಡಿದ್ದಾರೆ. ಒಬಾಮ ಅವರ ಈ ಸಲಹೆಗಳು ಎಐ ಅನ್ನು ಒಂದು ರಾಜಕೀಯ ವಿಷಯವಾಗಿ ನೋಡುವ ಅವರ ಹೆಚ್ಚುತ್ತಿರುವ ಆಸಕ್ತಿಯನ್ನು ತೋರಿಸುತ್ತವೆ. ಅಲ್ಲದೆ ಈ ವಿಷಯದಲ್ಲಿ ಡೆಮಾಕ್ರಟ್‌ಗಳಿಗೆ ಮಾರ್ಗದರ್ಶಕರಾಗಿ ಅವರು ಹೊರಹೊಮ್ಮಿದ್ದಾರೆ. ಮಾಜಿ ಅಧ್ಯಕ್ಷ ಟ್ರಂಪ್ ಅವರು ಎಐ ಅಪಾಯಗಳನ್ನು ಹಗುರವಾಗಿ ಪರಿಗಣಿಸಿರುವುದಕ್ಕೆ ಪ್ರತಿಯಾಗಿ, ಡೆಮಾಕ್ರಾಟ್‌ಗಳು ಈ ಪ್ರಮುಖ ವಿಚಾರದಲ್ಲಿ ತಮ್ಮದೇ ಆದ ಪ್ರತ್ಯೇಕ ನಿಲುವನ್ನು ತಳೆಯಲು ಒಬಾಮ ಅವರ ಈ ಕರೆ ಅವಕಾಶ ಮಾಡಿಕೊಡುತ್ತದೆ.

**ಎಐ ಅಭಿವೃದ್ಧಿ ತಗ್ಗಿಸಲು ಕೈಗಾರಿಕಾ ನಾಯಕರ ಬೆಂಬಲ:**

ನಿಯಂತ್ರಣವಿಲ್ಲದ ಎಐ ಅಭಿವೃದ್ಧಿಯಅಪಾಯಗಳ ಬಗ್ಗೆ ಉದ್ಯಮದ ಪ್ರಮುಖ ನಾಯಕರಿಂದಲೇ ಎಚ್ಚರಿಕೆಗಳು ವ್ಯಕ್ತವಾಗುತ್ತಿರುವುದು ಒಬಾಮ ಅವರ ಈ ಕರೆಯನ್ನು ಬೆಂಬಲಿಸುವಂತಿದೆ. ಸ್ಪೇಸ್‌ಎಕ್ಸ್ ಮತ್ತು ಟೆಸ್ಲಾ ಸಿಇಒ ಇಲಾನ್ ಮಸ್ಕ್ ಅವರು ಎಐ ಕುರಿತ ತಮ್ಮ ಕಳವಳವನ್ನು ಪುನರುಚ್ಚರಿಸಿದ್ದು, ಇದು ಹಿಂದಿನ ತಾಂತ್ರಿಕ ಆವಿಷ್ಕಾರಗಳಿಗಿಂತ ಹೆಚ್ಚು ಅಪಾಯಕಾರಿ ಎಂದು ಬಣ್ಣಿಸಿದ್ದಾರೆ. ಏತನ್ಮಧ್ಯೆ, ಆಂಥ್ರೋಪಿಕ್ ಸಿಇಒ ಡಾರಿಯೋ ಅಮೋಡೆ ಅವರು ಉದ್ಯಮದಾದ್ಯಂತ ಎಐ ಅಭಿವೃದ್ಧಿಯ ವೇಗವನ್ನು ಕಡಿಮೆ ಮಾಡಲು ಕರೆ ನೀಡಿದ್ದು, ಸಂಘಟಿತ ತಡೆ ಇಲ್ಲದಿದ್ದರೆ ಎಐ ವಿನಾಶಕಾರಿ ಅಪಾಯಗಳನ್ನು ತಂದೊಡ್ಡಬಹುದು ಎಂದು ಎಚ್ಚರಿಸಿದ್ದಾರೆ. ಈ ಅಭಿಪ್ರಾಯವನ್ನು ಅವರ ಸ್ಪರ್ಧಿ, ಓಪನ್‌ಎಐ ಸಿಇಒ ಸ್ಯಾಮ್ ಆಲ್ಟ್‌ಮನ್ ಕೂಡ ಬೆಂಬಲಿಸಿದ್ದಾರೆ. ಮಾಜಿ ವೈಟ್ ಹೌಸ್ ಎಐ ಮತ್ತು ಕ್ರಿಪ್ಟೋ ಉಸ್ತುವಾರಿ ಡೇವಿಡ್ ಸ್ಯಾಕ್ಸ್ ಅವರು, ಓಪನ್‌ಎಐ ಮತ್ತು ಆಂಥ್ರೋಪಿಕ್‌ನಂತಹ ಪ್ರಮುಖ ಎಐ ಕಂಪನಿಗಳು ದೊಡ್ಡ ಅಪಾಯಗಳಿವೆ ಎಂದು ಭಾವಿಸಿದರೆ, ತಾವೇ ಸ್ವತಃ ಎಐ ಅಭಿವೃದ್ಧಿಯ ವೇಗವನ್ನು ಕಡಿಮೆ ಮಾಡುವ ಅಧಿಕಾರ ಹೊಂದಿವೆ ಎಂದು ಒತ್ತಿಹೇಳಿದ್ದಾರೆ.




